ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 128 ಸಂಚಿಕೆ- 128 | PAGE-8 ಪುಟ-8 | ಶನಿವಾರ 28.06.2025 | RS.2/- ಬೆಲೆ 2/-

# ಪಕ್ಷದಲ್ಲಿ ಆಂತರಿಕ ಜಗಳವಿಲ್ಲ:ಸಿಎಂ

ಮಲ್ಲಮ್ಮನುಡಿವಾರ್ತೆ ಬೆಂಗಳೂರು, ಜೂ. 27: ಕಾಂಗ್ರೆಸ್ ಪಕ್ಷದಲ್ಲಿ ಆಂತರಿಕ ಕದನ, ಒಳ ಜಗಳ ನಡೆದಿದೆ ಎಂಬ ವರದಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ತಳ್ಳಿ ಹಾಕಿದ್ದಾರೆ.

ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಜಯಂತಿ ಅಂಗವಾಗಿ ವಿಧಾನಸೌಧದ ಮುಂಭಾಗದಲ್ಲಿರುವ ಕೆಂಪೇಗೌಡರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಪುಷ್ಪನಮನ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದಲ್ಲಿ ಆಂತರಿಕ ಜಗಳವಿಲ್ಲ . ಎಲ್ಲಿದೆ ಜಗಳ ತೋರಿಸಿ ಎಂದು ಮಾಧ್ಯಮದವರನ್ನೇ ಪ್ರಶ್ನಿಸಿದರು.

ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರು ಸೆಪ್ಟೆಂಬರ್‌ನಲ್ಲಿ ರಾಜ್ಯದಲ್ಲಿ ರಾಜಕೀಯ ಕ್ರಾಂತಿ ಆಗುತ್ತದೆ ಎಂದು ಹೇಳಿದ್ದಾರಲ್ಲ ಎಂಬ ಪ್ರಶ್ನೆಗೆ, ಸಚಿವ ರಾಜಣ್ಣ ಅವರು ರಾಜ್ಯ ರಾಜಕೀಯದಲ್ಲಿ ಬೆಳವಣಿಗೆ ಆಗಬಹುದು ಎಂದು ಹೇಳಿದ್ದಾರೆ ಅಷ್ಟೆ. ಇಂತಹದ್ದೆ ಆಗುತ್ತದೆ ಎಂದು ಅವರು ಹೇಳಿಲ್ಲ. ನೀವೆಲ್ಲಾ ಏನೇನೋ ಊಹೆ ಮಾಡಿಕೊಂಡು ವರದಿ ಮಾಡುವುದು ಸರಿಯಲ್ಲ ಎಂದರು.

ರಾಜಣ್ಣ ಅವರ ಹೇಳಿಕೆಯನ್ನು ವಿಶ್ಲೇಷಿಸಲು ನಾನು ಪತ್ರಕರ್ತನಲ್ಲ ಎಂದು ಹೇಳಿದ ಮುಖ್ಯಮಂತ್ರಿಗಳು, ರಾಜಣ್ಣ ಹೇಳಿಕೆಯನ್ನು ನಿರ್ಲಕ್ಷಿಸಿ ಎಂದರು.

ಸಚಿವ ರಾಜಣ್ಣ ಅವರ ಹೇಳಿಕೆಯನ್ನು ಹೇಗೆ ಅರ್ಥೈಸಿಕೊಳ್ಳಬೇಕು ಎಂಬ ಪ್ರಶ್ನೆಗೂ ಮುಖ್ಯಮಂತ್ರಿಗಳು ರಾಜಣ್ಣ ಅವರ ಹೇಳಿಕೆ ನಿರ್ಲಕ್ಷಿಸಲು ಸೂಕ್ತವಾಗಿದೆ. ಅದನ್ನು ನಿರ್ಲಕ್ಷಿಸುವುದೇ ಒಳ್ಳೆಯದು ಎಂದು ಪುನರುಚ್ಚರಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಾಂಗ್ರೆಸ್ ಶಾಸಕರುಗಳೇ ಅಸಮಾಧಾನ, ಅತೃಪ್ತಿ ವ್ಯಕ್ತಪಡಿಸಿದ್ದರು. ನಂತರ ನಿನ್ನೆ ಸಚಿವ ರಾಜಣ್ಣ ಅವರು ಸೆಪ್ಟೆಂಬರ್‌ನಲ್ಲಿ ರಾಜ್ಯದಲ್ಲಿ ರಾಜಕೀಯ ಕ್ರಾಂತಿ ಆಗುತ್ತದೆ ಎಂದು ಹೇಳಿಕೆ ನೀಡಿದ್ದು ಸುದ್ದಿಗೆ ಗ್ರಾಸವಾಗಿ, ನಾನಾ ಚರ್ಚೆಗಳಿಗೆ ಎಡೆ ಮಾಡಿತ್ತು.

ಈ ಬಗ್ಗೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ಪಷ್ಟನೆ ನೀಡವ ಮೂಲಕ ಯಾವ ಬೆಳವಣಿಗೆಗಾಳಬೇಕು ಎಂಬುದುನ್ನು ರಾಜಣ್ಣ ಹೇಳಿಲ್ಲ. ಅದನ್ನು ನಿರ್ಲಕ್ಷಿಸಿ. ರಾಜಣ್ಣ ಅವರ ಹೇಳಿಕೆಗಳ ಬಗೆಗಿನ ಚರ್ಚೆಗಳಿಗೆ ತೆರೆ ಎಳೆಯುವ ಯತ್ನ ನಡೆಸಿ, ರಾಜಣ್ಣ ಹೇಳಿಕೆಯನ್ನು ನಿರ್ಲಕ್ಷಿಸಿ ಎಂದು 2–3 ಬಾರಿ ಪುನರುಚ್ಛರಿಸಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರುಗಳಾದ ಡಾ.ಹೆಚ್.ಸಿ. ಮಹದೇವಪ್ಪ, ಶಿವರಾಜ್ ತಂಗಡಗಿ ಮತ್ತಿತರರು ಮುಖ್ಯಮಂತ್ರಿಗಳ ಜತೆ ಇದ್ದರು.



**ಜಿಲ್ಲಾವಾರು ಶಾಸಕರ ಸಭೆಗೆ ಚಿಂತನೆ**

ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಸ್ವಪಕ್ಷೀಯ ಶಾಸಕರುಗಳೇ ಅಸಮಾಧಾನ, ಅತೃಪ್ತಿಯನ್ನು ಬಹಿರಂಗವಾಗಿ ವ್ಯಕ್ತಪಡಿಸಿ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಸಿಗುತ್ತಿಲ್ಲ. ಅನುದಾನ ಮತ್ತು ಬಡವರಿಗೆ ಮನೆಗಳನ್ನು ಪಡೆಯಲು ಹಣ ನೀಡಬೇಕು ಎಂದು ಹೇಳಿಕೆ ನೀಡಿರುವ ಬೆನ್ನಲ್ಲೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಶಾಸಕರ ಅತೃಪ್ತಿ, ಅಸಮಾಧಾನ ಶಮನಕ್ಕೆ ಮುಂದಾಗಿದ್ದು ಜಿಲ್ಲಾವಾರು ಶಾಸಕರ ಸಭೆ ಕರೆದು ಅಹವಾಲು ಆಲಿಸಲು ಮುಂದಾಗಿದ್ದಾರೆ.

ಕಾಂಗ್ರೆಸ್ ಶಾಸಕರಲ್ಲಿನ ಅತೃಪ್ತಿ, ಅಸಮಾಧಾನ ಸರಿಪಡಿಸಿ. ಯಾವುದೇ ಶಾಸಕರು ಬಹಿರಂಗವಾಗಿ ರಾಜ್ಯ ಸರ್ಕಾರದ ವಿರುದ್ಧ ಹೇಳಿಕೆ ನೀಡುವುದಕ್ಕೆ ಕಡಿವಾಣ ಹಾಕಿ ಎಂದು ಕಾಂಗ್ರೆಸ್ ಹೈಕಮಾಂಡ್ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಜಿಲ್ಲಾವಾರು ಕಾಂಗ್ರೆಸ್ ಶಾಸಕರನ್ನು ಕರೆದು ಅವರ ಜತೆ ಸಭೆ ನಡೆಸಿ ಅವರ ಸಮಸ್ಯೆಗಳನ್ನು ಚರ್ಚಿಸುವ ತೀರ್ಮಾನ ತೆಗೆದುಕೊಂಡಿದ್ದಾರೆ ಎಂದು ಮುಖ್ಯಮಂತ್ರಿಗಳ ಆಪ್ತ ಮೂಲಗಳು ಹೇಳಿವೆ.

ಬರುವ ಜುಲೈ 1 ರಿಂದ ಬೆಂಗಳೂರಿಲ್ಲಿ ಜಿಲ್ಲಾವಾರು ಶಾಸಕರ ಸಭೆ ಕರೆದು ಅವರ ಸಮಸ್ಯೆಗಳನ್ನು ಚರ್ಚಿಸಿ ಸಮಸ್ಯೆಗಳಿಗೆ ಮದ್ದು ಅರೆಯುವ ಕೆಲಸ ಮಾಡಲಿದ್ದಾರೆ.

ಜಿಲ್ಲಾವಾರು ಶಾಸಕರ ಸಭೆಯ ಸಂದರ್ಭದಲ್ಲಿ ಆಯಾ ಜಿಲ್ಲೆಗಳ ಉಸ್ತುವಾರಿ ಸಚಿವರನ್ನೂ ಕರೆದು ಶಾಸಕರ ಕೆಲಸ ಮಾಡಿಕೊಡುವಂತೆ ಮುಖ್ಯಮಂತ್ರಿಗಳು ತಾಕೀತು ಮಾಡುವರು ಎಂದು ಹೇಳಲಾಗಿದೆ.

ವಸತಿ ಇಲಾಖೆಯಲ್ಲಿ ಮನೆಗಳನ್ನು ಪಡೆಯಲು ಹಣ ನೀಡಬೇಕು ಎಂದು ಕಾಂಗ್ರೆಸ್‌ನ ಹಿರಿಯ ಶಾಸಕ ಬಿ.ಆರ್. ಪಾಟೀಲ್ ಕೆಲ ದಿನಗಳ ಹಿಂದೆ ಹೇಳಿಕೆ ನೀಡಿದ್ದರು. ಇವರ ಜತೆಗೆ ಶಾಸಕರುಗಳಾದ ರಾಜು ಕಾಗೆ, ಎನ್. ವೈ.ಗೋಪಾಲಕೃಷ್ಣ ಇವರುಗಳು ಸಹ ಕಾಂಗ್ರೆಸ್ ಸರ್ಕಾರದಲ್ಲಿ ಅನುದಾನ ಸಿಗುತ್ತಿಲ್ಲ, ಅಧಿಕಾರಿಗಳು ನಮ್ಮ ಮಾತು ಕೇಳುತ್ತಿಲ್ಲ.

ಪಾಟೀಲ್ ಅವರು ಹೇಳಿರುವುದು ಸತ್ಯವಿದೆ ಎಂದು ಬಹಿರಂಗವಾಗಿ ಹೇಳಿಕೆ ನೀಡಿದ್ದರು.

ಈ ಹೇಳಿಕೆಗಳು ಸರ್ಕಾರಕ್ಕೆ ಮುಜುಗರ ತಂದಿದ್ದು. ಪಕ್ಷದ ಹೈಕಮಾಂಡ್ ಸಹ ಶಾಸಕರ ಈ ಹೇಳಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ಶಾಸಕರ ಸಮಸ್ಯೆಗಳನ್ನು ಆಲಿಸಿ ಎಂದು ಸೂಚನೆ ನೀಡಿತ್ತು.

ಇದಾದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿ ಪ್ರವಾಸದಿಂದ ವಾಪಸ್ಸಾದ ತಕ್ಷಣವೇ ಶಾಸಕರಾದ ಬಿ.ಆರ್. ಪಾಟೀಲ್, ರಾಜು ಕಾಗೆ ಇವರುಗಳನ್ನು ತಮ್ಮ ಮನೆಗೆ ಕರೆಸಿಕೊಂಡು ಮಾತನಾಡಿ ಅವರ ಸಮಸ್ಯೆಗಳನ್ನು ಆಲಿಸಿ, ಸಮಾಧಾನಪಡಿಸಿದ್ದರು .ಈಗ ಜಿಲ್ಲಾವಾರು ಶಾಸಕರ ಸಭೆ ಕ–ರೆದು ಶಾಸಕರ ಅಹವಾಲುಗಳನ್ನು ಆಲಿಸಲು ನಿರ್ಧರಿಸಿದ್ದಾರೆ.

ಜುಲೈ 1 ರಿಂದ ಪ್ರತಿದಿನ ಒಂದು ಜಿಲ್ಲೆಯ ಶಾಸಕರ ಸಭೆಗಳು ಬೆಂಗಳೂರಿನ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ನಡೆಯಲಿದೆ.

# ಪ್ರಚೋದನಾತ್ಮಕ ಪೋಸ್ಟ್ ಮಾಡುವವರ ವಿರುದ್ಧ ಕಠಿಣ ಕ್ರಮ : ಗೃಹ ಸಚಿವ ಪರಮೇಶ್ವರ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು,ಜೂ.27: ಸಾಮಾಜಿಕ ಜಾಲತಾಣದಲ್ಲಿ ಪ್ರಚೋದನಾತಕ ಪೋಸ್ಟ್ ಹಾಕುವವರ ವಿರುದ್ಧ, ಫೇಕ್ ನ್ಯೂಸ್ ಹರಡುವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಬೇಕು. ಈ ನಿಟ್ಟಿನಲ್ಲಿ ಆಕ್ಷನ್ ಪ್ಲಾನ್ ರೂಪಿಸುವಂತೆ ಗೃಹ ಸಚಿವ ಡಾ. ಜಿ.ಪರಮೇಶ್ವರ ಸೂಚನೆ ನೀಡಿದ್ದಾರೆ.

ರಾಜ್ಯ ಪೊಲೀಸ್ ಪ್ರಧಾನ ಕಚೇರಿಯಲ್ಲಿ ನಡೆಯುತ್ತಿರುವ ವಾರ್ಷಿಕ ಸಮಾವೇಶದಲ್ಲಿ ಪೊಲೀಸ್ ಪ್ರಗತಿ ಪರಿಶೀಲನೆ ವೇಳೆ ಮಾತನಾಡಿದ ಅವರು, ಕರಾವಳಿ ಭಾಗದಲ್ಲಿ ಸೌಹಾರ್ದತೆ ಕಾಪಾಡಲು ವಿವಿಧ ಧಾರ್ಮಿಕ ಸಂಘಟನೆಗಳ ಮುಖಂಡರೊಂದಿಗೆ ನಿರಂತರವಾಗಿ ಸಭೆ ನಡೆಸಬೇಕು. ದ್ವೇ?ಷ ಭಾಷಣ, ಪ್ರಚೋದನಾತಕ ಭಾಷಣ ಮಾಡುವವರ ವಿರುದ್ಧ ಮುಲಾಜಿಲ್ಲದೆ ಕ್ರಮ ಜರುಗಿಸಬೇಕು ಎಂದು ಆದೇಶಿಸಿದ್ದಾರೆ.

ಕೋಮುಗಲಭೆಯ ಕಾರಣದಿಂದ ಆ ಭಾಗದ ಜನ ನೆಮದಿಯ ಜೀವನ ನಡೆಸಲು ಸಾಧ್ಯವಾಗುತ್ತಿಲ್ಲ. ಮಕ್ಕಳನ್ನು ವಿದ್ಯಾಭ್ಯಾಸಕ್ಕಾಗಿ ಮಂಗಳೂರು ಬಿಟ್ಟು ಬೆಂಗಳೂರು, ಮೈಸೂರಿಗೆ ಕಳುಹಿಸುತ್ತಿದ್ದಾರೆ. ಕೋಮುಗಲಾಟೆಗಳು ಶಿವಮೊಗ್ಗ ಜಿಲ್ಲೆಯಲ್ಲಿ ಇರಲಿಲ್ಲ. ಈಗ ಆ ಜಿಲ್ಲೆಗೂ ವ್ಯಾಪಿಸಿದೆ. ಇದನ್ನು ಸಂಪೂರ್ಣವಾಗಿ ನಿಯಂತ್ರಿಸದಿದ್ದಲ್ಲಿ ರಾಜ್ಯದಾದ್ಯಂತ ಮುಂದುವರಿಯುತ್ತದೆ ಎಂದು ಎಚ್ಚರಿಸಿದ್ದಾರೆ.


ಇತ್ತೀ?ಚೆಗೆ ರಾಜ್ಯದಲ್ಲಿ ಅದರಲ್ಲೂ ಬೆಂಗಳೂರಿನಲ್ಲಿ ಕೆಲವು ಕಹಿಘಟನೆಗಳು ವರದಿಯಾಗುತ್ತಿವೆ. ಪುಡಿರೌಡಿಗಳ ಹಾವಳಿ ಹೆಚ್ಚಾಗಿದೆ. ಸಾಮಾಜಿಕ ಜಾಲತಾಣದಲ್ಲಿ ಇಂತಹ ಪ್ರಕರಣಗಳು ಹೆಚ್ಚು ಸದ್ದು ಮಾಡುತ್ತಿದ್ದು, ಬೆಂಗಳೂರಿಗೆ ಅಪಕೀರ್ತಿ ತರುತ್ತದೆ. ಪೊಲೀಸರು ಮುಂಜಾಗ್ರತಾ ಕ್ರಮವಾಗಿ ರೌಡಿ ಪೆರೇಡ್ ನಡೆಸಿ ಅಪರಾಧಗಳಲ್ಲಿ ಪುನರಾವರ್ತಿತವಾಗಿ ಭಾಗಿಯಾಗುವ ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ತಾಕೀತು ಮಾಡಿದರು.

ಸಾರ್ವಜನಿಕವಾಗಿ ಮಾರಕ ಆಯುಧಗಳ ಪ್ರದರ್ಶನ, ಸಾರ್ವಜನಿಕರ ನೆಮದಿಗೆ ಭಂಗ ಬರುವಂತೆ ದುರ್ವರ್ತನೆ, ರಸ್ತೆ ಜಗಳದಲ್ಲಿ ಹದ್ದುಮೀರಿದ ವರ್ತನೆಯಂತಹ ಪ್ರಕರಣಗಳನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಯಾವುದೇ ಸಂದರ್ಭದಲ್ಲೂ ಆರೋಪಿಗಳನ್ನು ಸಹಿಸಬಾರದು. ಮತ್ತೊಮ್ಮೆ ಸಾರ್ವಜನಿಕವಾಗಿ ದುರ್ವರ್ತನೆ ತೋರಿಸಲು ಹಿಂದೆಮುಂದೆ ನೋಡುವಂತಹ ವಾತಾವರಣ ಸೃಷ್ಟಿಸಬೇಕು ಎಂದು ತಿಳಿ ಹೇಳಿದರು.

ಇತ್ತೀ?ಚೆಗೆ ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ಪ್ರಕರಣವನ್ನು ಪ್ರಸ್ತಾಪಿಸಿರುವ ಸಚಿವ ಪರಮೇಶ್ವರ್, ಕಾನೂನು ಸುವ್ಯವಸ್ಥೆ ಪಾಲನೆ ವಿಚಾರದಲ್ಲಿ ಅಧಿಕಾರಿಗಳು ಸದಾ ಜಾಗೃತರಾಗಿರಬೇಕು. ಗುಪ್ತದಳ ವೈಫಲ್ಯ, ಹಿರಿಯ ಅಧಿಕಾರಿಗಳ ನಡುವಿನ ಸಮನ್ವಯತೆಯ

(2ನೇ ಪುಟ ನೋಡಿ)

# ಸ್ವಪಕ್ಷ ನಾಯಕರ ಬಗ್ಗೆ ಸಚಿವ ರೆಡ್ಡಿ ಬೇಸರ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು:ಜೂ.27:ರಾಜ್ಯದಲ್ಲಿ ಸೆಪ್ಟಂಬರ್ ಕ್ರಾಂತಿಯಾಗಲಿದೆ ಎಂದು ರಾಜಣ್ಣ ಹೇಳಿರುವುದರ ಬಗ್ಗೆ ಅವರನ್ನೇ ಕೇಳಬೇಕು ಎಂದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರು, ಪಕ್ಷದಲ್ಲಿನ ಕೆಲ ನಾಯಕರು ವಿವಿಧ ರೀತಿಯ ಹೇಳಿಕೆಗಳನ್ನು ನೀಡುವ ಮೂಲಕ ಪಕ್ಷಕ್ಕೆ ಮಾರಕವಾಗುತ್ತಿದೆ. ಆದ್ದರಿಂದ ಪಕ್ಷದ ಹಿತದೃಷ್ಟಿಯಿಂದ ಇಂತಹ ಹೇಳಿಕೆ ನೀಡುವುದು ಸರಿಯಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಸಚಿವ ರೆಡ್ಡಿಯವರು ಮಾಧ್ಯಮದವರೊಂದಿಗೆ ಮಾತನಾಡಿ, ಸರ್ಕಾರ ಹಾಗೂ ಪಕ್ಷದಲ್ಲಿರುವ ಭಿನ್ನಾಭಿಪ್ರಾಯಗಳ ಬಗ್ಗೆ ಏನಾದರೂ ಪಕ್ಷದಲ್ಲೆ ಚರ್ಚಿಸಿ ಬಗೆಹರಿಸಿಕೊಳ್ಳಬೇಕು. ಒಂದೊಂದು ರೀತಿಯ ಹೇಳಿಕೆ ನೀಡುವುದರಿಂದ ವಿಪಕ್ಷ ಹಾಗೂ ಮಾಧ್ಯಮದವರಿಗೆ ಆಹಾರವಾಗಬಾರದು ಎಂದರು.

ರಾಜ್ಯದ ಜನತೆ ಪಕ್ಷಕ್ಕೆ ಬಹುಮತ ನೀಡಿದೆ. ಪಕ್ಷ 5 ವರ್ಷ ಅಧಿಕಾರದಲ್ಲಿರಲಿದೆ. ಮುಂದಿನ ಚುನಾವಣೆಯಲ್ಲೂ ಅಧಿಕಾರಕ್ಕೆ ಬರಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ ಅವರು, ಪಕ್ಷದ ಸಚಿವರು ಹಾಗೂ ಹಿರಿಯ ನಾಯಕರು ಏನೇ ಸಮಸ್ಯೆಯಿದ್ದರೂ ಪಕ್ಷದ ಹೈಕಮಾಂಡ್ ಇದೆ ಅಲ್ಲಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಪ್ರತಿಪಕ್ಷಗಳಿಗೆ ಆಹಾರವಾಗುವಂತಹ ಹೇಳಿಕೆ ನೀಡಬಾರದು ಎಂದು ಕಿವಿಮಾತು ಹೇಳಿದರು.

# ಡಿ.ಕೆ ಶಿವಕುಮಾರ್ ನಾಡ ಪ್ರಭುವಾಗಲಿ: ನಿಶ್ಚಲಾನಂದ ಸ್ವಾಮೀಜಿ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.27: ರಾಜ್ಯದಲ್ಲಿ ಸೆಪ್ಟೆಂಬರ್ ನಲ್ಲಿ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಭಾರಿ ಚರ್ಚೆ ನಡೆಯುತ್ತಿರುವ ಸಂದರ್ಭದಲ್ಲೇ ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ನಿಶ್ಚಲಾನಂದ ಸ್ವಾಮೀಜಿ ಅವರು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ನಾಡ ಪ್ರಭುವಾಗಲಿ ಎಂದು ಹಾರೈಸಿದ್ದಾರೆ.

ಇಂದು ಡಾ. ಬಾಬು ಜಗಜೀವನರಾಂ ಭವನದಲ್ಲಿ ಆಯೋಜಿಸಿದ್ದ



ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ನಿಶ್ಚಲಾನಂದನಾಥ ಸ್ವಾಮೀಜಿ, ಡಿಕೆ ಶಿವಕುಮಾರ್ ನಾಡ

(2ನೇ ಪುಟ ನೋಡಿ)

# ಭೀಮಾ ನದಿಯಲ್ಲಿ ಇಬ್ಬರು ಯುವಕರು ನೀರುಪಾಲು

ಮಲ್ಲಮ್ಮ ನುಡಿ ವಾರ್ತೆ

ವಡಗೇರಾ:ಜೂ.27:ಮಹಾರಾಷ್ಟದ ಪಶ್ಚಿಮ ಘಟ್ಟಗಳಲ್ಲಿ ಬಾರಿ ಮಳೆ ಹಿನ್ನೆಲೆ ತಾಲೂಕಿನ ಮಾಚನೂರು ಗ್ರಾಮದ ಭೀಮಾನದಿ ಪ್ರವಾಹಕ್ಕೆ ಇಬ್ಬರು ಯುವಕರ ಬಲಿ ಭೀಮಾನದಿಯಲ್ಲಿ ಕೊಚ್ಚಿಹೋದ ದನಗಾಯಿ ಯುವಕರು ಭೀಮಾನದಿಗೆ ದನಕ್ಕೆ ನೀರು ಕುಡಿಸಲು ಬಂದ ಯುವಕರು ನದಿ ಪಾಲು ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಮಾಚನೂರ ಗ್ರಾಮದಲ್ಲಿ ಈ ಘಟನೆ ನಡೆದಿದೆ

ಗ್ರಾಮದ ಹೊರವಲಯದಲ್ಲಿನ ಭೀಮಾನದಿಯಲ್ಲಿ ಕೊಚ್ಚಿಹೋದ ದನಗಾಯಿಗಳು ರಮೇಶ್ (17) ಸಿದ್ದಪ್ಪ (21)ಗುರುಸಣಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿಂದ ಭೀಮಾನದಿ ಅಪಾರ ಪ್ರಮಾಣದ ನೀರು ಬಿಡುಗಡೆ ಅಪಾಯದ ಮಟ್ಟ ಮೀರಿ ಹರಿಯುತ್ತದೆ ಭೀಮಾನದಿಯಲ್ಲಿ ಅಗ್ನಿಶಾಮಕ, ಪೊಲೀಸ್ ಸಿಬ್ಬಂದಿಗಳಿಂದ ಶೋಧ ಕಾರ್ಯ ಬೆಳಗ್ಗೆ 10 ಗಂಟೆಯಿಂದ ಮೃತ ಯುವಕರ ಶವಕ್ಕಾಗಿ ಶೋಧ ಸಿಗದ ಶವಗಳು ಸ್ಥಳದಲ್ಲಿ ಮುಗಿಲು ಮುಟ್ಟಿದ ಮೃತರ

ಕುಟುಂಬಸ್ಥರ ಆಕ್ರಂದನ ಘಟನಾ ಸ್ಥಳಕ್ಕೆ ವಡಗೇರಾ ತಹಸೀಲ್ದಾರ್ ಶ್ರೀಮತಿ ಮಂಗಳಾ. ಎಂ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ತಿಳಿಸಿ ಮಾತನಾಡಿದವರು ಭೀಮಾ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದ್ದು ಮತ್ತು ಮೊಸಳೆಗಳ ಕಾಟದಿಂದ ಶವಗಳ ಹುಡುಕಾಟಕ್ಕೆ ತೊಡಕಾಗುತ್ತಿದೆ ಆದರೂ ಕೂಡಾ ನಾಳೆ ಮತ್ತಷ್ಟು ಸಿಬ್ಬಂದಿಗಳನ್ನು ಮತ್ತು ನುರಿತ ಈಜುಗಾರರನ್ನು ಕರೆಸಿ ಶವಗಳ ಹುಡುಕುವಲ್ಲಿ ಪ್ರಯತ್ನಿಸುವುದಾಗಿ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಪಿಎಸ್ಐ ಮೈಬೂಬ ಅಲಿ, ಕಂದಾಯ ನಿರೀಕ್ಷಕ ಬಸವರಾಜ,

ಪೊಲೀಸ್ ಹಾಗೂ ಅಗ್ನಿಶಾಮಕದಳ ಕಂದಾಯ ಇಲಾಖೆ ಸಿಬ್ಬಂದಿಗಳು ಇನ್ನಿತರರು ಇದ್ದರೂ



ಬೀದರ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ನಾಡಪ್ರಭು ಕೆಂಪೇಗೌಡ ಜಯಂತಿ ನಿಮಿತ್ಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ನಾಡಪ್ರಭು ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.ಈ ಸಂದರ್ಭದಲ್ಲಿ ಬೀದರ ಸಹಾಯಕ ಆಯುಕ್ತರಾದ ಮೊಹಮ್ಮದ ಶಕೀಲ್, ಜಿಲ್ಲಾ ಒಕ್ಕಲಿಗ (ಕುಡು ಒಕ್ಕಲಿಗ) ಜಿಲ್ಲಾ ಶಾಖೆಯ ಪದಾಧಿಕಾರಿಗಳಾದ ಸೋಮನಾಥ ಬಿ.ಸಂತಪೂರೆ, ಪ್ರಭುರಾವ ಪಾಟೀಲ್, ಅನೀಲಕುಮಾರ ವಿ.ಅಟಂಗೆ, ರಮೇಶ ವಿ.ಬಿರಾದಾರ, ಮಲ್ಲಿಕಾರ್ಜುನ ಎನ್.ಜೀವಣಗಿ, ರವೀಂದ್ರ ಹಲ್ಲಾಳೆ, ಸಿದ್ರಾಮ ಕಲಬುರಗೆ, ಶರಣಪ್ಪಾ ದರೆ, ಸುನೀಲಕುಮಾರ ಪರಗೊಂಡೆ, ನಾಗಶೆಟ್ಟಿ ಆಟಂಗೆ, ರೇಖಾ ಪ್ರಕಾಶ, ಸರಸ್ವತಿ ಸೋಮನಾಥ, ಸಿದ್ದಪ್ಪಾ ಶಾಮರಾವ, ಈರಣ್ಣಾ ಭೀಮರಾವ, ಸೂರ್ಯಕಾಂತ ಹಾಗೂ ಜಿಲ್ಲಾಧಿಕಾರಿ ಕಚೇರಿ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹುಬ್ಬಳ್ಳಿ-ಪಂಢರಪುರ ನಡುವೆ ಆಷಾಡ ವಿಶೇಷ ರೈಲು

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.27:ಆಷಾಡ ಮಾಸ ಹಿನ್ನೆಲೆಯಲ್ಲಿ ಪಂಢರಪುರಕ್ಕೆ ಹೋಗುವ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಹುಬ್ಬಳ್ಳಿ–ಪಂಢರಪುರ ನಡುವೆ (14 ಟ್ರಿಪ್‌ಗಳಲ್ಲಿ) ಆಷಾಡ ವಿಶೇಷ ರೈಲು ಸಂಚರಿಸಲಿದೆ ಎಂದು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹುಬ್ಬಳ್ಳಿ–ಪಂಢರಪುರ ಕಾಯ್ದಿರಿಸದ ವಿಶೇಷ ರೈಲು (7 ಟ್ರಿಪ್‌ಗಳು) ರೈಲು ಸಂಖ್ಯೆ 07313) ಇದೇ ಜುಲೈ 1 ರಿಂದ 8 ರವರೆಗೆ ( ಜುಲೈ 4ರಂದು ಹೊರತುಪಡಿಸಿ) ಬೆಳಿಗ್ಗೆ 5.10 ಕ್ಕೆ ಹುಬ್ಬಳ್ಳಿಯಿಂದ ಹೊರಟು ಅದೇ ದಿನ ಸಂಜೆ 4 ಕ್ಕೆ ಪಂಢರಪುರ ತಲುಪಲಿದೆ. ಅದೇ ರೀತಿ ರೈಲು ಸಂಖ್ಯೆ 07314 ರೈಲು ಪಂಢರಪುರದಿಂದ ((7 ಟ್ರಿಪ್‌ಗಳು) ಜುಲೈ 1 ರಿಂದ 8 ರವರೆಗೆ ( ಜುಲೈ 4 ರಂದು ಹೊರತುಪಡಿಸಿ) ಸಂಜೆ 6 ಗಂಟೆಗೆ ಹೊರಟು ಮರುದಿನ ಬೆಳಿಗ್ಗೆ 4 ಗಂಟೆಗೆ ಹುಬ್ಬಳ್ಳಿಗೆ ಆಗಮಿಸಲಿದೆ.

ಈ ರೈಲು ಧಾರವಾಡ, ಅಳ್ನಾವರ್, ಲೋಂಡಾ, ಖಾನಾಪುರ, ದೇಸೂರ್, ಬೆಳಗಾವಿ, ಪಾಚ್ಛಾಪುರ, ಗೋಕಾಕ ರಸ್ತೆ, ಘಟಪ್ರಭಾ, ಚಿಕ್ಕೋಡಿ ರಸ್ತೆ, ರಾಯಬಾಗ, ಚಿಂಚಲಿ, ಕುಡಚಿ, ಉಗರ್ ಖುರ್ದ್, ಶೇಡಬಾಳ, ವಿಜಯನಗರ, ಮೀರಜ್, ಅರಗ್, ಢಲ್ಗಾಂವ್, ಜತ್ ರಸ್ತೆ, ವಾಸುದ್ ಹಾಗೂ ಸಂಗೋಲಾಗಳಲ್ಲಿ ನಿಲ್ಲಲಿದೆ.

ಕಾಯ್ದಿರಿಸದ ರೈಲ್ವೆ ಟಿಕೇಟ್‌ನ್ನು ನಿಲ್ದಾಣಗಳಲ್ಲಿ ಬುಕಿಂಗ್ ಕೌಂಟರ್‌ಗಳ ಮೂಲಕ ಮತ್ತು ಯುಟಿಎಸ್ ಅಪ್ಲಿಕೇಶನ್ ಮೂಲಕವೂ ಬುಕ್ ಮಾಡಬಹುದು. ಅನಾನುಕೂಲತೆ ತಪ್ಪಿಸಲು ಪ್ರಯಾಣಿಕರು ಟಿಕೇಟ್ ಪಡೆದು ಪ್ರಯಾಣಿಸಬೇಕು.

ಈ ವಿಶೇಷ ರೈಲುಗಳ ಸಮಯ ಮತ್ತು ನಿಲುಗಡೆ ಕುರಿತು ಹೆಚ್ಚಿನ ಮಾಹಿತಿಗಾಗಿ www.enquiry.indianrail.gov.in ಗೆ ಭೇಟಿ ನೀಡಲು ಅಥವಾ ಒಖಿಇಖ ಅಪ್ಲಿಕೇಶನ್ ಡೌನ್ಲೋಡ್ ಮಾಡಿಕೊಳ್ಳಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಂದೇ ಭಾರತ್ ರೈಲಲ್ಲಿ ಕಾಣಿಸಿಕೊಂಡ ಬೆಂಕಿ : ತಪ್ಪಿದ ಭಾರೀ ಅನಾಹುತ

ಮಲ್ಲಮ್ಮನುಡಿ ವಾರ್ತೆ ದಾವಣಗೆರೆ: ಜೂ.27:ವಂದೇ ಭಾರತ್ ರೈಲಿನಲ್ಲಿ ಬೆಂಕಿ ಕಾಣಿಸಿಕೊಂಡ ಘಟನೆ ದಾವಣಗೆರೆಯಲ್ಲಿ ನಡೆದಿದೆ.

ಧಾರವಾಡದಿಂದ ಬೆಂಗಳೂರಿಗೆ ವಂದೇ ಭಾರತ್ ರೈಲು ತೆರಳುತ್ತಿತ್ತು. ಈ ವೇಳೆ, ದಾವಣಗೆರೆ ಬಳಿ ಟ್ರೈನ್‌ನ ಚಕ್ರದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಇದನ್ನು ಗಮನಿಸಿದ ಗೇಟ್ ಮ್ಯಾನ್ ರೈಲ್ವೇ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಕೂಡಲೇ ಎಚ್ಚೆತ್ತ ಸಿಬ್ಬಂದಿ ರೈಲನ್ನು ದಾವಣಗೆರೆಯಲ್ಲಿ ನಿಲ್ಲಿಸಿದ್ದಾರೆ. ರೈಲ್ವೇ ಪೊಲೀಸರು ಹಾಗೂ ಸಿಬ್ಬಂದಿ ಬೆಂಕಿಯನ್ನು ನಂದಿಸಿದ್ದಾರೆ. ಸಿಬ್ಬಂದಿ ಸಮಯಪ್ರಜ್ಞೆಯಿಂದ ಭಾರೀ ಅನಾಹುತ ತಪ್ಪಿದಂತಾಗಿದೆ.

ವಂದೇ ಭಾರತ್ ರೈಲಿನಲ್ಲಿದ್ದ ಪ್ರಯಾಣಿಕರು, ಶತಾಬ್ದಿ ಎಕ್ಸ್‌ಪ್ರೆಸ್‌ನಲ್ಲಿ ಬೆಂಗಳೂರಿಗೆ ತೆರಳಿದ್ದಾರೆ.

# ಹೂಲಗೇರಿ ಬಳಿ ರಸ್ತೆ ಅಪಘಾತ : ಮೂವರ ಸಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.27–ಜಿಲ್ಲೆಯ ಬಾದಾಮಿ ತಾಲೂಕಿನ ಹೂಲಗೇರಿ ಗ್ರಾಮದ ಬಳಿಯಿರುವ ಭಾರತ ಪೆಟ್ರೋಲ್ ಪಂಪ್ ಹತ್ತಿರ ಲಾರಿ ಹಾಗೂ ಬೈಕ್ ನಡುವೆ ಗುರುವಾರ ರಾತ್ರಿ ಸಂಭವಿಸಿದ ಅಪಘಾತದಲ್ಲಿ ಮೂವರು ಯುವಕರು ಸಾವನ್ನಪ್ಪಿದ್ದಾರೆ.

ಬೈಕ್‌ವೊಂದರಲ್ಲಿ ಬಾಗಲಕೋಟೆ ಕಡೆಯಿಂದ ಕುಳಗೇರಿಗೆ ಹೊರಟಿದ್ದ ಮೂವರು ಯುವಕರು ಹೂಲಗೇರಿ ಬಳಿ ಬರುತ್ತಿದ್ದಂತೆ ಎದುರಿಗೆ ಬರುತ್ತಿದ್ದ ಲಾರಿ ಢಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದ್ದು, ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟರೆ, ಇನ್ನೊಬ್ಬ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ.

ಬಾದಾಮಿ ತಾಲೂಕಿನ ವಡವಟ್ಟಿ ಗ್ರಾಮದ ನವೀನ ಪಾಂಡಪ್ಪ ಕುಂಬಾರ(22), ರಮೇಶ ಭೀಮಪ್ಪ ಕಂಬಳಿ(19) ಹಾಗೂ ಕುಳಗೇರಿಯ ಮುತ್ತಣ್ಣ ವೆಂಕಪ್ಪ ದಾಸರ(22) ಮೃತ ಯುವಕರಾಗಿದ್ದು, ಟ್ರ್ಯಾಕ್ಟರ್ ರೇಡಿಯೇಟರ್ ದುರಸ್ಥಿಗಾಗಿ ಕುಳಗೇರಿಯಿಂದ ಬಾಗಲಕೋಟೆ ಹೋಗಿದ್ದರು ಎಂದು ಹೇಳಲಾಗಿದೆ.

ಘಟನಾ ಸ್ಥಳಕ್ಕೆ ಕೆರೂರ ಪೊಲೀಸ್ ಠಾಣೆಯ ಪಿಎಸ್ಐ ಭೀಮಪ್ಪ ರಬಕವಿ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಒಂದನೇ ಪುಟದಿಂದ

## ನಾಡ ಪ್ರಭುವಾಗಲಿ: ನಿಶ್ಚಲಾನಂದ ಸ್ವಾಮೀಜಿ

ಪ್ರಭುವಾಗಲಿ ಎಂಬುದು ನಮ್ಮೆಲ್ಲರ ಆಶಯ. ರಾಜ್ಯವನ್ನು ಮುನ್ನಡೆಸುವ ಶಕ್ತಿ ಡಿಕೆ ಶಿವಕುಮಾರ್ ಅವರಿಗೆ ಸಿಗಲಿ ಎಂದು ಹೇಳಿದರು. ಈ ಮೂಲಕ ಪರೋಕ್ಷವಾಗಿ ಡಿಕೆ ಶಿವಕುಮಾರ್ ಅವರು ರಾಜ್ಯದ ಮುಖ್ಯಮಂತ್ರಿಯಾಗಲಿ ಎಂದು ಹಾರೈಸಿದ್ದಾರೆ.

ಡಿಕೆ ಶಿವಕುಮಾರ್ ಅವರು ಛಲ ಬಿಡದೇ ಯಾವುದೇ ಕೆಲಸವನ್ನು ಮಾಡಿ ತೋರಿಸುವಂತವರು. ಅಂತಹ ನಾಯಕ ನಾಡ ಪ್ರಭುವಾಗಲಿ ಎಂಬುದು ನಮ್ಮೆಲ್ಲರ ಆಶಯ ಎಂದರು.

## ಕಠಿಣ ಕ್ರಮ : ಗೃಹ ಸಚಿವ ಪರಮೇಶ್ವರ್

ಕೊರತೆಯಿಂದಾಗಿ ದುರ್ಘಟನೆಯಾಗಿ 11 ಮಂದಿ ಅಮಾಯಕರು ಜೀವ ಕಳೆದುಕೊಂಡರು. ಬೆಂಗಳೂರಿನಲ್ಲಿ ಹಲವಾರು ಜಾತ್ರೆ, ಸಾರ್ವಜನಿಕ ಸಮಾರಂಭಗಳು ನಡೆಯುತ್ತಲೇ ಇರುತ್ತವೆ. ಲಕ್ಷಾಂತರ ಮಂದಿ ಭಾಗವಹಿಸುತ್ತಾರೆ. ಎಂದೂ ನಡೆಯದೇ ಇರುವಂತಹ ದುರ್ಘಟನೆ ಆರ್‌ಸಿಬಿ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರಿ?ಡಾಂಗಣದಲ್ಲಿ ನಡೆದಿದೆ. ಮುಂದೆ ಈ ರೀತಿಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಗೃಹಸಚಿವರು ಆದೇಶಿಸಿದರು.

ಸೈಬರ್ ಕ್ರೈಂಗಳ ಸಂಖ್ಯೆ ದಿನೇದಿನೇ ಹೆಚ್ಚುತ್ತಿವೆ. ಪ್ರತಿಯೊಂದು ಪೊಲೀಸ್? ಠಾಣೆಯ ಸಿಬ್ಬಂದಿಗಳಿಗೂ ಸೈಬರ್ ಅಪರಾಧಗಳ ಬಗ್ಗೆ ತರಬೇತಿ ನೀಡಲು ನಮ ಸರ್ಕಾರ ಕಾರ್ಯಕ್ರಮ ರೂಪಿಸಿದೆ. ಅದನ್ನು ಸದ್ಬಳಕೆ ಮಾಡಿಕೊಳ್ಳಲು ಪೊಲೀಸ್? ಸಿಬ್ಬಂದಿಗಳು ತರಬೇತಿಯಲ್ಲಿ ಭಾಗವಹಿಸುವ ಮೂಲಕ ಅಪರಾಧ ಕೃತ್ಯಗಳನ್ನು ಹತ್ತಿಕ್ಕಲು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಆಂಧ್ರಪ್ರದೇಶ, ಗೋವಾ ರಾಜ್ಯಗಳಿಂದ ಮಾದಕ ವಸ್ತುಗಳು ಹೆಚ್ಚಿನ ಪ್ರಮಾಣದಲ್ಲಿ ಸಾಗಣಿಕೆಯಾಗುತ್ತಿವೆ. ಯುವಕರ ಕೈಗೆ ಗಾಂಜಾ ಸುಲಭವಾಗಿ ಸಿಗುತ್ತಿದೆ ಎಂಬುದರ ಬಗ್ಗೆ ಸಾರ್ವಜನಿಕ ವಲಯದಲ್ಲಿ ತೀವ್ರ ಬೇಸರವಿದೆ. ಇದನ್ನು ಸಂಪೂರ್ಣವಾಗಿ ಮಟ್ಟಹಾಕಲು ಪೊಲೀಸರು ಮತ್ತಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು. ನಿರ್ಲಕ್ಷ್ಯ ವಹಿಸಿದರೆ ಯುವಜನತೆಯ ಭವಿಷ್ಯ ಹಾಳಾಗುತ್ತದೆ. ರಾಜ್ಯವನ್ನು ಉಡ್ತಾ ಪಂಜಾಬ್‌ನಂತೆ ಆಗಲು ಬಿಡಬಾರದು ಎಂದರು.

ಸಮಾವೇಶದಲ್ಲಿ ರಾಜ್ಯ ಪೊಲೀಸ್ ಮಹಾನಿರ್ದೇಶಕರಾದ ಡಾ. ಎಂ.ಎ.ಸಲೀಂ, ಹಿರಿಯ ಐಎಎಸ್ ಅಧಿಕಾರಿ ಗೌರವ ಗುಪ್ತಾ, ಸಿಐಡಿ ಸೈಬರ್ ಅಪರಾಧಗಳು ಮತ್ತು ಮಾದಕ ವಸ್ತು ವಿಭಾಗದ ಪೊಲೀಸ್ ಮಹಾನಿರ್ದೇಶಕರಾದ ಡಾ.ಪ್ರಣವ್ ಮಹಾಂತಿ, ರಾಜ್ಯ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯ ಡಿಜಿ ಪ್ರಶಾಂತ್ ಕುಮಾರ್ ಠಾಕೂರ್, ರಾಜ್ಯ ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆಯ ಡಿಜಿ ಮಾಲಿನಿ ಕೃಷ್ಣಮೂರ್ತಿ ಹಾಗೂ ರಾಜ್ಯದ ಎಲ್ಲ ವಲಯಗಳ ಐಜಿಪಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಇದ್ದರು.

## ಕೋಟನೂರ (ಡಿ) ದಲ್ಲಿ ಕೃಷಿ ಪಂಪ್ ಉಪಕರಣಗಳ ತಂತ್ರಜ್ಞರಿಗೆ ಕಾರ್ಯಾಗಾರ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.27:2025–26ನೇ ಸಾಲಿನಲ್ಲಿ ಕೃಷಿ ಪಂಪು ಉಪಕರಣಗಳ ತಂತ್ರಜ್ಞರಿಗೆ ಬಿಇಇ ಸ್ಟಾರ್ ಲೇಬಲ್‌ವುಳ್ಳ ಇಂಧನ ದಕ್ಷ ಪಂಪಸೆಟ್ ಮತ್ತು ನೀರಿನ ಸಂರಕ್ಷಣೆ ಕುರಿತು ಕೋಟನೂರ(ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರ ಕಚೇರಿಯಲ್ಲಿ ಶುಕ್ರವಾರ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಬಿಜಾಪೂರ ಕೃಷಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ರಮೇಶ ಬೀರಗೆ ಅವರು ಕೃಷಿ ಕ್ಷೇತ್ರದಲ್ಲಿ ಬಿ.ಇ.ಇ ಸ್ಟಾರ್ ರೇಟೆವುಳ್ಳ ಪಂಪುಗಳನ್ನು ಬಳಸುವುದರ ಕುರಿತು, ಕಲಬುರಗಿ ಸೆಲ್ಕೋ ಸೋಲಾರ ಲೈಟ್ ಪ್ರೈವೇಟ್ ಲಿಮಿಟೆಡ್‌ನ ಸಿನಿಯರ್ ಎಕ್ಸಿಕ್ಯೂಟಿವ್ ರಾದ ವಿಷ್ಣು ಅವರು ಸೋಲಾರ ಪಂಪ ಸೆಟ್ ನಿರ್ವಹಣೆ ಕುರಿತು, ಸಹಾಯಕ ಪ್ರಾಧ್ಯಾಪಕ ಡಾ.ಮಲ್ಲಿಕಾರ್ಜುನರೆಡ್ಡಿ ಅವರು ನೀರಿನ ಸಂರಕ್ಷಣೆ ಹಾಗೂ ಬೋರ್‌ವೆಲ್ ರೀಚಾರ್ಜ್ ತಂತ್ರಗಳ ಕುರಿತು ಮಾಹಿತಿ ನೀಡಿದರು. ಹಾಳ ಸುಲ್ತಾನಪೂರ ಪ್ರಗತಿ ಪರ ರೈತರಾದ ಶರಣಬಸಪ್ಪ ಪಾಟೀಲ್ ರವರು ಸೌರಶಕ್ತಿ ಆಧಾರಿತ ಕೃಷಿ ಉಪಕರಣಗಳ ಹಾಗೂ ಪಂಪ ಸೆಟ್‌ಗಳ ಕುರಿತು ಮಾಹಿತಿ ನೀಡಿದರು.

ಈ ಕಾರ್ಯಾಗಾರದಲ್ಲಿ ಕಲಬುರಗಿ ಕೋಟನೂರ(ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರು–1 ರಾದ ಸೋಮಶೇಖರ ಬಿರಾದರ, ಸಹಾಯಕ ಕೃಷಿ ನಿರ್ದೇಶಕ ಅನಿಲ ಕುಮಾರ, ರೈತ ಮಹಿಳೆ ನೀಲಕ್ಕ ನರಸಲಗಿ, ಕೃಷಿ ಅಧಿಕಾರಿ ಸುಜಾತಾ. ರಾಜನಾಳಕರ ಮತ್ತು ಯಾಸ್ಮೀನ ಉಪಸ್ಥಿತರಿದ್ದರು.

## ಜು.2 ರಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರುಗಳ ಬೀದರ ಜಿಲ್ಲಾ ಪ್ರವಾಸ

ಬೀದರ. ಜೂ. 27: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರುಗಳಾದ ಶಶಿಧರ್ ಕೋಸಂಬೆ, ಶೇಖರ್‌ಗೌಡ ಜಿ.ರಾಮತ್ನಾಳ್ ಹಾಗೂ ಡಾ.ತಿಪ್ಪೇಸ್ವಾಮಿ ಕೆ.ಟಿ. ಅವರು ಜುಲೈ.2 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ. ಅವರುಗಳು ಜುಲೈ.2 ರಂದು ಬೆಳಿಗ್ಗೆ 8 ಗಂಟೆಗೆ ಬೀದರ ಜಿಲ್ಲೆಯಲ್ಲಿರುವ ಮಕ್ಕಳ ಪಾಲನಾ ಸಂಸ್ಥೆ, ಜಿಲ್ಲಾಸ್ಪತ್ರೆ ವಸತಿ ನಿಲಯ, ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಸಂಜೆ 4 ಗಂಟೆಗೆ ಮಕ್ಕಳ ಸ್ನೇಹಿ ಸಾರಿಗೆ ವ್ಯವಸ್ಥೆ ಕುರಿತು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಜುಲೈ.3 ರಂದು ಬೆಳಿಗ್ಗೆ 10 ಗಂಟೆಗೆ ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ದಾಖಲಾದ ಪ್ರಕರಣಗಳ ವಿಚಾರಣೆ ನಡೆಸಲಿದ್ದಾರೆ. ಮಧ್ಯಾಹ್ನ 2 ಗಂಟೆಗೆ ಮಕ್ಕಳ ಪಾಲನಾ ಸಂಸ್ಥೆ, ತಾಲ್ಲೂಕು ಆಸ್ಪತ್ರೆ, ವಸತಿ ನಿಲಯ, ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರಕಾರಿ ಕೈಗಾರಿಕೆ ತರಬೇತಿ ಸಂಸ್ಥೆ ಪ್ರವೇಶಾತಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಮಲನಗರ:ಜೂ.27: 2025–26 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಸಪ್ಲಿಮೆಂಟರಿ ಪರೀಕ್ಷೆಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಸರಕಾರಿ ಕೈಗಾರಿಕೆ ತರಬೇತಿ ಸಂಸ್ಥೆ ತಾಲೂಕಿನ ರಾಂಪುರ ಕಮಲನಗರದಲ್ಲಿ ಎಲೆಕ್ಟ್ರಿಷನ, ಫಿಟ್ಟರ್ ಎರಡು ವರ್ಷದ ವೃತ್ತಿ ತರಬೇತಿ ಸಲುವಾಗಿ ಆಫಲೈನ್ ಮುಖಾಂತರ ಅರ್ಜಿ ಕರೆಯಲಾಗಿದೆ.

ಅಭ್ಯರ್ಥಿಗಳು ತಮ್ಮ ಎಲ್ಲಾ ಮೂಲ ದಾಖಲಾತಿ ಮೋಬೈಲ್ ಸಂಖ್ಯೆ ಹಾಗೂ ಈ ಮೇಲ್ ಐಡಿ ಯೊಂದಿಗೆ ಸರಕಾರಿ ಕೈಗಾರಿಕೆ ತರಬೇತಿ ಕೇಂದ್ರ ರಾಂಪುರ ಕಾಲೇಜಿನಲ್ಲಿ ಭೇಟಿ ನೀಡಿ ಅರ್ಜಿಯನ್ನು ಪಡೆದು ಪ್ರವೇಶ ಪಡೆದುಕೊಳ್ಳಬೇಕೆಂದು ಕಾಲೇಜಿನ ಪ್ರಾಂಶುಪಾಲರಾದ ಬಾಬು ರಾಜೋಳೆ ಅವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 9448349888,7899733880 ಸಂಪರ್ಕಿಸಬೇಕಾಗಿ ಕೊರಲಾಗಿದೆ.

## ಕರ್ನಾಟಕ ಸಾಹಿತ್ಯ ಅಕಾಡೆಮಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬೀದರ.ಜೂ.27: ಕರ್ನಾಟಕ ಸಾಹಿತ್ಯ ಅಕಾಡೆಮಿಯು ವಿಶೇಷ ಘಟಕ ಯೋಜನೆಯಡಿ ದಲಿತ ಸಾಹಿತ್ಯ: ಅರ್ಧಶತಮಾನ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಸೆಪ್ಟೆಂಬರ್ ತಿಂಗಳಿನಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಸಕ್ತರಿರುವ 20 ರಿಂದ 50 ವರ್ಷ ವಯಸ್ಸುಳ್ಳ ಪರಿಶಿಷ್ಟಜತಿಗೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ದಿನಾಂಕ: 20–07–2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ https://sahithaacademy.karnataka.in ನ್ನು ನೋಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಗುಣಮಟ್ಟವಲ್ಲದ ಔಷಧಿ ಮತ್ತು ಕಾಂತಿವರ್ಧಕಗಳ ಬಳಕೆ ನಿಷೇಧ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಜೂ 27 :ಕರ್ನಾಟಕ ಔಷಧ ಪರೀಕ್ಷಾ ಪ್ರಯೋಗಾಲಯದ ಸರ್ಕಾರಿ ವಿಶ್ಲೇಷಕರು ವಿವಿಧ ಔಷಧಿ ಮತ್ತು ಕಾಂತಿವರ್ಧಕಗಳನ್ನು ಗುಣಮಟ್ಟ ಹೊಂದಿಲ್ಲವೆಂದು ಘೋಷಿಸಿದ್ದಾರೆ. ಹೈದರಾಬಾದ್‌ನ ಮೆ.ಇಂಡಿಯನ್ ಜೆನೋಮಿಕ್ಸ್ ಪ್ರೈ. ಲಿಮಿಟೆಡ್‌ನ ಎನ್ರೋಪ್ಲಾಕ್ಸಸಿನ್ ಟ್ಯಾಬ್ಲೆಟ್ಸ್(ಎನ್‌ರೋಜನ್–500), ಬೆಂಗಳೂರಿನ ಮೆ.ಮಹೇಂದ್ರ ಲ್ಯಾಬ್ಸ್ ಪ್ರೈ.ಲಿಮಿಟೆಡ್‌ನ ಸಿಪ್ರೋಕ್ಸ್–ಟಿಜಡ್ ಸಸ್‌ಪೆನ್‌ಷನ್ –ವೆಬ್ (ಸಿಪ್ರೋಪ್ಲಾಕ್ಸಸಿನ್ ಅಂಡ್ ಟೆಡ್ನಿಜೋಲ್ ಓರಲ್ ಸಸ್‌ಪೆನ್‌ಷನ್), ಡಿಸ್ಟ್ ಸಿರ್ ಮೋರ್‌ನ ಗ್ರಾಫಿಕ್ ಕ್ಲೇವ್ 625 ಟ್ಯಾಬ್ಲೆಟ್ಸ್(ಅಮೋಕ್ಸಿಲಿನ್ & ಪೋಟ್ಯಾಷಿಯಂ ಕ್ಲಾವುಲನೇಟ್ ಟ್ಯಾಬ್ಲೆಟ್ಸ್ ಐಪಿ), ಸೋಲನ್ ನ ಮೆ.ಬಯೋಜೆನೆಟಿಕ್ ಡ್ರಗ್ಸ್ ಪ್ರೈ. ಲಿಮಿಟೆಡ್‌ನ ಐಬುಪ್ರೋಪೇನ್ ಟ್ಯಾಬ್ಲೆಟ್ಸ್ ಐಪಿ 400 ಎಂಜಿ, ಸೋಲನ್‌ನ ಮೆ.ಬಯೋಜೆನೆಟಿಕ್ ಡ್ರಗ್ಸ್ ಪ್ರೈ. ಲಿಮಿಟೆಡ್‌ನ ಐಬುಫ್ರೋಪೇನ್ ಟ್ಯಾಬ್ಲೆಟ್ಸ್ ಐಪಿ 400 ಎಂಜಿ, ಬೆಂಗಳೂರಿನ ಮೆ.ವೆಟ್–ನಿಡ್ಸ್‌ನ ಸಿಪ್ಲಾಕ್ಸ್ವೆಟ್ ಬೋಲಸ್(ಸೆಫಲೆಕ್ಸಿನ್ ಬೋಲಸ್ 1500 ಎಂಜಿ), ಬೆಂಗಳೂರಿನ ಮೆ.ಮಹೇಂದ್ರ ಲ್ಯಾಬ್ಸ್ ಪ್ರೈ. ಲಿಮಿಟೆಡ್‌ನ ಅಲ್ಬೆಂಡಜೋಲ್ ಟ್ಯಾಬ್ಲೆಟ್ಸ್ ಐಪಿ 400ಎಂಜಿ, ಡಂಗೇರಿಯಾದ ಮೆ.ಸೆಂಚುರಿ ನೋವಾ ಡ್ರಗ್ಸ್ ಪ್ರೈ.ಲಿಮಿಟೆಡ್‌ನ ಆಫ್‌ಲವ್ ಓಜಡ್ (ಓಪ್ಲಾಕ್ಸಿನ್ ಅಂಡ್ ಓರ್ನಿಡಜೋಲ್ ಟಗಯಾಬ್ಲೆಟ್ಸ್ ಐಪಿ), ರಾಯ್‌ನ ಮೆ.ಜೆನ್‌ಟೆಕ್ ಹೆಲ್ತ್‌ಕೇರ್ ಪ್ರೈ.ಲಿಮಿಟೆಡ್‌ನ ನೆಕ್ಸಿಕಮ್ –ಪ್ಲಸ್ ಟ್ಯಾಬ್ಲೆಟ್ಸ್ (ಎಸ್ಸಿಟಾಲೋಪ್ರಮ್ ಆಕ್ಸಲೇಟ್ & ಕ್ಲೊನಾಜೆಪಮ್ ಟ್ಯಾಬ್ಲೆಟ್ಸ್ ಐಪಿ),ಮೆ.ವಿಂಗ್ಸ್ ಬಯೋಟೆಕ್ ಎಲ್‌ಎಲ್‌ಪಿನ ಟೆಲ್ಮಿಸರ್‌ಟನ್ ಅಂಡ್ ಹೈಡ್ರೋಕ್ಲೋರೋಥೈಜಡ್ ಟ್ಯಾಬ್ಲೆಟ್ಸ್ ಐ.ಪಿ.(40ಎಂಜಿ/12.5 ಎಂಜಿ), ಡೆಹರಾಡೂನ್‌ನ ಮೆ.ಎಸ್‌ವಿಪಿ ಲೈಫ್ ಸೈನ್ಸ್‌ನ ಸೈನೋಕೋಬಾಲಮಿನ್ ಐ.ಪಿ– ಸೈನೋಡರ್ ಇನ್‌ಜೆಕ್ಷನ್ ಐ.ಪಿ. (ವಿಟಮಿನ್ ಬಿ12 ಇನ್‌ಜೆಕ್ಷನ್), ಗೋವಾದ ಮೆ. ಮನಿಷ್ಕ ಇನ್‌ಜೆಕ್ಟಬಲ್ ಪ್ರೈ.ಲಿಮಿಟೆಡ್‌ನ ಸೋಡಿಯಂ ಕ್ಲೋರೈಡ್ ಇನ್‌ಜೆಕ್ಷನ್ ಐ.ಪಿ. 0.9%ಡಬ್ಲ್ಯೂ/ವಿ(ಎನ್‌ಎಸ್), ಬಡ್ಡಿ ಇಂಡಸ್ಟ್ರಿಯಲ್ ಏರಿಯಾದ ಮೆ.ವಿಂಗ್ಸ್ ಬಯೋಟೆಕ್ ಎಲ್‌ಎಲ್‌ಪಿಯ ಟೆಲ್ಮಿಸರ್‌ಟನ್ ಅಂಡ್ ಹೈಡ್ರೋಕ್ಲೋರೋಥೈಜಡ್ ಟ್ಯಾಬ್ಲೆಟ್ಸ್ ಐ.ಪಿ.(40ಎಂಜಿ/12.5 ಎಂಜಿ), ಸೋಲನ್‌ನ ಮೆ.ಕೋನಿಸ್ ಫಾರ್ಮಾಸ್ಯೂಟಿಕಲ್ಸ್ ಪ್ರೈ. ಲಿಮಿಟೆಡ್‌ನ ರೋಡಾಲ್ 650 (ಪ್ಯಾರಸೆಟಮೋಲ್ ಐಪಿ 650 ಎಂಜಿ ಟ್ಯಾಬ್ಲೆಟ್ಸ್), ಇಂದೋರ್‌ನ ಮೆ. ಅಲ್ಫಾ ಲ್ಯಾಬೋರೇಟರೀಸ್ ಲಿಮಿಟೆಡ್‌ನ ಓಪ್ಲಾಕ್ಸಸಿನ್ ಅಂಡ್ ಡೆಕ್ಸಾಮೆಥಾಸೂನ್ ಓಥ್ಲಮಿಕ್ ಸಲೂಷನ್, ಜೆ&ಕೆ ಕಥುವದ ಮೆ.ಅಸೋಸಿಯೇಟೆಡ್ ಬಯೋಫಾರ್ಮಾ ಪ್ರೈ.ಲಿಮಿಟೆಡ್‌ನ ಪ್ಯಾಮಟೋಪ್ರಜೋಲ್ ಸೋಡಿಯಂ ಪಾರ್ ಇನ್‌ಜೆಕ್ಷನ್ (ಪೆಟಲೈಫ್–40) ಈ ಔಷಧಿ ಮತ್ತು ಕಾಂತಿವರ್ಧಕಗಳನ್ನು ಗುಣಮಟ್ಟ ಹೊಂದಿಲ್ಲವೆಂದು ತಿಳಿಸಿದ್ದಾರೆ.

## ಬೀದಿ ಬದಿ ವ್ಯಾಪಾರಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ



ಬೀದರ.ಜೂ.27: ಜಿಲ್ಲೆಯ ಬೀದಿ ಬದಿ ವ್ಯಾಪಾರಿಗಳು, ಜುಸ್ ಸೆಂಟರ್, ಚಿಕನ್ ಮತ್ತು ಕಬಾಬ್ ಸೆಂಟರ್, ಟಿ ಅಂಗಡಿಗಳು, ಜಿಲೇಬಿ ತಯಾರಕರು, ಚೈನಿಸ್ ಫಾಸ್ಟ ಫುಡ್, ಟೀಫಿನ್ ಸೆಂಟರ್, ಚಾರ್ಟ ಭಂಡಾ???ಗಳ ಇತರೆ ಆಹಾರ ಪದಾರ್ಥಗಳ ಮಾರಾಟಗಾರರಲ್ಲಿ ಆಹಾರದ ತಯಾರಿಕೆ ಮತ್ತು ವಿತರಣೆಯಲ್ಲಿನ ಶುಚಿತ್ವ, ನೈರ್ಮಲ್ಯತೆ ಹಾಗೂ ಗುಣಮಟ್ಟ ಕಾಪಾಡಬೇಕೆಂದು ಜಿಲ್ಲಾ ಅಂಕಿತ ಅಧಿಕಾರಿ ಡಾ.ಸಂತೋಷ ತಿಳಿಸಿದರು.

ಅವರಿಂದು ಆಹಾರ ಸುರಕ್ಷತೆ ಮತ್ತು ಔಷದ ಆಡಳಿತ, ಆಯುಕ್ತರು ಬೆಂಗಳೂರು ಇವರ ಆದೇಶದ ಮೇರೆಗೆ ವಿಶೇಷ ಆಂದೋಲವನ್ನು ಹಮ್ಮಿಕೊಂಡು ಬೀದಿ ಬದಿ ವ್ಯಾಪಾರಸ್ಥರಿಗೆ ಅರಿವು ಮೂಡಿಸಲಾಗುತ್ತಿದೆಂದರು.

ಬೀದಿ ಬದಿ ವ್ಯಾಪಾರಿಗಳಿಗೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006, ನಿಯಮ 2011ರನ್ವಯ ಆಹಾರದ ತಯಾರಿಕೆ ಮತ್ತು ವಿತರಣೆಯಲ್ಲಿನ ಶುಚಿತ್ವ, ನೈರ್ಮಲ್ಯತೆ ಹಾಗೂ ಗುಣಮಟ್ಟ ಕುರಿತು ಅರಿವು ಮೂಡಿಸುವುದು ಮತ್ತು ತಾಲೂಕಾ ಮಟ್ಟದಲ್ಲಿ ಶಿಬಿರಗಳನ್ನು ಏರ್ಪಡಿಸುವುದರ ಮುಖಾಂತರ ಆಹಾರ ಸುರಕ್ಷತೆ ಮತ್ತು ಔಷದ ಆಡಳಿತದಿಂದ ಬೀದಿ ಬದಿ ವ್ಯಾಪಾರಿಗಳಿಗೆ ಉಚಿತವಾಗಿ 50 ನೋಂದಣಿ ಮಾಡಿಸುವುದು.(ನೋಂದಣಿಗೆ 100ರೂ. ಪರವಾನಿಗೆಗೆ 2000 & ತಯಾರಕರಿಗೆ 3000 ರೂ ಮಾತ್ರ) ಪರವಾನಿಗೆ ಹಾಗೂ ನೋಂದಣಿ ಮಾಡಿಸಲು ಬ್ರೋಕರ ಅಥವಾ ಅಧಿಕಾರಿಗಳನ್ನು ಹಣ ನೀಡದೆ ತಾವೆ ಆನ್ ಲೈನ ಮುಂಖಾಂತರ ಪಡೆದುಕೋಳ್ಳಿ ಎಂದು ತೀಳಿಸಲಾಗಿದೆ ಹಾಗೂ ಸ್ವಚ್ಛತೆಯನ್ನು ಕಾಪಾಡುವುದು ಅಡುಗೆ ತಯಾರಕರ ವೈದ್ಯಕಿಯ ಪ್ರಮಾಣ ಪತ್ರ ಮತ್ತು ಡ್ರೆಸ್ ಕೋಡ ಹ್ಯಾಂಡ ಗ್ಲೋಸ್, ಕ್ಯಾಪಗಳನ್ನು ಕಡ್ಡಾಯವಾಗಿ ಬಳಕೆ ಮಾಡಲು ತಿಳಿಸಿದರು.

ಅದೇ ರೀತಿ ಬೀದರ ಜಿಲ್ಲೆಯ ಇಂದು ಎಲ್ಲಾ ತಾಲೂಕುಗಳಿಂದ ಒಟ್ಟು 70 ಬೀದಿ ಬದಿ ವ್ಯಾಪಾರಿಗಳಲ್ಲಿ ಭೇಟಿ ನೀಡಿ ಪರಿಶೀಲನೆ ಮಾಡಿದರು.

## ಡೋಣಗಾಂವದ ಹಾವಗಿಸ್ವಾಮಿ ಪ್ರೌಢಶಾಲೆಯಲ್ಲಿ ಪರಿಸರ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ:ಜೂ.27:ಪರಸರ ರಕ್ಷಣೆಗೆ ದೇಶದ ಪ್ರತಿಯೊಬ್ಬ ನಾಗರಿಕರ ಮತ್ತು ಯುಕವರ ಮೂದಲೆ ಕರ್ತವ್ಯ ಎಂದು ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಮಕ್ಕಳಿಗೆ ಕಿವಿ ಮಾತು ಹೇಳಿದರು.

ತಾಲೂಕಿನ ಡೋಣಗಾಂವ (ಎಮ್) ಗ್ರಾಮದ ಹಾವಗಿಸ್ವಾಮಿ ಪ್ರೌಢಶಾಲೆಯಲ್ಲಿ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಶಾಲಾವರಣದಲ್ಲಿ ನಾಲ್ಕು ವರ್ಷ ಹಿಂದೆ ಸೇವಾ ನಿವೃತ ಶಿಕ್ಷಕರು ಮತ್ತು ಮುಖ್ಯ ಗುರುಗಳು ನೆಟುಸಿದ ಸಸಿಗಳನ್ನು ಸ್ವಲ್ಪ ಪ್ರಮಾಣದಿಂದ ಬೆಳೆದಿವೆ. ಗಿಡದ ಬಗ್ಗೆ ಜಾಗೃತಿ, ರಕ್ಷಣೆ ಮತ್ತು ಪೋಷಣೆ ಮಾಡುವುದು ಎಲ್ಲರ ಕರ್ತವ್ಯ ಎಂದು ತಿಳಿಸಿದರು.

ಮನೆ ಮುಂದೆ ಒಂದು ಗಿಡವನ್ನು ನೆಟ್ಟರು ಕೂಡ ಊರಿಗೆ ಒಂದು ವನವಾಗಿ ನಿರ್ಮಾಣವಾಗುತ್ತದೆ. ಅದ್ದಕ್ಕಾಗಿ ಮುಂದಿನ ದಿನಗಳಲ್ಲಿ ಒಳ್ಳೆಯ ಸುಂದರ ವಾತಾವರಣ ಬೇ–ಕೆಂದರೆ ಹೆಚ್ಚಿನ ಸಂಖ್ಯೆಯಲ್ಲಿ ಗಿಡಗಳನ್ನು ನೆಟ್ಟು ಬೆಳೆಸುವ ದೇಶದ ಪ್ರತಿಯೊಬ್ಬರ ಕರ್ತವ್ಯ ಎಂದು ಹೇಳಿದರು.

ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ್ಯ ಕೌಟಗೆ ಅವರು ಮಾತನಾಡಿ, ಗ್ರಾಮ ನೈರ್ಮಲ್ಯ ಕಾಪಾಡುವ ಜತೆಗೆ ಮನೆಯೊಂದು ಶೌಚಾಲಯ ನಿರ್ಮಿಸಿಕೊಳ್ಳುವುದು ಅತಿ ಅವಶ್ಯಕ ಇದೆ. ಬಯಲು ಶೌಚಾಲಯ ಸೃಷ್ಟಿಸುವ ಸ್ವಚ್ಛತೆ ಸಮಸ್ಯೆಗಳಿಂದ ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ಸಾಂಕ್ರಾಮಿಕ ರೋಗಗಳಿಗೆ ಹರಡುವ ಸಾರ್ವಜನರಲ್ಲಿ ಅಂತಕ ಮೂಡಿಸಿದೆ. ಮನೆಗೊಂದು ಶೌಚಾಲಯ ನಿರ್ಮಿಸಿಕೊಳ್ಳದರೆ ಗ್ರಾಮದ ಸುತ್ತಲಿನ ಪರಿಸರ ಸ್ವಚ್ಚತೆ ಇರಲು ಸಾಧ್ಯ ಎಂದು ಹೇಳಿದರು. ಇತೀಚಿಗೆ ಪ್ಲಾಸ್ಟಿಕ್ ಹಾವಳಿ ಹೆಚ್ಚಾಗುವುದರಿಂದ ಗ್ರಾಮದಲ್ಲಿ ಚರಂಡಿಗಳು ಜ್ಯಾಮವಾಗಿ ಸಾಂಕ್ರಾಮಿಕ ರೋಗ ಹರಡುತ್ತಿದೆ. ಆದರಿಂದ ಪ್ಲಾಸ್ಟಿಕ್ ಬಳಕೆ ಸಂಪೂರ್ಣ ನಿಷೇಧಿಸಬೇಕು. ಅಂದಾಗ ಮತ್ರಾ ಪರಿಸರ ಶುದ್ದ ಗಾಳಿ, ಶುದ್ದ ನೀರು ಸಿಗಲು ಸಾಧ್ಯ ಎಂದು ಹೇಳಿದರು. ಸೇವಾ ನಿವೃತ ಮುಖ್ಯ ಗುರು ಭಾವುರಾವ ಹೇಡೆ ಅವರು ಮಾತನಾಡಿ, ವಿದ್ಯಾರ್ಥಿ ಜೀವನ ಅತಿ ಮಹತ್ವದ್ದು, ಕಠಿಣ ಪರಿಶ್ರಮ ಮಾಡಿ, ಪ್ರಥಮ ಶ್ರೇಣಿಯಲ್ಲಿ ಉತೀರ್ಣಗೊಂಡು ಕಲಿತ ಶಾಲೆ ಮತ್ತು ನಿಮ್ಮ ಪೋಷಕರ ಕೀರ್ತಿ ತನ್ನಿ ಎಂದು ಹೇಳಿದರು.

ಉಮಾಕಾಂತ ಸ್ವಾಮಿಜಿ ಕಾರ್ಯಕ್ರದ ಅಧ್ಯಕ್ಷತೆ ವಹಿಸಿದರು. ಈ ಸಂದರ್ಭದಲ್ಲಿ ಹಿರಿಯ ಶಿಕ್ಷಕ ಗುಣಮಂತ ರಾಠೋಡ, ಶಿಕ್ಷಕಿ ತೆಜೆಮ್ಮ ಬಿರಾದಾರ, ಶಿವಕಾಂತ ಬಿರಾದಾರ, ಸಂಗಮೇಶ ಹೊಂಡಾಳೆ, ಕಲಾವತಿ, ಮಂಗಲಾ, ತಬ್ಬಸೂನ ಮತ್ತು ವಿದ್ಯಾರ್ಥಿಗಳು ಇದ್ದರು. ಎಚ್‌ಎಂ ಮಾರುತಿ ಪಾಂಚಾಳ ಸ್ವಾಗತಿ, ನಿರೂಪಿಸಿದರು.

## ಭಾರತ ಸಂಸ್ಕೃತಿಯಲ್ಲಿ ಮಾದಕ ವಸ್ತುಗಳಿಗೆ ನೆಲೆಯಿಲ್ಲ:ಎಂ.ಎಸ್.ಶ್ರೀಧರ್




ಬೀದರ. ಜೂ. 27 : ಭಾರತ ಸಂಸ್ಕೃತಿಯಲ್ಲಿ ಮಾದಕ ವಸ್ತುಗಳಿಗೆ ನೆಲೆಯಿಲ್ಲ ಆದರು ನಮ್ಮ ಈಗಿನ ಯುವ ಪಿಳಿಗೆ ಮಾದಕ ವಸ್ತುಗಳಿಗೆ ಬಲಿಯಾಗುತ್ತಿದ್ದಾರೆ ಇದರಿಂದ ಯುವಕರ ಯುವ ಕ್ರಾಂತಿ ಕೆಡವುತ್ತಿದೆ ಮತ್ತು ಪಾಶ್ಚಿಮತ್ಯ ಸಂಸ್ಕೃತಿಯ ಇದಕ್ಕೆ ಮೂಲ ಎಂದು ಬೀದರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಎಂ.ಎಸ್.ಶ್ರೀಧರ್ ತಿಳಿಸಿದರು.

ಅವರು ಗುರುವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೀದರ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೀದರ, ಹೇಮಾ ಎಜುಕೇಶನಲ್ ಐಂಡ್ ಚಾರಿಟೇಬಲ್ ಟ್ರಸ್ಟ್ ಬೀದರ, ಭವಾನಿ ಮಹಿಳಾ ಮಂಡಳ ಬೀದರ, ಸಂಯುಕ್ತ ಶಿಕ್ಷಣ ಸಂಸ್ಥೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಔರಾದ ತಾಲ್ಲೂಕಿನ ಕಂದಗೂಳ ಗ್ರಾಮದ ಡಾ. ಬಾಬು ಜಗಜೀವನರಾಮ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಾದಕ ವಸ್ತುವಿನ ವಿರೋಧ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಈಗಿನ ಒತ್ತಡದ ಜಗತ್ತಿನಲ್ಲಿ ಯುವ ಜನತೆ ವೇಗಕ್ಕೆ ತಾಳ ಹಾಕಲು ತಪ್ಪುದಾರಿ ಹಿಡಿಯುತ್ತಿದ್ದಾರೆ. ನಮ್ಮ ಇಂದಿನ ಜೀವನಶೈಲಿಯಲ್ಲಿ ಮೋಜು, ಮಸ್ತಿ, ತಡ ರಾತ್ರಿಯ ಪಾರ್ಟಿ ಇತ್ಯಾದಿಗಳು ಮಾಮೂಲಿಯಾಗಿವೆ. ಈ ಹಂತದಲ್ಲಿ ಹದಿ ಹರೆಯದ ಯುವ ಜನರು ದಾರಿ ತಪ್ಪುವುದು ಸಾಮಾನ್ಯ. ಈ ದಿಸೆಯಲ್ಲಿ ತಂದೆ–ತಾಯಂದಿರ ಆಸರೆ, ಮಾರ್ಗದರ್ಶನ ಅತೀ ಅವಶ್ಯಕವಾಗಿದೆ ಎಂದರು. ಈ ಸಂದರ್ಭದಲ್ಲಿ ಡಯಟ್ ಬೀದರನ ನಿವೃತ್ತ ಉಪನ್ಯಾಸಕರಾದ ಟಿ.ಜೆ. ಹಾದಿಮನಿ, ಬೀದರ ಹಿರಿಯ ಸಾಹಿತಿ ವಿಜಯಲಕ್ಷ್ಮಿ ??ೀಕೌಟಗೆ, ಕಂದಗೂಳ ಪ್ರಫುಲ್ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಮೈಜೊದ್ದಿನ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿ ರತ್ನ ಸುಭಾಷ, ನಿಟ್ಟೂರ ಪಾಲಿಟೆಕ್ನಿಕ್ ಕಾಲೇಜಿನ ಅಧ್ಯಕ್ಷ ಬಸವರಾಜ ಪಾಟಿಲ್, ಸದಸ್ಯ ನಾಗರಾಜ ಹುಲಸೂರೆ, ಜಿಲ್ಲಾ ಮಹಿಳಾ ದೂರು ನಿರ್ವಹಣಾ ಸಮಿತಿ, ಕರ್ನಾಟಕ ಲೋಕಯುಕ್ತ ಬೀದರ, ಡಾ. ಬಾಬು ಜಗಜೀವನರಾಮ ಪ್ರೌಢ ಶಾಲೆಯ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರಮ ಮತ್ತು ಅಧ್ಯಯನದಲ್ಲಿ ಪ್ರತಿಭೆಯ ಅನಾವರಣ: ಪ್ರೊ. ವಿಜಯಲಕ್ಷ್ಮಿ ಗಡ್ಡೆ.

(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಜೂ 27 ನಿರಂತರ ಅಧ್ಯಯನ ಮತ್ತು ಸತತ ಶ್ರಮದಿಂದ ವ್ಯಕ್ತಿಯಲ್ಲಿ ಹುದುಗಿರುವ ಪ್ರತಿಭೆ ಅನಾವರಣಗೊಳ್ಳುತ್ತದೆ. ಶ್ರದ್ಧೆ ಮತ್ತು ಬದ್ಧತೆಯಿಂದ ಮಾಡುವ ಕೆಲಸಗಳೇ ಮನುಷ್ಯನ ಅಸ್ಮಿತೆ ರೂಪಿಸುತ್ತವೆ ಎಂದು ನಿವೃತ್ತ ಪ್ರಾಧ್ಯಾಪಕಿ ಹಾಗೂ ಬಿಡಿಪಿಸಿ ನಿರ್ದೇಶಕಿ ಪ್ರೊ. ವಿಜಯಲಕ್ಷ್ಮಿ ಗಡ್ಡೆ ಹೇಳಿದರು.



ಶ್ರೀ ಬಸವೇಶ್ವರ ಪದವಿ ಕಾಲೇಜಿನಿಂದ ನಗರದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ 'ಅಂಕುರ ಉತ್ಸವ 2025' ಸಮಾರಂಭದಲ್ಲಿ ಮಾತನಾಡಿದ ಅವರು, ಯಾವುದೇ ಫಲಾಪೇಕ್ಷೆ ಇಲ್ಲದೆ ನಿಸ್ವಾರ್ಥದಿಂದ ದುಡಿಯುವುದೇ ನಿಜವಾದ ಕಾಯಕ ಎಂದರು.

ಬಿಡಿಪಿಸಿ ನಿರ್ದೇಶಕ ಮಲ್ಲಯ್ಯ ಸ್ವಾಮಿ ಹಿರೇಮಠ ಅವರು ಮಾತನಾಡಿ, ಅಧ್ಯಾಪಕ ವೃತ್ತಿ ಅತ್ಯಂತ ಪವಿತ್ರವಾಗಿದೆ. ಜಗತ್ತಿನ ಎಲ್ಲ ಭಾಷೆಗಳ ಜ್ಞಾನ ವಿದ್ಯಾರ್ಥಿಗಳಿಗೆ ತಲುಪಿಸುವ ದೀಪವಾಗಿ ಶಿಕ್ಷಕ ಕೆಲಸ ಮಾಡುತ್ತಾನೆ ಎಂದರು.

ಬಸವಾದಿ ಶರಣರ ಚಿಂತನೆಗಳು ಅರಿತು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕಿದೆ. ವಿಜ್ಞಾನದ ವಿದ್ಯಾರ್ಥಿಗಳು ಹೆಚ್ಚಿನ ಪ್ರಮಾಣದಲ್ಲಿ ವೈಚಾರಿಕ ಅರಿವು ಮತ್ತು ವೈಜ್ಞಾನಿಕ ತಿಳುವಳಿಕೆ ಪಡೆಯಬೇಕು ಎಂದರು.

ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಕಲೆ, ಸಾಹಿತ್ಯ, ರಂಗಭೂಮಿ, ಸಿನಿಮಾಗಳು ಪ್ರತಿಯೊಬ್ಬರಲ್ಲಿ ಸಾಮಾಜಿಕ ಮತ್ತು ಸಾಂಸ್ಕೃತಿಕ ಅರಿವು ಮೂಡಿಸುತ್ತವೆ. ಪ್ರತಿಯೊಬ್ಬರಲ್ಲಿ ಹುದುಗಿದ ಸಂವೇದನೆ ಹಾಗೂ ಸಾಂಸ್ಕೃತಿಕ ಪ್ರಜ್ಞೆ ಕಲೆಯಾಗಿ ರೂಪುಗೊಳ್ಳುವ ಸಾಧ್ಯತೆ ಇದೆ. ವಿದ್ಯಾರ್ಥಿಗಳ ಪ್ರತಿಭೆಗೆ ಅಂಕುರ ಉತ್ಸವ ವೇದಿಕೆಯಾಗಿದೆ ಎಂದರು.

ಸಮಕಾಲೀನ ಮಾನವಿಕ, ಸಾಹಿತ್ಯಕ ಹಾಗೂ ವೈಜ್ಞಾನಿಕ, ಬಾಹ್ಯಾಕಾಶ, ತಂತ್ರಜ್ಞಾನ ಕ್ಷೇತ್ರಗಳಲ್ಲಿ ನಡೆಯುತ್ತಿರುವ ಸಂಶೋಧನೆಗಳನ್ನು ಗಂಭೀರವಾಗಿ ವ್ಯಾಸಾಂಗ ಮಾಡುವ ಅರಿವು ವಿಸ್ತಾರಿಸಿಕೊಳ್ಳಬೇಕು ಎಂದರು.

ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಚಿರಡೆ, ನಿರ್ದೇಶಕ ವೀರಣ್ಣ ಹಲಶೆಟ್ಟೆ, ಅಕ್ಕಮಹಾದೇವಿ ಕಾಲೇಜು ಪ್ರಾಚಾರ್ಯ ಮಾಯಾ ಮುರಾಳೆ, ಶ್ರೀ ಬಸವೇಶ್ವರ ಸ್ನಾತಕೋತ್ತರ ಕಾಲೇಜು ಪ್ರಾಚಾರ್ಯರಾದ ಡಾ ಶಾಂತಲಾ ಪಾಟೀಲ, ಪವನ ಪಾಟೀಲ , ಶ್ರೀನಿವಾಸ ಉಮಾಪುರೆ, ಡಾ.ಬಸವರಾಜ ಖಂಡಾಳೆ, ಅಶೋಕರೆಡ್ಡಿ, ಸಚಿನ್ ಬಿಡವೆ, ಗಂಗಾಧರ ಸಾಲಿಮಠ, ರೋಷನ್ ಬಿ, ಎಂಡಿ ಜಬಿ, ಶೃತಿ ನೀಲಮಠ, ಜಗದೇವಿ ಜವಳಗೆ, ಸಂಗೀತಾ ಮಹಾಗಾವೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಹಾಜ್ರಾ ಹಾಗೂ ಪೃಥ್ವಿ ನಿರೂಪಿಸಿದರು. ಪಾರ್ವತಿ ಸ್ವಾಗತಿಸಿದರು. ಸ್ನೇಹಾ ರಾಜಪೂತ್ ವಂದಿಸಿದರು.

## ಕೋಟನೂರ (ಡಿ) ದಲ್ಲಿ ಕೃಷಿ ಪಂಪ್ ಉಪಕರಣಗಳ ತಂತ್ರಜ್ಞರಿಗೆ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27–2025–26ನೇ ಸಾಲಿನಲ್ಲಿ ಕೃಷಿ ಪಂಪು ಉಪಕರಣಗಳ ತಂತ್ರಜ್ಞರಿಗೆ ಬಿಇಇ ಸ್ಟಾರ್ ಲೇಬಲ್‌ವುಳ್ಳ ಇಂಧನ ದಕ್ಷ ಪಂಪಸೆಟ್ ಮತ್ತು ನೀರಿನ ಸಂರಕ್ಷಣೆ ಕುರಿತು ಕೋಟನೂರ(ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರ ಕಚೇರಿಯಲ್ಲಿ ಶುಕ್ರವಾರ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಬಿಜಾಪೂರ ಕೃಷಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ರಮೇಶ ಬೀರಗೆ ಅವರು ಕೃಷಿ ಕ್ಷೇತ್ರದಲ್ಲಿ ಬಿ.ಇ.ಇ ಸ್ಟಾರ್ ರೇಟೆವುಳ್ಳ ಪಂಪುಗಳನ್ನು ಬಳಸುವುದರ ಕುರಿತು, ಕಲಬುರಗಿ ಸೆಲ್ಕೋ ಸೋಲಾರ ಲೈಟ್ ಪ್ರೈವೇಟ್ ಲಿಮಿಟೆಡ್‌ನ ಸಿನಿಯರ್ ಎಕ್ಸಿಕ್ಯೂಟಿವ್ ರಾದ ವಿಷ್ಣು ಅವರು ಸೋಲಾರ ಪಂಪ ಸೆಟ್ ನಿರ್ವಹಣೆ ಕುರಿತು, ಸಹಾಯಕ ಪ್ರಾಧ್ಯಾಪಕ ಡಾ.ಮಲ್ಲಿಕಾರ್ಜುನ ರೆಡ್ಡಿ ಅವರು ನೀರಿನ ಸಂರಕ್ಷಣೆ ಹಾಗೂ ಬೋರ್‌ವೆಲ್ ರೀಚಾರ್ಜ್ ತಂತ್ರಗಳ ಕುರಿತು ಮಾಹಿತಿ ನೀಡಿದರು. ಹಾಳ ಸುಲ್ತಾನಪೂರ ಪ್ರಗತಿ ಪರ ರೈತರಾದ ಶರಣಬಸಪ್ಪ ಪಾಟೀಲ್ ರವರು ಸೌರಶಕ್ತಿ ಆಧಾರಿತ ಕೃಷಿ ಉಪಕರಣಗಳ ಹಾಗೂ ಪಂಪ ಸೆಟ್‌ಗಳ ಕುರಿತು ಮಾಹಿತಿ ನೀಡಿದರು.

ಈ ಕಾರ್ಯಾಗಾರದಲ್ಲಿ ಕಲಬುರಗಿ ಕೋಟನೂರ(ಡಿ) ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರು–1 ರಾದ ಸೋಮಶೇಖರ ಬಿರಾದರ, ಸಹಾಯಕ ಕೃಷಿ ನಿರ್ದೇಶಕ ಅನಿಲ ಕುಮಾರ, ರೈತ ಮಹಿಳೆ ನೀಲಕ್ಕ ನರಸಲಗಿ, ಕೃಷಿ ಅಧಿಕಾರಿ ಸುಜಾತಾ. ರಾಜನಾಳಕರ ಮತ್ತು ಯಾಸ್ಮೀನ ಉಪಸ್ಥಿತರಿದ್ದರು.

## ನರಸಪ್ಪ ನರನಾಳ ಅವರ 38ನೇ ಜನ್ಮ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಯಾವುದೇ ಸಮಯದಲ್ಲಾಗಲಿ ಎಲ್ಲರ ಜೊತೆಗೂ ಸರಳವಾಗಿ, ಒಳ್ಳೆಯ ರೀತಿಯಲ್ಲಿ ನಡೆದುಕೊಳ್ಳುವಂತಹ ವ್ಯಕ್ತಿತ್ವ ಹೊಂದಿದ್ದ ಯುವ ಉದ್ಯಮಿ ಹಾಗೂ ಬಿಜೆಪಿ ಎಸ್.ಟಿ.ಮೋರ್ಚಾ ಜಿಲ್ಲಾ ಕಾರ್ಯದರ್ಶಿ ನರಸಪ್ಪ ಎಂ. ನರನಾಳ ಅವರ 38ನೇ ಜನ್ಮ ದಿನಾಚರಣೆಯನ್ನು ಪಟ್ಟಣ ಪ್ರಿಯಾ ಫೋಟೋ ಸ್ಟುಡಿಯೋನಲ್ಲಿ ಕೇಕ್ ಕತ್ತರಿಸುವ ಮೂಲಕ ಅದ್ಧುರಿಯಾಗಿ ಆಚರಿಸಲಾಯಿತು. ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ಪ್ರಪಂಚವು ಜ್ಞಾನವಿದ್ದವರನ್ನು ಮಾತ್ರ ಕೈಮಾಡಿ ಕರೆಯುತ್ತದೆ. ನಾವು ಮಾಡಿದ ಕೆಲಸ ಅಳಿಸಿ ಹೋಗದಂತೆ ಇರಬೇಕು. ಹಿರಿಯರು ನಮಗೆ ಒಳ್ಳೆಯ ಮಾರ್ಗದರ್ಶನ ಮಾಡಿಹೋಗಿದ್ದಾರೆ. ಪ್ರೀತಿ ಮಾರುಕಟ್ಟೆಯಲ್ಲಿ ಸಿಗುವ ವಸ್ತುವಲ್ಲ ಅದನ್ನು ಅಂತರಾತ್ಮದಿಂದಲೇ ಪಡೆಯಬೇಕೆಂದರು. ಸಂಜೀವನ ಭೋಸ್ಲೆ, ಹಸನ್ ಲಚ್ಚಿಕೆ, ಶಾಮರಾವ ಭುತ್ತಾಳೆ, ದತ್ತಾತ್ರೇಯ ಪೂಜಾರಿ, ರಾಜು ಪೂಜಾರಿ, ವೆಂಕಟ ಪೂಜಾರಿ, ರಾಜಕುಮಾರ ಆರ್. ಹಡಪದ ಇವರುಗಳು ನರಸಪ್ಪ ನರನಾಳ ಅವರಿಗೆ ಹುಟ್ಟು ಹಬ್ಬದ ಶುಭಾಶಯಗಳು ತಿಳಿಸುತ್ತ ದೇವರು ಅವರಿಗೆ ಸುಖ, ಶಾಂತಿ, ನೆಮ್ಮದಿ, ಆಯುಷ್ಯ, ಆರೋಗ್ಯ, ಭಾಗ್ಯ ನೀಡಿ ಆಶೀರ್ವದಿಸಲೆಂದು ಪ್ರಾರ್ಥಿಸಿದರು.

## ಜೂನ್ 30 ರಂದು ಪೋಲಕಪಲ್ಲಿಯಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮ

ಕಲಬುರಗಿ,ಜೂ.27–ಚಿಂಚೋಳಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ತಾಲೂಕು ಆಡಳಿತ ಹಾಗೂ ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ವಿವಿಧ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಮಕ್ಕಳ ಸಹಾಯವಾಣಿ 1098/112 ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಇದೇ ಜೂನ್ 30 ರಂದು ಬೆಳಿಗ್ಗೆ 10 ಗಂಟೆಗೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮನ್ನು ಚಿಂಚೋಳಿ ತಾಲೂಕಿನ ಪೋಲಕಪಲ್ಲಿಯ ಆದರ್ಶ ವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಚಿಂಚೋಳಿ ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವೆಗಳ ಸಮಿತಿ ಸದಸ್ಯ ಕಾರ್ಯದರ್ಶಿ ದತ್ತಕುಮಾರ್ ಜವಳಕರ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ತಾಲೂಕು ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರು ಹಾಗೂ ತಹಶೀಲ್ದಾರ ಸುಬ್ಬಣ್ಣ ಜಮಖಂಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಚಿಂಚೋಳಿ ನ್ಯಾಯವಾದಿಗಳ ಸಂಘದ ಶ್ರೀಮಂತ ಬಿ. ಕಟ್ಟಿಮನಿ, ಸಹಾಯಕ ಸರ್ಕಾರಿ ಅಭಿಯೋಜಕ ಶಾಂತಕುಮಾರ್ ಜಿ. ಪಾಟೀಲ, ಅಪರ ಸರ್ಕಾರಿ ವಕೀಲ ಎಸ್.ಎನ್. ಬಂಡಿ, ಕ್ಷೇತ್ರ ಶಿಕ್ಷಣಾಧಿಕಾರಿ ವಿ. ಲಕ್ಷ್ಮಯ್ಯಾ, ಕ್ಷೇತ್ರ ಸಮನ್ವಯ ಅಧಿಕಾರಿ ನಾಗಶೆಟ್ಟಿ ಭದ್ರಶೆಟ್ಟಿ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು.

ಕಲಬುರಗಿ ಉಪವಿಭಾಗದ ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪಾ ಆರ್. ಹಳಿಮನಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸವಿತಾ ಮಡಿವಾಳ, ಪೊಲೀಸ್ ಅರಕ್ಷಕ ನಿರೀಕ್ಷಕ ಗಂಗಮ್ಮ, ಕಾರ್ಮಿಕ ನಿರೀಕ್ಷಕ ಶಿವರಾಜ್ ಪಾಟೀಲ, ಪೋಲಕಪಲ್ಲಿ ಆದರ್ಶ ವಿದ್ಯಾಲಯ ಮುಖ್ಯಗುರು ದೇವೀಂದ್ರಪ್ಪ ಹೋಳ್ಕರ್, ಮಾರ್ಗದರ್ಶಿ ಸಂಸ್ಥೆಯ ನಿರ್ದೇಶಕ ವಿಠ್ಠಲ್ ಚಿಕಣಿ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂತೋಷ ಕುಲಕರ್ಣಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಸಹಾಯವಾಣಿ ಜಿಲ್ಲಾ ಸಂಯೋಜಕ ಬಸವರಾಜ ಟೆಂಗಳಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

## ಜೂನ್ 28 ರಂದು ಅಫಜಲಪುರದಲ್ಲಿ ಕಾನೂನು ಅರಿವು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27–ಅಫಜಲಪುರ ತಾಲೂಕಾಡಳಿತ, ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಸಂಸ್ಕಾರ ಪ್ರತಿಷ್ಠಾನ, ಮಾರ್ಗದರ್ಶಿ ಸಂಸ್ಥೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಜೂನ್ 28 ರಂದು ಶನಿವಾರ ಬೆಳಿಗ್ಗೆ 10.30 ಗಂಟೆಗೆ ಅಫಜಲಪುರ ತಾಲೂಕು ನ್ಯಾಯಾಲಯ ಆವರಣದಲ್ಲಿ ಕಾನೂನು ಅರಿವು ಕಾರ್ಯಕ್ರಮನ್ನು ಹಮ್ಮಿಕೊಳ್ಳಲಾಗಿದೆ.

ಅಫಜಲಪುರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷ ವಿನಾಯಕ ಮಾಯಣ್ಣವರ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ತಹಶೀಲ್ದಾರ ಸಂಜೀವಕುಮಾರ್ ದಾಸರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಸಿವಿಲ್ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿ ಅನೀಲ ಅಮಾತೆ, ಸರ್ಕಾರಿ ಸಹಾಯಕ ಅಭಿಯೋಜಕರು ಮತ್ತು ತಾಲೂಕು ಕಾನೂನು ಸೇವಾ ಸಮಿತಿಯ ಕಾರ್ಯನಿರ್ವಾಹಕ ಕಾರ್ಯದರ್ಶಿ ಜಯಶ್ರೀ ಪಿ., ತಾಲೂಕು ನ್ಯಾಯವಾದಿ ಸಂಘದ ಅಧ್ಯಕ್ಷ ಎಸ್.ಎಸ್. ಪಾಟೀಲ್, ಪೊಲೀಸ್ ಇಲಾಖೆಯ ಸೋಮಲಿಂಗ ವಡೆಯರ್, ಕ್ಷೇತ್ರ ಶಿಕ್ಷಣಾಧಿಕಾರಿ ಯುವರಾಜ ಗಾಡಿ, ಕಲಬುರಗಿ 2ನೇ ವೃತ್ತದ ಹಿರಿಯ ಕಾರ್ಮಿಕ ನಿರೀಕ್ಷಕ ರವೀಂದ್ರಕುಮಾರ್ ಬಲ್ಲೂರ್, ಮಾರ್ಗದರ್ಶಿ ಸಂಸ್ಥೆಯ ನಿರ್ದೇಶಕ ಆನಂದರಾಜ, ಸಂಸ್ಕಾರ ಪ್ರತಿಷ್ಠಾನ ಸಂಸ್ಥೆಯ ನಿರ್ದೇಶಕ ವಿಠ್ಠಲ ಚಿಕಣಿ, ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಹೆಚ್. ಎಸ್. ಪಾಟೀಲ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂತೋಷ ಕುಲಕರ್ಣಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

## ಇಡಬ್ಲ್ಯೂಎಸ್ ಪ್ರಮಾಣಪತ್ರ ಪಡೆದುಕೊಳ್ಳಿ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 27– ಆರ್ಥಿಕವಾಗಿ ದುರ್ಬಲರಾಗಿರುವ ಮತ್ತು ಬಡವರಾಗಿರುವ ಬ್ರಾಹ್ಮಣ ಸಮುದಾಯದ ಜನರು ರಾಜ್ಯ ಸರಕಾರದ ಕಂದಾಯ ಇಲಾಖೆಯಿಂದ 'ಆರ್ಥಿಕವಾಗಿ ದುರ್ಬಲ ವರ್ಗ'ದ (ಇಡಬ್ಲ್ಯೂಎಸ್) ಪ್ರಮಾಣಪತ್ರ ಪಡೆದುಕೊಳ್ಳಬೇಕು ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಹುಮ್ನಾಬಾದ್ ತಾಲೂಕಾ ಉಪಾಧ್ಯಕ್ಷರಾದ ಮಿಲಿಂದ್ ಕುಲಕರ್ಣಿ ಮನವಿ ಮಾಡಿದ್ದಾರೆ. 'ಇಡಬ್ಲ್ಯುಎಸ್ ಎಂದರೆ ಆರ್ಥಿಕವಾಗಿ ದುರ್ಬಲ ವರ್ಗದವರಿಗೆ (ಎಕನಾಮಿಕಲಿ ವೀಕರ್ಸ್ ಸೆಕ್ಷನ್) ಮೀಸಲಾತಿ ನೀಡುವ ಯೋಜನೆಯಾಗಿದೆ. ಇದು ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಮೀಸಲಾತಿ ವ್ಯವಸ್ಥೆಯಾಗಿದೆ. ಈ ಯೋಜನೆಯಡಿ, ಆರ್ಥಿಕವಾಗಿ ದುರ್ಬಲವಾಗಿರುವ ಸಾಮಾನ್ಯ ವರ್ಗದವರಿಗೆ ಶಿಕ್ಷಣ ಮತ್ತು ಸರ್ಕಾರಿ ಉದ್ಯೋಗಗಳಲ್ಲಿ ಶೇ.10ರಷ್ಟು ಮೀಸಲಾತಿ ನೀಡಲಾಗುತ್ತದೆ. ಅಲ್ಲದೇ ಕೇಂದ್ರ ಮತ್ತು ರಾಜ್ಯ ಸರಕಾರದ ವಿವಿಧ ಯೋಜನೆಗಳ ಲಾಭ ಪಡೆದುಕೊಳ್ಳಲು ಇಡಬ್ಲ್ಯೂಎಸ್ ಪ್ರಮಾಣಪತ್ರ ಕಡ್ಡಾಯವಾಗಿರುತ್ತದೆ. ಹೀಗಾಗಿ ಬ್ರಾಹ್ಮಣ ಸಮುದಾಯದ ಜನರು ತಡಮಾಡದೇ ಕೂಡಲೇ ಪಡೆದುಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ. ಇದರ ಬಗ್ಗೆ ಮಾಹಿತಿಯನ್ನು ಇಲದವರಿಗೆ ಬೀದರ್ ಜಿಲ್ಲೆ ಎಲ್ಲಾ ಬ್ರಾಹ್ಮಣ ಸಮುದಾಯದ ಜನರು, ಮಿಲಿಂದ್ ಕುಲಕರ್ಣಿ ರಾಜೇಶ್ವರ ಅವರಿಗೆ ಮೂ. 94815 34813 ರಿಗೆ ಸಂಪರ್ಕಿಸಿ ಎಂದು ಪ್ರಕಟಣೆ ತಿಳಿಸಿದ್ದಾರೆ.



## ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣವಾಗಿ ನಿಷೇಧ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27–ಬಾಲ ಹಾಗೂ ಕಿಶೋರ ಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇಧಿಸಲು ಬಾಲ್ಯಾವಸ್ಥೆ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ತಿದ್ದುಪಡಿ 2016 ರನ್ನು ಜಾರಿಗೆ ತರಲಾಗಿದೆ ಎಂದು ಜೇವರ್ಗಿ ತಾಲೂಕಾ ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಸಿವಿಲ್ ನ್ಯಾಯಾಧೀಶರಾದ ಕಾಶಿನಾಥ ವಿ ಉಪ್ಪಾರ ಅವರು ಹೇಳಿದರು.

ಜೇವರ್ಗಿ ತಾಲೂಕಾ ಕಾನೂನು ಸೇವಾ ಸಮಿತಿ, ತಾಲೂಕಾ ನ್ಯಾಯವಾದಿಗಳ ಸಂಘ, ತಾಲೂಕಾಡಳಿತ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ವಿವಿಧ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಮಕ್ಕಳ ಸಹಾಯವಾಣಿ–1098/112 ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಚನ್ನೂರ ಆದರ್ಶ ವಿದ್ಯಾಲಯದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ" ಅರಿವು ಮತ್ತು ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಈ ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. 14 ರಿಂದ 18ರ ವಯಸ್ಸಿನ ಕಿಶೋರ ಕಾರ್ಮಿಕ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪಾ ಆರ್ ಹಳಿಮನಿ ಅವರು ಮಾತನಾಡಿ, ಯಾವುದೇ ಕಾರಣಕ್ಕೂ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳಬಾರದು, ಒಂದು ವೇಳೆ ಕೆಲಸಕ್ಕೆ ನೇಮಿಸಿದ್ದಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ತಿದ್ದುಪಡಿ 2016 ರ ಅನ್ವಯ ಕಾನೂನು ಕ್ರಮ ಜರುಗಿಸಲಾಗುವುದು. ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ 20,000 ರೂ. ರಿಂದ 50,000 ರೂ. ಗಳ ವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯವು ರೀಟ್ ಅರ್ಜಿ (ಸಿವಿಲ್) ಸಂಖ್ಯೆ 465/1986 ರಲ್ಲಿ ನೀಡಿರುವ ನಿರ್ದೇಶನದ್ವಯ ತಪ್ಪಿತಸ್ಥ ಮಾಲೀಕರು ತಾವು ನಿಯೋಜನೆಗೊಂಡ ಪ್ರತಿ ಮಗುವಿಗೆ 20,000 ರೂ. ಗಳ ಪರಿಹಾರವನ್ನು ಮಕ್ಕಳ ಪುನರ್ವಸತಿಗೆ ರಚಿಸಲಾದ ಕಲ್ಯಾಣ ನಿಧಿಗೆ ಪಾವತಿಸಬೇಕಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಜೇವರ್ಗಿ ತಹಶೀಲ್ದಾರ ಮಲ್ಲಣ್ಣಾ ಯುಗೋಡ್ ಅವರು ಮಾತನಾಡಿ, ಬಾಲ್ಯಾವಸ್ಥೆ ಹಾಗೂ ಕಿಶೊರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 1986 ರನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣ ನಿಷೇಧಿಸಿದ್ದು ಹಾಗೂ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ ಹಾಗೂ ಸಂಸ್ಥೆಯ (ವಾರೆಂಟ್ ರಹಿತ ಬಂಧಿಸಬಹುದಾದ) ಅಪರಾಧವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜೇವರ್ಗಿ ಸಹಾಯಕ ಸರಕಾರಿ ಅಭಿಯೋಜಕ ನಾಗವಣಿ ಧನ್ನಾ, ಜೇವರ್ಗಿ ತಾಲೂಕಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಸೂಗೂರು, ನ್ಯಾಯವಾದಿ ಅಪ್ಪಸಾಬ ಕೋಳಕೂರು, ಸಿಡಿಪಿಓ ಎಸ್ ಎಂ ಪಾಟೀಲ್, ಪೊಲೀಸ್ ವೃತ್ತ ನಿರೀಕ್ಷಕ ರಾಜಾಸಾಬ್ ನದಾಫ್, ಕಲಬುರಗಿ 3ನೇ ವೃತ್ತದ ಹಿರಿಯ ಕಾರ್ಮಿಕ ನಿರೀಕ್ಷಕ ಕೆ.ಎಸ್.ಪ್ರಸನ್ನ, ಡಿಇಓ ಅನಂತ ಜೋಶಿ, ಡಾನ್ ಭಾಸ್ಕೋ ಸಂಸ್ಥೆ ಮತ್ತು ಮಾರ್ಗದರ್ಶಿ ಸಂಸ್ಥೆ, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಹಾಗೂ ಶಾಲಾ ಮಕ್ಕಳು ಮತ್ತು ಮುಖ್ಯಗುರುಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಲಬುರಗಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂತೋಷ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಶಾಂತಕುಮಾರ ಅವರು ವಂದಿಸಿದರು.

## ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:

ಬೀದರ ಕಾರ್ಯ ಮತ್ತು ಪಾಲನೆ ವಿಭಾಗದ ವ್ಯಾಪ್ತಿಯಲ್ಲಿ ಔರಾದ್ ಉಪ ವಿಭಾಗದ ಕಮಲನಗರ – (ಡಿಗ್ಗಿ) 11ಕೆವಿ ಉಪ ಕೇಂದ್ರದಲ್ಲಿ ತುರ್ತು ಕೆಲಸದ ಪ್ರಯುಕ್ತ ಜೂ.28ರಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆಯವರೆಗೆ 11ಕೆವಿ ತೋರಣಾ, 11ಕೆವಿ ಡೋಣಗಾಂವ, 11ಕೆವಿ ಮುರ್ಕಿ, – 11ಕೆವಿ ಕಮಲನಗರ, 11ಕೆವಿ ಚಾಂಡೇಶ್ವರ, 11ಕೆವಿ – ಮದನೋರ್, 11ಕೆವಿ ಹತ್ತಗಾಂವ ಹಾಗೂ 11ಕೆವಿ ಸಂಗಮ್, * 33ಕೆವಿ ಕಮಲನಗರ ಮತ್ತು 33ಕೆವಿ ಆಳಂದಿ ಫೀಡರನಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

## ಸಮಾಜ ಕಲ್ಯಾಣ ಇಲಾಖೆ : ವಿದ್ಯಾರ್ಥಿವೇತನ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂನ್ 27–ಸಮಾಜ ಕಲ್ಯಾಣ ಇಲಾಖೆದಿಂದ ಅನುಷ್ಠಾನ ಮಾಡಲಾಗುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶಾತಿಗೆ ಕಾರ್ಯಕ್ರಮಗಳಡಿ ಪ್ರತಿಶಿತ ಗುರಿ ಸಾಧಿಸಲು 2025ರ ಜೂನ್ ಮಾಹೆಯಲ್ಲಿ ವಿದ್ಯಾರ್ಥಿ ವೇತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್ 1 ಬೇಬಿ ಲಕ್ಷ್ಮೀ ಹುಲ್ಸವಾರ ಅವರು ತಿಳಿಸಿದ್ದಾರೆ.

ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ಮತ್ತು ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶಾತಿಯ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಎಲ್ಲಾ ಅರ್ಹ ವಿದ್ಯಾರ್ಥಿಗಳು ಈ ಕಾರ್ಯಕ್ರಮದಡಿ ಫಲಾನುಭವಿಗಳ ಸಂಖ್ಯೆಯನ್ನು ಹೆಚ್ಚಿಸುವ ಸಲುವಾಗಿ ಹಾಗೂ ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನ ಮಾಡುವ ಸಂಬಂಧ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿವೇತನ ಅಭಿಯಾನ ಪ್ರತಿ ತಾಲೂಕು ಪ್ರತಿ ಗ್ರಾಮದಲ್ಲಿ ಏರ್ಪಡಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಂ.ಫಿಲ್ ಮತ್ತು ಪಿಎಚ್.ಡಿಗೆ ನೋಂದಣಿಯಾಗಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಫೆಲೋಶಿಪ್: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27–ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಎಂ.ಫಿಲ್. ಮತ್ತು ಪಿಎಚ್.ಡಿಗೆ ನೋಂದಣಿಯಾಗಿ ವ್ಯಾಸಂಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಂದ ಸೇವಾ ಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅಲ್ಪಸಂಖ್ಯಾತ ಸಮುದಾಯಕ್ಕೆ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ) ಸೇರಿದವರಾಗಿರಬೇಕು. ಕೋರ್ಸ್ ಪೂರ್ಣಕಾಲಿಕ ವಿದ್ಯಾರ್ಥಿಗಳು ಮಾತ್ರ ಅರ್ಹರಿರುತ್ತಾರೆ. ಪಿ.ಎಚ್.ಡಿ/ ಎಂ.ಫಿಲ್ ವ್ಯಾಸಂಗವನ್ನು ಭಾರತ/ಕರ್ನಾಟಕ ರಾಜ್ಯದ ಶಾಸನಬದ್ಧ ಅಂಗೀಕೃತವಾದ ವಿಶ್ವವಿದ್ಯಾನಿಲಯಗಳಲ್ಲಿ ಮಾಡಬೇಕು. ಗರಿಷ್ಠವಯೋಮಿತಿ 35 ವರ್ಷ ಮೀರಿರಬಾರದು. ವಿದ್ಯಾರ್ಥಿಯ ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ 8 ಲಕ್ಷ ರೂ. ಮೀರಿರಬಾರದು. ವಿದ್ಯಾರ್ಥಿಯು ಯಾವುದೇ ಸರ್ಕಾರಿ ಉದ್ಯೋಗಿಯಾಗಿರಬಾರದು.

ಅರ್ಹ ಅರ್ಜಿದಾರರು https://sevasindu.karnataka.gov.in/sevasindhu/Departmentservices ವೆಬ್‌ಸೈಟ್‌ದಲ್ಲಿ ಲಿಂಕ್ ಮೂಲಕ ಆನ್‌ಲೈನ್ ಮೂಲಕ 2025ರ ಸೆಪ್ಟೆಂಬರ್ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ನಂತರ ಅರ್ಜಿ ಸಲ್ಲಿಸಿದ ಹಾರ್ಡ್ ಕಾಪಿಯನ್ನು ಅಗತ್ಯ ದಾಖಲೆಗಳೊಂದಿಗೆ ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತರ ಕಚೇರಿಯ ಮೊದಲನೇ ಮಹಡಿಯಲ್ಲಿರುವ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ವಿವರವಾದ ಮಾಹಿತಿಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀಕೃತ https://dom.karnataka.gov.in ವೆಬ್‌ಸೈಟ್‌ಗೆ ಸಂಪರ್ಕಿಸಲು ಕೋರಲಾಗಿದೆ.

## ವಲಯ ಅರಣ್ಯ ಕಛೇರಿಗೆ ಎ.ಸಿ.ಎಫ್. ಭೇಟಿ ಸಿಬ್ಬಂದಿ ವರ್ಗದಿಂದ ಸನ್ಮಾನ





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ;

ಬಸವಕಲ್ಯಾಣ ಅರಣ್ಯ ಉಪವಿಭಾಗದ ಸಹಾಯಕ ಸಂರಕ್ಷಣಾ ಧಿಕಾರಿಗಳಾದ ಕರಿಯಪ್ಪಾ ಪೂಜಾರಿ ಅಧಿಕಾರ ವಹಿಸಿಕೊಂಡ ಮೇಲೆ ಪ್ರಥಮ ಬಾರಿಗೆ ಪ್ರಾದೇಶಿಕ ಅರಣ್ಯ ವಲಯ ಕಛೇರಿಗೆ ಶುಕ್ರವಾರ ಬೇಟ್ಟಿ ನೀಡಿದಾಗ ವಲಯ ಅರಣ್ಯಾಧಿಕಾರಿಯಾದ ಕು. ಐಶ್ವರ್ಯ ಗೊಬ್ಬೂರು ಸನ್ಮಾನಿಸಿ ಗೌರವಿಸಿದರು ಶುಭಾಶಯ ಕೋರಿದರು ಸಿಬ್ಬಂದಿ ವರ್ಗದವರಾದ ಅಂಬಾದಾಸ, ಜಗದೀಶ ಉಪಸ್ಥಿತರಿದ್ದರು.

ಚಿಟಗುಪ್ಪಾ ವಲಯ ಅರಣ್ಯಾಧಿಕಾರಿ ಶ್ರೀಕಾಂತ ರಾಠೋಡ, ಉಪವಲಯ ಅರಣ್ಯಾಧಿಕಾರಿ ವೀರಯ್ಯಾ ಪೂಜಾರಿ, ಸಂತೋಷ, ಗಸ್ತು ಅರಣ್ಯ ಪಾಲಕರಾದ ಪಾಶಾ ಉಪಸ್ಥಿತರಿದ್ದರು. ಪರಿಸರವಾದಿ ಶೈಲೇಂದ್ರ ಕಾವಡಿ ಸನ್ಮಾನಿಸಿದರು.

## ಕಾಣೆಯಾದ ವಯೋವೃದ್ಧನ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27–ಸೇಡಂ ತಾಲೂಕಿನ ಇಮಡಾಪುರ ಗ್ರಾಮದ 65 ವರ್ಷದ ವಯೋವೃದ್ಧರಾದ ಚಂದ್ರಸಿಂಗ್ ತಂದೆ ಬಲರಾಮ ಸಿಂಗ್ ಇವರು ದಿನಾಂಕ: 15–03–2024 ರಂದು ಬೆಳಿಗ್ಗೆ 10.30 ಗಂಟೆಗೆ ಇಮಡಾಪುರ ಗ್ರಾಮದ ಒಳಗೆ ಹೋಗಿ ಬರುತ್ತೇನೆ ಎಂದು ಹೇಳಿ ಹೋಗಿ ಮರಳಿ ಮನೆಗೆ ಬಾರದೇ ಕಾಣೆಯಾಗಿದ್ದಾರೆ ಎಂದು ಸೇಡಂ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕರು ತಿಳಿಸಿದ್ದಾರೆ.

# ಕಿತ್ತೂರ್ ರಾಣಿ ಚನ್ನಮ್ಮ ಮಹಿಳಾ ಮಂಡಳದಲ್ಲಿ ಯೋಗ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 27 : ಕಿತ್ತೂರ್ ರಾಣಿ ಚನ್ನಮ್ಮ ಮಹಿಳಾ ಮಂಡಳ ಟೀಚರ್ಸ್ ಕಾಲೋನಿಯ

ಶಕ್ತಿಸದನ ಕೇಂದ್ರದಲ್ಲಿ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಗಾಗಿ ಆಗಮಿಸಿದ ಡಾ. ವೀರೇಂದ್ರಹೆಗಡೆಯವರ ಧರ್ಮಸ್ಥಳದ ಗ್ರಾಮೀಣ ಸಂಯೋಜಕರಾದ ಶ್ರೀ ಮಲ್ಲೇಶ ಅವರು ಯೋಗವು ಒಂದು ಜೀವನದ ಅವಿಭಾಜ್ಯ ಅಂಗವೆಂದು ತಿಳಿಸಿದರು. ಇಂದಿನ ಕಾಲದಲ್ಲಿ ಆರೋಗ್ಯವೇ ಭಾಗ್ಯವೆಂದು ಪ್ರತಿಯೊಬ್ಬರೂ ಪ್ರತಿಪಾದಿಸಬೇಕೆಂದು ತಿಳಿಸಿದರು.

ಯೋಗವು ಒಂದು ದಿನ ಕಾರ್ಯಕ್ರಮ ಆಗಿರದೆ ಇದು ದೈನದಿಂನಚಟುವಟಿಕೆಯಾಗಬೇಕೆಂದು ಕರೆಕೊಟ್ಟರು. ಯೋಗದಿಂದ ಮನಸ್ಸು ಆತ್ಮಸದೃಢವಾಗಲು ಯಾವುದೇ ಸಂದೇಹ ಇಲ್ಲವೆಂದು ತಿಳಿಸಿದರು. ಈ ಕಾರ್ಯಕ್ರಮಕ್ಕೆ ಸ್ವಾಗತವನ್ನು ಕೋರಿದವರು ಶ್ರೀಮತಿ ಗೀತಾ ಶ್ರೀಹರಿ ಹಾಗೂ ವಂದಾನರ್ಪಣೆಯನ್ನು ಸವಿತಾ ವೆಂಕಟೇಶರವರಿಂದ ನೆರವೇರಿತು.

ಈ ಕಾರ್ಯಕ್ರಮದಲ್ಲಿ ಶಕ್ತಿಸದನ ಸಿಬ್ಬಂದಿಗಳು, ಸ್ವಾಂತನ ಕೇಂದ್ರದ ಸಿಬ್ಬಂದಿಗಳು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದರು.

# ಬೀದರನಲ್ಲಿ ೩೦ಕ್ಕೆ ಸದ್ಭಾವನಾ ನಡಿಗೆ

ಬೀದರ. ಜೂ. 27 : ಸದ್ಭಾವನಾ ಮಂಚ್ ವತಿಯಿಂದ ನಗರದಲ್ಲಿ ಜೂನ್ 30 ರಂದು ಬೆಳಿಗ್ಗೆ 'ಸದ್ಭಾವನಾ ನಡಿಗೆ' ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10.30ಕ್ಕೆ ಮಹಮೂದ್ ಗವಾನ್ ಮದರಸಾದಿಂದ ನಡಿಗೆ ಆರಂಭಗೊಂಡು, ಚೌಬಾರಾ, ನಯಾ ಕಮಾನ್, ಬಸವೇಶ್ವರ ವೃತ್ತ, ಮಹಾವೀರ ವೃತ್ತ, ಭಗತಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತದ ಮೂಲಕ ಹಾಯ್ದು ಜಿಲ್ಲಾಧಿಕಾರಿ ಕಚೇರಿಗೆ ತಲುಪಿ ಮುಕ್ತಾಯಗೊಳ್ಳಲಿದೆ ಎಂದು ಸದ್ಭಾವನಾ ಮಂಚದ ಸಂಚಾಲಕ ಗುರುನಾಥ ಗಡ್ಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಡಿಗೆ ಕೊನೆಗೊಂಡ ನಂತರ ಜಿಲ್ಲೆಯಲ್ಲಿ ಶಾಂತಿ ಹಾಗೂ ಸುವ್ಯವಸ್ಥೆಗಾಗಿ ಜಿಲ್ಲಾಧಿಕಾರಿ ಅವರಿಗೆ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.

ಭಾರತ ಶಾಂತಿಪ್ರಿಯ ದೇಶ. ಅನೇಕತೆಯಲ್ಲಿ ಏಕತೆ ಇದರ ವಿಶೇಷ. ವಿಶ್ವದಲ್ಲಿ ಕೋಮು ಸೌಹಾರ್ದಕ್ಕೆ ಪ್ರಸಿದ್ಧಿ ಪಡೆದಿದೆ. ಶಾಂತಿ, ಸಹಬಾಳ್ವೆ, ಸಹೋದರತ್ವ ಎಲ್ಲ ಧರ್ಮಗಳ ತಿರುಳಾಗಿದೆ. ಆದರೆ, ದೇಶ ಇತ್ತೀಚೆಗೆ ಕೋಮುವಾದ, ಕೊಲೆ, ಗುಂಪು ಕೊಲೆ, ದೊಂಬಿ, ದ್ವೇಷ, ಆರ್ಥಿಕ ಬಹಿಷ್ಕಾರದಂತಹ ಸಾಮಾಜಿಕ ಅನಿಷ್ಠಗಳಿಗೆ ಹೆಸರುವಾಸಿ ಆಗುತ್ತಿರುವುದು ಕಳವಳಕಾರಿಯಾಗಿದೆ ಎಂದು ಹೇಳಿದ್ದಾರೆ.

ಸಾಮಾಜಿಕ ಅನಿಷ್ಠಗಳಿಂದ ಮಕ್ಕಳು, ಯುವಕರು ಹಾಗೂ ನಾಗರಿಕರನ್ನು ರಕ್ಷಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಸೌಹಾರ್ದ ನಡಿಗೆ ಸಂಘಟಿಸಲಾಗಿದೆ ಎಂದು ತಿಳಿಸಿದ್ದಾರೆ.

ಶಾಂತಿ, ಸಹಬಾಳ್ವೆ ಬಯಸುವ ನಾಗರಿಕರು, ವಿದ್ಯಾರ್ಥಿ, ವಿದ್ಯಾರ್ಥಿನಿಯರು ನಡಿಗೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

# ಪಂಚ ಗ್ಯಾರಂಟಿ ಯೋಜನೆಯ ನಮ್ಮ ನಡೆ ಹಳ್ಳಿ ಕಡೆ



ಬೀದರ. ಜೂ. 27 : ಶ್ರೀ ಮಾನ್ಯ ಅಶೋಕ್ ಖೇಣಿ ಸರ್ ಮಾಜಿ ಶಾಸಕರು ಬೀದರ್ ದಕ್ಷಿಣ ರವರ ಆದೇಶದ ಮೇರೆಗೆ ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಾದ ಗೃಹಲಕ್ಷ್ಮೀ, ಅನ್ನಭಾಗ್ಯ, ಗೃಹಜ್ಯೋತಿ, ಯುವನಿಧಿ, ಮತ್ತು ಶಕ್ತಿ ಯೋಜನೆಗಳ ಬಗ್ಗೆ ಬೀದರ ದಕ್ಷಿಣ ಕ್ಷೇತ್ರದ ಪ್ರತಿ ಹಳ್ಳಿಗಳಿಗೆ ತಲುಪಿ ಯೋಜನೆ ಬಗ್ಗೆ ಸಮಿತಿ ಗಮನಕ್ಕೆ ತರುಬೇಕು ಮತ್ತು ಇದರ ಸದುಪಯೋಗ ಎಲ್ಲರಿಗೂ ಸಿಗಬೇಕೆಂದು ಎಂದು ಆದೇಶ ಮಾಡಿದರು, ಬೀದರ್ ತಾಲೂಕಿನ ಪಂಚ್ ಗ್ಯಾರಂಟಿ ಕಮಿಟಿಯ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ರವರ ಹಾಗೂ ಸದಸ್ಯರ ನೇತೃತ್ವದಲ್ಲಿ, ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಹೊಕ್ರಾಣ. ಬಿ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಚಿಂತಲಗೇರಾ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಪ್ರತಿ ಯಜಮಾನಿಗೆ ಪ್ರತಿ ತಿಂಗಳು ಹಣ ದೊರಕೂತಿದೇವೋ ಇಲ್ಲವೋ ಎಂದು, ಸಮೀಕ್ಷೆ ಮಾಡಿ ದೊರಕದ, ಯಜಮಾನಿಗೆ ತಕ್ಷಣವೇ ದೊರಕುವಂತೆ, ಪಂಚ್ ಗ್ಯಾರಂಟಿದವರು ಸಂಬಂಧ ಪಟ್ಟ ಅಧಿಕಾರಿಗಳಿಗೆ ತಕ್ಷಣವೇ ಕರೆ ಮುಖಾಂತರ ತಿಳಿಸಿರುತ್ತಾರೆ, ಮತ್ತು ಅನ್ನಭಾಗ್ಯ, ಗೃಹಜ್ಯೋತಿ, ಯುವನಿಧಿ, ಮತ್ತು ಶಕ್ತಿ ಯೋಜನೆಗಳ ಮಹತ್ವವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರುಗಳಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಮತ್ತು ಮುಖಂಡರಾದ, ನರಸಿಂಮುಲು, ಪ್ರಶಾಂತ್, ಮೋಹಿನ ಪಠಾಣ, ಮತ್ತು ಅನೇಕ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಹುಮನಾಬಾದ: ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷಾ ಅವಧಿ ಜೂ.೩೦ ರವರೆಗೆ ವಿಸ್ತರಣೆ

ಬೀದರ. ಜೂ. 27 : 2025–26ನೇ ಸಾಲಿನ ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆಯಲ್ಲಿ ಇದುವರೆಗೂ ಭಾಗವಹಿಸದೇ ಇರುವ ಕರ್ನಾಟಕ ರಾಜ್ಯಕ್ಕೆ ಸೇರಿದ ಪರಿಶಿಷ್ಟ ಜಾತಿ ಕುಟುಂಬದವರಿಗೆ ಜೂ.23 ರಿಂದ ಜೂ.30 ರವರೆಗೆ ಕಾಲಾವಧಿಯನ್ನು ವಿಸ್ತರಿಸಿ ಆನ್‌ಲೈನ್ ಮೂಲಕವೂ ನೋಂದಾಯಿಸಲು ಅವಕಾಶ ನೀಡಲಾಗಿದೆ ಎಂದು ಹುಮನಾಬಾದ ಸಮಾಜಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ನಿಂಗರಾಜ ಅರಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ ಅರ್ಹರು ನಾಗರಿಕ ಸೇವಾ ಕೇಂದ್ರಗಳಾದ ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಕೇಂದ್ರಗಳು, ಬಾಪೂಜಿ ಸೇವಾ ಕೇಂದ್ರಗಳಲ್ಲಿಯೂ ಸಹ ಸಮೀಕ್ಷೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಇದಲ್ಲದೇ ಆನ್‌ಲೈನ್ ttps://schedulecastsurvey.karnataka.govin/selfdeclaration ಲಿಂಕ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳುವ ವಿಧಾನವನ್ನು ಜೂನ್.22ರವರೆಗೆ ವಿಸ್ತರಿಸಲಾಗಿದೆ ಎಂದು ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ನಾಳೆ ಕಾರ್ಗಿಲ್ ಸೆ ಸಿಂಧೂರ್ ತಕ್ ಕಾರ್ಯಕ್ರಮ: ಡಾ.ಶಿವಕುಮಾರ ಉಪ್ಪೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 27 : ನಾಳೆ ಭಾನುವಾರ ಸಂಜೆ 4 ಗಂಟೆಗೆ ನಗರದ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ಭಾರತೀಯ ಇತಿಹಾಸ ಸಂಕಲನ ಸಮಿತಿ ಕರ್ನಾಟಕ ವತಿಯಿಂದ ಕಾರ್ಗಿಲ್ ಸೆ ಸಿಂಧೂರ ತಕ್ ಕಾರ್ಯಕ್ರಮದಡಿ ಕಾರ್ಗಿಲ್ ಯುದ್ದದಲ್ಲಿ ವೀರಮರಣವನ್ನಪ್ಪಿದ ಕ್ಯಾಪ್ಟನ್ ವಿಜಯಂತ ಥಾಪರ್ ಮತ್ತು ಇತರೆ ಹುತಾತ್ಮ ಯೋಧರ ಅಮರ ಕಥೆ ಕುರಿತ ಕಾರ್ಯಕ್ರಮ ಹಾಗೂ ಕಾರ್ಗಿಲ್ ಯುದ್ದದಲ್ಲಿ ಬೀದರ್ ಜಿಲ್ಲೆಯಿಂದ ಹುತಾತ್ಮರಾದ ಯೋಧರ ಕುಟುಂಬಸ್ಥರಿಗೆ ಹಾಗೂ ಹೋರಾಡಿ ಬದುಕುಳಿದ ಜಿಲ್ಲೆಯ ಯೋಧರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿಯ ಕರ್ನಾಟಕ ಪ್ರಾಂತಿಯ ಕಾರ್ಯಾಧ್ಯಕ್ಷ ಡಾ.ಶಿವಕುಮಾರ ಉಪ್ಪೆ ತಿಳಿಸಿದರು. ಶುಕ್ರವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದರು.

ವಿಶ್ವ ಕಲ್ಯಾಣಕ್ಕಾಗಿ ಹಾಗೂ ಮನುಕುಲದ ಶ್ರೇಯೋಭಿವೃದ್ಧಿಗಾಗಿ ಭಾರತದ ಸಂಸ್ಕೃತಿಯ ಕೊಡುಗೆ ಅಭೂತಪೂರ್ವವಾದುದ್ದಾಗಿದೆ. ಸತ್ಯದ ಮೇಲೆ ನಿರ್ಭರವಾಗಿ ಸ್ಥಾಪಿತವಾದ ಭಾರತೀಯ ಇತಿಹಾಸ ಸಂಕಲನ ಸಮಿತಿಯು ಕಳೆದ ಐದು ದಶಕಗಳಿಂದ ಭಾರತದ ನೈಜ ಇತಿಹಾಸವನ್ನು ತಳಮಟ್ಟದಿಂದ ಪುನರೂಪಿಸಿ, ಸಂಶೋಧಿಸಿ ಭಾರತೀಯರಿಗೆ ಪರಿಚಯಿಸುವ ಕಾರ್ಯವನ್ನು ಇಡೀ ದೇಶದಾದ್ಯಂತ ಅರ್ಪಣಾ ಭಾವದಿಂದ ಕಂಕಣಬದ್ಧತೆಯಿಂದ ಮಾಡುತ್ತಿದೆ. ಎಂದರು.



ಈ ಸಮಿತಿಯು ಭಾರತದ ನೈಜ ಇತಿಹಾಸದ ಕುರಿತು ಜನಜಾಗೃತಿ ಹಾಗೂ ಅರಿವು ಮೂಡಿಸುವ ನಿಟ್ಟಿನಲ್ಲಿ ವಿಚಾರ ಸಂಕಿರಣಗಳು, ತರಬೇತಿ ಶಿಬಿರಗಳು, ಕಾರ್ಯಾಗಾರಗಳು, ಕಮ್ಮಟಗಳು, ವಿಶೇಷ ಉಪನ್ಯಾಸಗಳಂತಹ ಕಾರ್ಯಕ್ರಮಗಳನ್ನು ನೈಜ ಇತಿಹಾಸ ತಜ್ಞರಿಂದ ನಿರಂತರ ಹಮ್ಮಿಕೊಂಡುಬರುತ್ತಿದೆ. ರಾಷ್ಟ್ರಕ್ಕಾಗಿ ತ್ಯಾಗ, ಬಲಿದಾನಗೈದ ರಕ್ಷಣಾ ಪಡೆಗಳ ಶೌರ್ಯ ಸಾಹಸಗಳ ವೀರಗಾಥೆ, ಯಶೋಗಾಥೆಗಳನ್ನು ಜನಮಾನಸದಲ್ಲಿ ಹಸಿರಾಗಿಸಲು ಈ ರಾಷ್ಟ್ರಾಭಿಮಾನದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

1999ರಲ್ಲಿ ಪಾಕಿಸ್ತಾನದ ವಿರುದ್ಧ ನಡೆದ ಕಾರ್ಗಿಲ್ ಯುದ್ಧದಲ್ಲಿ ದೇಶಕ್ಕಾಗಿ 22ನೇ ವಯಸ್ಸಿನಲ್ಲಿಯೇ ಯುದ್ಧ ಭೂಮಿಯಲ್ಲಿ ಅಪ್ರತಿಮವಾಗಿ ಹೋರಾಡಿ ಹುತಾತ್ಮರಾದ ಕ್ಯಾಪ್ಟನ್ ವಿಜಯಂತ್ ಥಾಪರ್ ಅವರ ಮಾತಾ ಪಿತರಾದ ತ್ರಿಪ್ತಾ ಥಾಪರ್ ಹಾಗೂ ಕರ್ನಲ್ ಬಿ.ಎನ್. ಥಾಪರ್ ಅವರು ಈ ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಗಳಾಗಿ ಭಾಗವಹಿಸುತ್ತಿದ್ದಾರೆ. ಜೂನ್ 29 ವೀರಚಕ್ರ ಪುರಸ್ಕೃತ ಕ್ಯಾಪ್ಟನ್ ವಿಜಯಂತ್ ಥಾಪರ್ ಹುತಾತ್ಮರಾದ ದಿವಸ ಕೂಡಾ ಆಗಿದೆ. ಅಲ್ಲದೇ ಇದೇ ಕಾರ್ಯಕ್ರಮದಲ್ಲಿ ನಮ್ಮ ಧರ್ಮ, ಸಂಸ್ಕೃತಿ, ಇತಿಹಾಸ, ಶಿಕ್ಷಣ, ಅಧ್ಯಾತ್ಮದ ಬಗ್ಗೆ ಅಭಿಮಾನ ಮೂಡಿಸುವ, ದೇಶ ಮತ್ತು ಸಂಸ್ಕೃತಿಗಾಗಿ ತಮ್ಮ ಜೀವನ ಸಮರ್ಪಿಸಿಕೊಂಡಿರುವ ಖ್ಯಾತ ವಾಗ್ಮಿಗಳು ಹಾಗೂ ರಾಷ್ಟ್ರೀಯವಾದಿ ಚಿಂತಕರಾದ ಗೋಪಾಲ್‌ಜೀಯವರು ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದವರು ತಿಳಿಸಿದರು. ರಾಷ್ಟ್ರ ರಕ್ಷಣೆಗಾಗಿ ಭಯೋತ್ಪಾದರ ದಮನಕ್ಕಾಗಿ ನಡೆದ ಅಪರೇಶನ್ ಸಿಂಧೂರ್ ಕಾರ್ಯಾಚರಣೆಯ ವಿಜಯೋತ್ಸವದ ಸಂದರ್ಭದಲ್ಲಿ ಹಮ್ಮಿಕೊಂಡಿರುವ ಈ ಕಾರ್ಯಕ್ರಮವು ಭಾರತಕ್ಕಾಗಿ ಹೋರಾಡಿದ ಮತ್ತು ಹುತಾತ್ಮರಾದ ವೀರಯೋಧರಿಗೆ ಮತ್ತು ಅವರ ಪರಿವಾರದವರಿಗೆ ಹೃದಯಾಂತರಾಳದಿಂದ ಗೌರವ ಸಲ್ಲಿಸುವ ಕಾರ್ಯಕ್ರಮ ಇದಾಗಿದೆ. ಈ ಅರ್ಥಪೂರ್ಣ ಮತ್ತು ಐತಿಹಾಸಿಕ ದೇಶಾಭಿಮಾನದ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಡಾ.ಉಪ್ಪೆ ಕೋರಿದರು. ಸಮಿತಿಯ ಮಹಾ ಪೋಷಕರಾದ ಡಾ.ಬಸವರಾಜ.ಜಿ ಪಾಟೀಲ ಕಾರ್ಯಕ್ರಮದ ವಿವರಣೆ ನೀಡಿ, ಅಯೋಧ್ಯ ವಿಶ್ವ ಹಿಂದು ಪರಿಷತ್ ಕೇಂದ್ರ ಸಮಿತಿಯ ಕಾರ್ಯದರ್ಶಿ ಗೋಪಾಲಜಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಕಾರ್ಗಿಲ್ ಯುದ್ದದಲ್ಲಿ ಹುತಾತ್ಮರಾದ ಕ್ಯಾಪ್ಟನ್ ವಿಜಯಂತ್ ಥಾಪರ್ ಅವರ ತಂದೆ, ತಾಯಿಗಳಾದ ತ್ರಿಪ್ತಾ ಥಾಪರ್ ಹಾಗೂ ನಿವೃತ್ತ ಕರ್ನಲ್ ವಿ.ಎನ್ ಥಾಪರ್ ಗೌರವ ಅತಿಥಿಗಳಾಗಿ ಭಾಗವಹಿಸುವರು. ಆರ್.ಎಸ್.ಎಸ್ ಕಲಬುರಗಿಯ ವಿಭಾಗೀಯ ಸಂಘಟಕರಾದ ಹಣಮಂತರಾವ ಪಾಟೀಲ, ತಾನು ಸಹ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಸಮಿತಿಯ ಪೋಷಕರಾದ ಡಾ.ಸರ್ದಾರ ಬಲಬೀರಸಿಂಗ್, ಸಮಿತಿಯ ರಾಷ್ಟ್ರೀಯ ಕಾರ್ಯದರ್ಶಿ ಪ್ರೊ. ಕೊಟ್ರೇಶ, ರಾಜ್ಯ ಕಾರ್ಯದರ್ಶಿ ಕೃಷ್ಣಮೂರ್ತಿ.ಆರ್ ಗೌರವ ಉಪಸ್ಥಿತರಿರುವರು ಎಂದರು. ಮಾಜಿ ಸೈನಿಕ ಸಂಘದ ಮಾಜಿ ಅಧ್ಯಕ್ಷ ಅಶೋಕಕುಮಾರ ಕರಂಜಿ ಮಾತನಾಡಿ, ಈ ಅಭುತಪೂರ್ವ ಕಾರ್ಯಕ್ರಮಕ್ಕೆ ನಮ್ಮ ಮಾಜಿ ಸೈನಿಕ ಸಂಘದಿಂದ ಬೆಂಬಲ ಸೂಚಿಸಿದ್ದು, ಅಲ್ಲದೆ ಕಳೆದ ಎರಡು ತಿಂಗಳಿನಿಂದ ಕಾರ್ಯಕ್ರಮದ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಲಾಗಿದೆ ಜಿಲ್ಲೆಯ ದೇಶಾಭಿಮಾನಿಗಳು ಮತ್ತು ಅವರ ಕುಟುಂಬದವರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ತಿಳಿಸಿದರು. ಸಮಿತಿಯ ಕರ್ನಾಟಕ ಉತ್ತರ ಪ್ರಾಂತಿಯ ಸಂಚಾಲಕ ವೀರಶೆಟ್ಟಿ ಮೈಲೂರಕರ್ ಅವರು ಕಾರ್ಗಿಲ್ ಯುದ್ದದಲ್ಲಿ ಬೀದರ್ ಜಿಲ್ಲೆಯಿಂದ ವೀರ ಮರಣವನ್ನಪ್ಪಿದ ಯೋಧರ ಪಟ್ಟಿ ವಿವರಿಸಿದರು. ವರವಟ್ಟಿಯ ಗೋವಿಂದ ಸೆಡೊಳೆ, ತಡಪಳ್ಳಿಯ ವೀರಶೆಟ್ಟಿ, ಭಾಡಗಾಂಗವಿಯ ಹಣಮಂತ ಹಾಗೂ ಜ್ಞಾನೇಶ್ವರ, ಮರ್ಜಾಪರ(ಎಮ್)ನ ಪ್ರಕಾಶ, ಧನಂಜಯ ಕುಲಕರ್ಣಿ, ಶಿವಾಜಿ ಬಿರಾದಾರ, ನೌಬಾದ್‌ನ ಅಶೋಕ ಅಪ್ಪೆ ಅವರ ಕುಟುಂಬಸ್ಥರಿಗೆ ಅವ್ಹಾನಿಸಿ ಗೌರವಿಸಲಾಗುತ್ತಿದೆ ಕಾರ್ಗಿಲ್ ಹಾಗೂ ಸಿಂಧೂರ್ ಯುದ್ದದಲ್ಲಿ ಹೋರಾಡಿದ ಶೆಂಬೆಳ್ಳಿಯ ಬಾಬಶೆಟ್ಟಿ ಏಕಲಾರೆ ಸೇರಿದಂತೆ ಇನ್ನು ಅನೇಕರನ್ನು ಸನ್ಮಾನಿಸಲಾಗುತ್ತಿದೆ ಎಂದರು. ಕಲ್ಯಾಣ ಕರ್ನಾಟಕ ಪ್ರಾಂತಿಯ ಸಂಚಾಲಕ ಸಂಜುಕುಮಾರ ತಾಂದಳೆ ಹಾಗೂ ಪತ್ರಕರ್ತ ಸದಾನಂದ ಜೋಷಿ ಪತ್ರಿಕಾಗೋಷ್ಠಿಯಲ್ಲಿದ್ದರು.

# ಸ್ವಚ್ಛಂದ ಜೀವನ ನಡೆಸಲು ನಮ್ಮ ಸಂವಿಧಾನದಲ್ಲಿ ಕಾನೂನು ರಚಿಸಲಾಗಿದೆ:ನ್ಯಾ.ಪ್ರಕಾಶ ಬನಸೋಡೆ

ಬೀದರ.ಜೂ.27: ಹುಟ್ಟುವ ಮಗುವಿನಿಂದ ಸಾಯುವ ವಯೋವೃದ್ಧದವರೆಗೂ ಸ್ವಚ್ಛಂದ ಜೀವನ ನಡೆಸಲು ನಮ್ಮ ಸಂವಿಧಾನದಲ್ಲಿ ಕಾನೂನು ರಚಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಅವರು ತಿಳಿಸಿದ್ದಾರೆ. ಅವರು ಗುರುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಕಾರಾಗೃಹ ಬೀದರ ಇವರ ಸಂಯುಕ್ತಾಶ್ರಯದಲ್ಲಿ



"ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರೋಧಿ ದಿನ ಹಾಗೂ ಕಾರಾಗೃಹದಲ್ಲಿರುವ ಬಂಧಿಗಳ ಹಕ್ಕುಗಳ" ಅಂಗವಾಗಿ ಬೀದರ ಜಿಲ್ಲಾ ಕಾರಾಗೃಹದಲ್ಲಿ ಹಮ್ಮಿಕೊಂಡಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ತಪ್ಪುಗಳು ಸಹಜ ಅವುಗಳನ್ನು ತಿದ್ದಿಕೊಂಡು ಬಂಧಿಗಳು ಮನವನ್ನು ಪರಿವರ್ತನೆಗೊಳಿಸಿಕೊಂಡು ಉತ್ತಮ ಜೀವನ ನಡೆಸಬೇಕೆಂದರು. ಇದೇ ಸಂದರ್ಭದಲ್ಲಿ ಜೈಲಿನಲ್ಲಿರುವ ದೃಷ್ಠಿದೋಷವಿರುವ ಕೈದಿಗಳಿಗೆ ಕನ್ನಡಕವನ್ನು ವಿತರಿಸಿದ್ದರು. ಈ ಕಾರ್ಯಕ್ರಮದಲ್ಲಿ ಅಬ್ದುಲ ಹಫೀಜ ಎಲ್‌ಎಡಿಸಿ ವಕೀಲರು, ಜಿಲ್ಲಾ ಕಾರಾಗೃಹ ಅಧೀಕ್ಷಕ ದತ್ತಾತ್ರಿ ಆರ್. ಮೇದಾ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸನ್ಮುಖಯ್ಯಾ ಬಿ. ಸ್ವಾಮಿ, ಉಪಾಧ್ಯಕ್ಷ ಶಿವಕುಮಾರ ಮಾಲಿಪಾಟೀಲ, ಕಾನೂನು ಪ್ರಾಧಿಕಾರದ ಸಿಬ್ಬಂದಿಗಳು, ಜಿಲ್ಲಾ ಕಾರಾಗೃಹ ಸಿಬ್ಬಂದಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಎಲ್‌ಎಡಿಸಿ ವಕೀಲರು ಹಾಗೂ ರೋಟರಿ ಕ್ಲಬ ಸಿಬ್ಬಂಧಿ ವರ್ಗದವರು ಸೇರಿದಂತೆ ಇತರರ ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ ನೈಸರ್ಗಿಕ ಕೃಷಿ ಅಭಿಯಾನ ಯೋಜನೆ ಅನುಷ್ಠಾನಕ್ಕೆ ಸಿದ್ಧತೆ

ಬೀದರ.ಜೂ.27: ಅತಿಯಾದ ರಾಸಾಯನಿಕ ಬಳಕೆಯಿಂದಾಗಿ ಕೃಷಿ ಕ್ಷೇತ್ರವು ಕಲುಷಿತಗೊಂಡಿರುತ್ತದೆ ಈ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಜಿಲ್ಲೆಯಲ್ಲಿ ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಬೀದರ ತೋಟಗಾರಿಕೆ ಮಹಾವಿದ್ಯಾಲಯವನ್ನು ತರಬೇತಿ ಸಂಸ್ಥೆಯನ್ನಾಗಿ ಆಯ್ಕೆ ಮಾಡಲಾಗಿರುತ್ತದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ ಆರ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಯೋಜನೆಯ ಮುಖ್ಯ ಉದ್ದೇಶಗಳಾದ ಬಾಹ್ಯವಾಗಿ ಖರೀದಿಸುವ ಪರಿಕರಗಳ ಅವಲಂಬನೆಯನ್ನು ಕಡಿಮೆ ಮಾಡಲು ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳ ಬಳಕೆಯ ಮೂಲಕ ಪ್ರಕೃತಿ ಆಧಾರಿತ ಸುಸ್ಥಿರ ಕೃಷಿ ಪದ್ಧತಿಗಳ ಉತ್ತೇಜನೆ, ಜಾನುವಾರು ಆಧಾರಿತ ಸಮಗ್ರ ಕೃಷಿ ಪದ್ಧತಿಗಳ ಪ್ರಚಾರ, ನೈಸರ್ಗಿಕ ಕೃಷಿಯ ಹೆಚ್ಚಿನ ಅಳವಡಿಕೆ ಮತ್ತು ಹೆಚ್ಚಿನ ಪ್ರಚಾರಕ್ಕಾಗಿ ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ನೈಸರ್ಗಿಕ ಕೃಷಿ ಪದ್ಧತಿಗಳನ್ನು ಅಭಿವೃದ್ಧಿಪಡಿಸಲು ಮತ್ತು ಸುಧಾರಿಸಲು ನೈಸರ್ಗಿಕ ಕೃಷಿ ನಿರತ ರೈತರ ಅನುಭವ ಹಾಗೂ ವೈಜ್ಞಾನಿಕ ಪರಿಣಿತಿಯನ್ನು ಒಟ್ಟುಗೂಡಿಸುವುದು. ಪ್ರಸ್ತುತ ಕೃಷಿಯಲ್ಲಿ ರಾಸಾಯನಿಕ ಕೃಷಿಯಿಂದಾಗಿ ಭೂಮಿಯ ಫಲವತ್ತತೆ ಹಾಳಾಗುತ್ತಿದೆ. ಅಲ್ಲದೇ ಮನುಷ್ಯನ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರಲಾರಂಭಿಸಿದೆ.

ರಾಸಾಯನಿಕ ಮುಕ್ತ ಕೃಷಿಯನ್ನು ಅಳವಡಿಸುವಂತೆ ರೈತರನ್ನು ಪ್ರೇರೆಪಿಸಲು ಈ ಯೋಜನೆ ರೂಪಿಸಲಾಗಿದೆ. ಈ ಯೋಜನೆಯಡಿ ಜಿಲ್ಲೆಯ ಒಟ್ಟು 30 ಗುಚ್ಛಗಳಲ್ಲಿ 15 ಕಡಿಮೆ ರಾಸಾಯನಿಕ ಬಳಸುವ ಗುಚ್ಚಗಳು ಹಾಗೂ ಇನ್ನುಳಿದ 15 ಬಲವರ್ಧಿತ ಗುಚ್ಚಗಳು FPO/SHG/PACSಗಳನ್ನು ಆಯ್ಕೆಮಾಡಿಕೊಳ್ಳಲಾಗುವುದು. 3750 ರೈತರ ತಾಕುಗಳ ಒಂದು ಎಕರೆ ಪ್ರದೇಶದಲ್ಲಿ ನೈಸರ್ಗಿಕ ಕೃಷಿಯನ್ನು ಅಳವಡಿಸಿಕೊಳ್ಳುವ ರೈತರಿಗೆ ನೇರ ನಗದು ವರ್ಗಾವಣೆ ಮೂಲಕ ಪ್ರತಿ ಎಕರೆಗೆ 4000 ರೂ. ರಂತೆ ಪ್ರೋತ್ಸಾಹಧನ ನೀಡಲು ಅವಕಾಶವಿದೆ.

ನೈಸರ್ಗಿಕ ಕೃಷಿಗೆ ಬೇಕಾಗುವ ಜೈವಿಕ ಕೃಷಿ ಪರಿಕರಗಳಾದ ಬೀಜಾಮೃತ, ಜೀವಾಮೃತ ಘನ ಜೀವಾಮೃತ ಮತ್ತು ನೈಸರ್ಗಿಕ ಕೃಷಿಯ ಕೀಟನಾಶಕ/ರೋಗನಾಶಕಗಳ ಮುಂತಾದವುಗಳ ಪರಿಕರ ಉತ್ಪಾದನೆಗಾಗಿ 20 ಜೈವಿಕ ಪರಿಕರಗಳ ಸಂಪನ್ಮೂಲ ಕೇಂದ್ರಗಳನ್ನು ಗುರುತಿಸಲಾಗುವುದು. ಈ ಜೈವಿಕ ಪರಿಕರ ಸಂಪನ್ಮೂಲಕಗಳ ಕೇಂದ್ರಗಳ ನಿರ್ವಹಣೆಗಾಗಿ 1.00 ಲಕ್ಷ ರೂ. ಸಹಾಯಧನ ನೀಡಲಾಗುವುದು ಇದಕ್ಕೆ ಪೂರಕವಾಗಿ ಕೆಲಸ ಮಾಡಲು ಪ್ರತಿ ಗುಚ್ಛದಲ್ಲಿ ಎರಡು ಕೃಷಿ ಸಖಿಯರನ್ನು ನೇಮಿಸಿಕೊಂಡು ಗ್ರಾಮ ಪಂಚಾಯಿತಿ ಮಟ್ಟದಲ್ಲಿ 50 ಹೇಕ್ಟರ್ ಪ್ರದೇಶದ ಗುಚ್ಛ ಮಾದರಿಯಲ್ಲಿ ಅನುಷ್ಠಾನಗೊಳಿಸಲಾಗುತ್ತದೆಂದು ಅವರು ತಿಳಿಸಿದ್ದಾರೆ.

# ಜೂ.೩೦ ರಂದು ಕೌಶಲ್ಯಾಭಿವೃದ್ಧಿ ತರಬೇತಿಗೆ ಸಂದರ್ಶನ: ಹೆಸರು ನೋಂದಣಿಗೆ ಸೂಚನೆ

ಬೀದರ.ಜೂ.27: 2024–25ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃಧಿ ತರಬೇತಿ ಪಡೆಯಲು ಜೂನ್.30 ರಂದು ಬೆಳಿಗ್ಗೆ 11 ರಿಂದ 3 ಗಂಟೆಯವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಬೀದರ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಐ.ಟಿ.ಐ ಕಾಲೇಜ್ ಆವರಣ, ಕುಂಬಾರವಾಡಾ ಕ್ರಾಸ, ಮನ್ನಳ್ಳಿ ರೋಡ, ಬೀದರದಲ್ಲಿ ಸಂದರ್ಶನ ಆಯೋಜಿಸಲಾಗಿದೆ ಎಂದು ಬೀದರ ಜಿಲ್ಲಾ ಉದ್ಯೋಗ ವಿನಿಮಯ ಅಧಿಕರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಶನಕ್ಕೆ ಭಾಗವಹಿಸುವ ಅಭ್ಯರ್ಥಿಗಳು ಮೊಬೈಲ್ ಸಂಖ್ಯೆ: 9901563260/8867200358ಗೆ ಕರೆ ಮಾಡಿ ಪೂರ್ವ ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಬೀದರ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿ ಸಮೀಕ್ಷಾ ಅವಧಿ ಜೂನ್ 30 ರಂದು ಮುಕ್ತಾಯಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 27– ಪರಿಶಿಷ್ಟಜಾತಿ ಸಮೀಕ್ಷೆ–2025ರ ಸಮೀಕ್ಷಾಅವಧಿ ಜೂನ್ 30ರಂದು ಮುಕ್ತಾಯಗೊಳ್ಳುತ್ತಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಚನ್ನಬಸಪ್ಪ ಅವರು ತಿಳಿಸಿದ್ದಾರೆ.

ಡಾ.ಹೆಚ್.ಎನ್.ನಾಗಮೋಹನ ದಾಸ್ ರವರ ಆಯೋಗದಿಂದ ಪರಿಶಿಷ್ಟಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಲು ಸಮೀಕ್ಷೆ ನಡೆಸುವ ಹಿನ್ನಲೆಯಲ್ಲಿ ರಾಜ್ಯಮಟ್ಟ, ಜಿಲ್ಲಾ ಮಟ್ಟ ಹಾಗೂ ತಾಲ್ಲೂಕ ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ರಚಿಸಲಾಗಿದ್ದು, ಸಮೀಕ್ಷೆ ಕಾರ್ಯವನ್ನು ಶಿಕ್ಷಣ ಇಲಾಖೆಯ ಶಿಕ್ಷಕರನ್ನು ಗಣತೀದಾರನ್ನಾಗಿಸಿ ಮನೆ ಮನೆಗೆ ತೆರಳಿ ಮೊಬೈಲ್ ಆಪ್ ಮೂಲಕ ಸಮೀಕ್ಷೆಯನ್ನು ನಡೆಸಿ ಮಾಹಿತಿಯನ್ನು ನಮೂದಿಸಲಾಗುತ್ತಿದೆ. ಸದರಿ ವರೆಗೂ ರಾಜ್ಯಾದ್ಯಂತ ಸಮೀಕ್ಷೆಯಲ್ಲಿ ಶೇ.91.00 ರಷ್ಟು ಪ್ರಗತಿಯನ್ನು ಸಾಧಿಸಲಾಗಿದ್ದು, ಸಮೀಕ್ಷೆಯಲ್ಲಿ ಭಾಗವಹಿಸದೇ ಇರುವ ಪರಿಶಿಷ್ಟ ಜಾತಿ ಕುಟುಂಬದವರಿಗೆ ಅಂತಿಮ ಅವಕಾಶ ಕಲ್ಪಿಸುವ ಉದ್ದೇಶದಿಂದ ರಾಜ್ಯಾದ್ಯಂತ ಸಮೀಕ್ಷಾ ಅವಧಿ ವಿಸ್ತರಿಸಿದೆ.

ಈ ಸಮೀಕ್ಷೆಯಲ್ಲಿ ನೋದಣಿಯಾಗದೇ ಇರುವ ಪರಿಶಿಷ್ಟ ಜಾತಿ ಜಾತಿಗಳ ಒಳ ಮೀಸಲಾತಿಯಲ್ಲಿ ಆನ್‌ಲೈನ್ schedulecastesurvey.karnataka.gov.in/self-declaration ನಲ್ಲಿ ಲಿಂಕ್ ಮೂಲಕ ಸ್ವಯಂಘೋಷಣೆ 2025ರ ಜೂನ್ 30ರ ಒಳಗೆ ಮಾಡಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಚಿಟಗುಪ್ಪ:ತಾಲೂಕಿನ ಬೆಳಕೇರಾ ಕ್ರಾಸ್ ಹತ್ತಿರ ಇರುವ ಸೈಯದ್ ಹಜರತ್ ಪಾಶ ಖಾದ್ರಿ ತವಕ್ಕಲಿ ದರ್ಗದ 18ನೇ ಜಾತ್ರಾ ಮಹೋತ್ಸವಕ್ಕೆ ಯುವ ಉದ್ಯಮಿಗಳಾದ ಸಂತೋಷ ಪಾಟೀಲ್ ಅವರು ಆಗಮಿಸಿ ವಿಶೇಷ ದರ್ಶನ ಪಡೆದರು. ದರ್ಗದ ಸಜ್ಜಾದೆಗಳಾದ ಪಾಶ ಪಟೇಲ್ ಅವರು ಸಂತೋಷ ಪಾಟೀಲರವರಿಗೆ ಶಾಲು ಹೊಂದಿಸಿ ಸನ್ಮಾನಿಸಿ ಆಶೀರ್ವಾದಿಸಿದರು. ಈ ಸಂದರ್ಭದಲ್ಲಿ ಅಲ್ಪಸಂಖ್ಯಾತ ಮೋರ್ಚದ ತಾಲೂಕ ಅಧ್ಯಕ್ಷರಾದ ಅಸದ ಪಟೇಲ, ಹಿರಿಯ ಮುಖಂಡರಾದ ರಿಯಾಸತಾ ಅಲಿಪಟೇಲ್, ಬಸವರಾಜ ಪಾಟೀಲ್ ಮಾಡಗೂಳ. ಸಂತೋಷ್ ಹುಮನಾಬಾದ, ಉಪಾಧ್ಯಕ್ಷರಾದ ಮಕ್ಬುಲ್ ಸಬ್ ಚಿಟಗುಪ್ಪ ಉಪಸ್ಥಿತರಿದ್ದರು.

## ದಲಿತ ಸಾಹಿತ್ಯ ಅರ್ಧಶತಮಾನ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 27– ಕರ್ನಾಟಕ ಸಾಹಿತ್ಯ ಅಕಾಡೆಮಿಯ ವಿಶೇಷ ಘಟಕ ಯೋಜನೆಯಡಿ ದಲಿತ ಸಾಹಿತ್ಯ ಅರ್ಧಶತಮಾನ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಸೆಪ್ಟೆಂಬರ್ ತಿಂಗಳಿನಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಕರಿಯಪ್ಪ ಎನ್. ಅವರು ತಿಳಿಸಿದ್ದಾರೆ. ಕರ್ನಾಟಕ ಸಾಹಿತ್ಯ ಅಕಾಡೆಮಿಯ ವಿಶೇಷ ಘಟಕ ಯೋಜನೆಯಡಿ ದಲಿತ ಸಾಹಿತ್ಯ ಅರ್ಧಶತಮಾನ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಸೆಪ್ಟೆಂಬರ್ ತಿಂಗಳಿನಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ, ಆಸಕ್ತರಿಂದ 20 ರಿಂದ 50 ವರ್ಷ ಒಳಗಿರಬೇಕು, ಪರಿಶಿಷ್ಟಜಾತಿಗೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು 2025ರ ಜುಲೈ 20ರ ಒಳಗೆ ಅರ್ಜಿ ಸಲ್ಲಿಸಬೇಕು, ಕರ್ನಾಟಕ ಸಾಹಿತ್ಯ ಅಕಾಡೆಮಿ ವೆಬ್‌ಸೈಟ್ sahithyaacademy.karnataka.gov.in ನಲ್ಲಿ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಕನೂರು ಪ.ಪಂ. : ಪಿ.ಎಂ ಆವಾಸ್ ಯೋಜನೆಯಡಿ ಅರ್ಜಿ ಆಹ್ವಾನ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರು ಪಟ್ಟಣ ಪಂಚಾಯತಿಯಲ್ಲಿ 2025–26ನೇ ಸಾಲಿನ ಪ್ರಧಾನ ಮಂತ್ರಿ ಆವಾಸ್ (ನಗರ)2.0 ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಒಂಟಿ ಮಹಿಳೆಯರು, ಅಂಗವಿಕಲರು, ಹಿರಿಯ ನಾಗರಿಕರು, ತೃತೀಯ ಲಿಂಗಿಗಳು, ಎಸ್‌ಸಿ/ಎಸ್‌ಟಿ/ಹಿಂದುಳಿದ/ಅಲ್ಪ ಸಂಖ್ಯಾತ ವರ್ಗದವರು, ಸ್ವಚ್ಛತಾ ಕಾರ್ಮಿಕರು, PM-SAVnidhi ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಿಗಳು ಮತ್ತು ಪ್ರಧಾನ್ ಮಂತ್ರಿ ವಿಶ್ವ ಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕೆ ಕಾರ್ಮಿಕರು, ವಲಸೆ ಬಂದ ಕುಟುಂಬದವರು ತಮ್ಮ ಅರ್ಜಿಗಳನ್ನು ಜುಲೈ 15ರೊಳಗಾಗಿ https://pmaymis.gov.in/PMAYMIS2_2024/PMAY_SURVEY/EligiblityCheck.aspx ನಲ್ಲಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ನಂತರ ಅರ್ಜಿ ಪ್ರತಿಯೊಂದಿಗೆ ಆಧಾರ್ ಕಾರ್ಡ್ (ಮನೆಯ ಯಜಮಾನ/ನಿ ಹಾಗೂ ತಂದೆ/ತಾಯಿಯ ಮತ್ತು ಪಡಿತರ ಚೀಟಿಯಲ್ಲಿ ಇರುವಂತೆ ಕುಟುಂಬ ಸದಸ್ಯರ ಆಧಾರ್ ಕಾರ್ಡ್ಗಳು), ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳು (ಹಕ್ಕುಪತ್ರ/ಕ್ರಯಪತ್ರ/ದಾನಪತ್ರ/ಉಡುಗೊರೆ ಪತ್ರ/ಖಾತಾ), ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ನಿಗದಿತ ನಮೂನೆ (Annexure-2A/2B/2C) ಯಲ್ಲಿ SelfUndertaking ಸಲ್ಲಿಸುವುದು. ಮೊಬೈಲ್ ಸಂಖ್ಯೆ, ಪ್ಯಾನ್ ಕಾರ್ಡ್ (ಲಭ್ಯವಿದ್ದಲ್ಲಿ ಮಾತ್ರ) ಗಳನ್ನು ಲಗತ್ತಿಸಿ ಪಟ್ಟಣ ಪಂಚಾಯತಿ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಶಾಖೆಯ ಅಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಪ.ಪಂ. ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗಡಿ ಕೀಪರ್ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 27: ಯಾದಗಿರಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ 2025–26ನೇ ಸಾಲಿನ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ 6 ದಿನಗಳ ವರೆಗೆ ಅಂಗಡಿ ಕೀಪರ್ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ನಿರ್ದೇಶಕ ನರೇಂದ್ರಕುಮಾರ ದಿವಾಗನ್ ಅವರು ತಿಳಿಸಿದ್ದಾರೆ.

ವಿಶೇಷ ಸೂಚನೆ: ಗ್ರಾಮೀಣ ಭಾಗದವರು ಆಗಿರಬೇಕು, ಬಿಪಿಎಲ್, ಎಎಪಿ, ಪಿಹೆಚ್‌ಹೆಚ್ ರೇಷನ್ ಕಾರ್ಡ್ ಕಡ್ಡಾಯವಾಗಿ ಹೊಂದಿರಬೇಕು, ಊಟ ವಸತಿ ಸಹಿತ ಉಚಿತ ವಾಗಿರುತ್ತದೆ, 18 ರಿಂದ 45 ವರ್ಷ ಒಳಗಿರಬೇಕು, ಸಂಸ್ಥೆಯ ಸಮವಸ್ತ್ರ ಮತ್ತು ನೋಟು ಬುಕ್ ಪೆನ್ ಉಚಿತವಾಗಿ ನೀಡಲಾಗುತ್ತದೆ, ಎಸ್‌ಬಿಐ RSETI ದಿಂದ ವಸ್ತ್ರ (ಅಂಗಡಿ ಕೀಪರ್) ತರಬೇತಿ ಪ್ರಮಾಣ ನೀಡಲಾಗುತ್ತದೆ, ಎಲ್ಲಾ ತರದ ಲೋನ್ ಮಾಹಿತಿ ನೀಡಲಾಗುವುದು.

**ದಾಖಲಾತಿಗಳು :** ಬಿಪಿಎಲ್, ಎಎಪಿ, ಪಿಹೆಚ್‌ಹೆಚ್ ರೇಷನ್ ಕಾರ್ಡ್, ಆಧಾರ್ ಕಾರ್ಡ್, ಅಂಕಪಟ್ಟಿ ಪ್ರಮಾಣ ಝುರಾಕ್ಸ್ ಪ್ರತಿ, ವರ್ಗಾವಣೆ ಪ್ರಮಾಣ ಝುರಾಕ್ಸ್ ಪ್ರತಿ ಲಗತ್ತಿಸಬೇಕು, 4 ಪಾಸ್ ಪೋಟೋ ಲಗತ್ತಿಸಬೇಕು, ಮೊದಲ ಬಂದ 35 ಅರ್ಜಿಗಳು ಮಾತ್ರ ತರಬೇತಿಗೆ ತೆಗೆದುಕೊಳ್ಳಲಾಗುವುದು ತರಬೇತಿ 2025ರ ಜುಲೈ 1ರ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ನಿರ್ದೇಶಕರ ಮೊ.ನಂ.9880666117, 8088235941, 9483236840, 9008423316ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೀದರ:ಓಲ್ಡ್ ಸಿಟಿಯಲ್ಲಿರುವ ನಿವಾಸಿ ವಿಶಾಲ ಸಿಂಧೂಲರವರ ಬೆನ್ನು ಮೊಳೆ ಚಿಕಿತ್ಸಗಾಗಿ ನೇರವಾಗಿ ಭರವಸೆಯ ಬೆಳಕು ಜನಸೇವಾ ಟ್ರಸ್ಟ್ (ರಿ) ವತಿಯಿಂದ ಹಿರೇಮಠ್ ದಂಪತಿಗಳಿಂದ 26,212 ರೂಪಾಯಿ ಸಹಾಯ ಧನ ಮಾಡಿದರು. ಈ ಸಂದರ್ಭದಲ್ಲಿ ಪೀಠರ ಚಿಡುಗುಂಪ್ಪಾ. ರಮೇಶ್ ಮರ್ಜಾಪೂರ್. ಅಲೆಗ್ಸಡರ್. ನಿಲೇಶ್ ರಾಠೋಡ್ ಇದ್ದರು.

## ಜಾತ್ರೆಗಳು ಸಮಾಜಮುಖಿಯಾಗಿರಬೇಕು ವೀರಯ್ಯ ಉಳಾಗಡ್ಡಿಮಠ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಜಾತ್ರೆಗಳಲ್ಲಿ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಾಗ ಮಾತ್ರ ಜಾತ್ರೆ ಜನಮಾನಸದಲ್ಲಿ ಉಳಿಯಲು ಸಾದ್ಯ ಎಂದು ಶ್ರೀಮಠದ ಉಪಾಧ್ಯಕ್ಷರಾದ ವೀರಯ್ಯ ಉಳಾಗಡ್ಡಿಮಠ ಹೇಳಿದರು.

ಅವರು ಪಟ್ಟಣದ ಮುಂಡರಗಿ ಅನ್ನದಾನೀಶ್ವರ ಶಾಖಾಮಠದಲ್ಲಿ ನಡೆದ 202ನೇ ಶಿವಾನುಭವ ಮತ್ತು ಶ್ರೀಮಠದ 2025ನೇ ಸಾಲಿನ ಜಾತ್ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಭಕ್ತರ ಸಹಕಾರವೇ ಕಾರ್ಯಕ್ರಮ ಯಶಸ್ವಿಗೆ ಕಾರಣ, ಶ್ರೀಮಠದ ಭಕ್ತ ವರ್ಗ ಸಾಕಷ್ಟು ಸೇವೆ ಮಾಡುತ್ತಿದೆ, ಕುಕನೂರ ಸೇರಿದಂತೆ ಹಳ್ಳಿಗಳ ಭಕ್ತರ ಕೊಡುಗೆ ಶ್ರೀಮಠಕ್ಕೆ ತುಂಬಾ ಇದೆ ಎಂದರು.

ನಂತರ ಮಾತನಾಡಿದ ಶ್ರೀಮಠದ ಕಾರ್ಯದರ್ಶಿ ಗದಿಗೆಪ್ಪ ಪವಾಡಶೆಟ್ಟಿ ಈ ವರ್ಷದ ಜಾತ್ರೆ ಹಲವಾರು ವಿಶೇಷತೆಗಳಿಂದ ಕೂಡಿದೆ ಅದರಲ್ಲಿ ಗುದ್ನೇಶ್ವರ ಪುರಾಣ, ಲಿಂಗದಾರಣ, ಪಾದಯಾತ್ರೆ, ಅಯ್ಯಾಚಾರ, ಸಾಮೂಹಿಕ ವಿವಾಹಗಳು, ರಥೋತ್ಸವ, ಭಕ್ತಹಿತಚಿಂತನಾಗೋಷ್ಠಿ, ಶಿವಾನುಭವ, ಸಾಧಕರ ಸನ್ಮಾನ, ಗುರುವಂದನಾ, ಕುಂಭೋತ್ಸವ, ಸಾಂಸ್ಕೃತಿಕ ಕಾರ್ಯಕ್ರಮಗಳು ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಯುವ ಮುಖಂಡ ಯಲ್ಲಪ ಹೊಸಮನಿ ಮಾತನಾಡಿ ಭಕ್ತ–ರಿಂದ ಭಕ್ತರಿಗಾಗಿ ಭಕ್ತರಿಗೋಸ್ಕರ ಹಲವಾರು ವರ್ಷಗಳಿಂದ ಶ್ರೀಮಠ ಹಲವಾರು ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ, ಇಂತಹ ಪುಣ್ಯಮಯ ಕಾರ್ಯದಲ್ಲಿ ಎಲ್ಲಾರು ಪಾಲ್ಗೊಂಡು ತಮ್ಮ ಸೇವೆಯನ್ನ ಸಲ್ಲಿಸಬೇಕು ಹಾಗೂ ಶ್ರೀಮಠದಲ್ಲಿ ಪುರಾಣ ಜುಲೈ 30 ರಿಂದ ಆಗಸ್ಟ್ 22 ರವರೆಗೆ ಗುದ್ನೇಶ್ವರ ಪುರಾಣ ಅಂದು ಸಾಮೂಹಿಕ ವಿವಾಹ ಮತ್ತು ರಥೋತ್ಸವ ಜರುಗಲಿದೆ ಎಂದರು.

ಈ ಸಂದರ್ಭದಲ್ಲಿ ಪೂಜ್ಯ ಮಹಾದೇವ ಸ್ವಾಮೀಜಿ, ವೀರಯ್ಯ ತೋಂಟದಾರ್ಯಮಠ, ಶರಣಪ್ಪ ಗುತ್ತಿ, ಸಂಗಮೇಶ ಕಲ್ಮಠ, ಈಶಪ್ಪ ಮಾಡಿವಾಳರ, ಪ್ರಭು ಶಿವಶಿಂಪರ, ಬಸಪ್ಪ ಭಂಗಿ, ರವಿ ಗದಗ, ಹನುಮಂತ ಭಂಗಿ, ಅಶೋಕ, ಶಿವು ಸೇರಿದಂತೆ ಹಲವಾರು ಭಕ್ತರು ಇದ್ದರು.

## ನೇತಾಜಿ ನಗರದ ಮಹಿಳೆ ಕಾಣೆ: ಪತ್ತೆಗೆ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 27–ಇಲ್ಲಿನ ನೇತಾಜಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ನಿವಾಸಿ ರೇಣುಕಾ ಬುಜ್ಜಪ್ಪ (32) ಎಂಬ ಮಹಿಳೆಯು ಜೂನ್ 18ರ ಬೆಳಿಗ್ಗೆ 8.30ಕ್ಕೆ ಮನೆಯಿಂದ ಹೊರಗಡೆ ಹೋದವಳು ಮರಳಿ ಮನೆಗೆ ಬಾರದೆ ಕಾಣೆ–ಯಾಗಿದ್ದು, ಈ ಕುರಿತು

ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ. 70/2025 ಕಲಂರಡಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ಮಹಿಳೆಗೆ ಮಗ ರಾಕೇಶ್ (13) ತಂಗಿ ಮಲ್ಲಮ್ಮ (30) ಸೇರಿದಂತೆ ಒಟ್ಟು 5 ಜನ ವಾಸವಾಗಿದ್ದು, ತನ್ನ ಆಧಾರ್ ಕಾರ್ಡ, ಬ್ಯಾಂಕ್ ಪಾಸ್ ಬುಕ್, ಎಟಿಎಮ್ ಕಾರ್ಡ ತೆಗೆದುಕೊಂಡು ಹೋಗಿರುತ್ತಾಳೆ.

ಮಹಿಳೆಯ ಚಹರೆ ಪಟ್ಟಿ: ಎತ್ತರ 5.0 ಫೀಟ್, ದುಂಡು ಮುಖ, ಸದೃಢ ಮೈ ಕಟ್ಟು, ಸಾದ ಕೆಂಪು ಬಣ್ಣ, ಕಪ್ಪು ಬಣ್ಣದ ಕೂದಲು, ನೀಲಿ ಬಣ್ಣದ ಸೀರೆ, ಬಿಳಿ ಬಣ್ಣದ ಕುಪ್ಪಸ ಉಡುಪುಗಳನ್ನು ಧರಿಸಲಾಗಿದ್ದು, ಕನ್ನಡ ಹಾಗೂ ತೆಲುಗು ಭಾಷೆ ಮಾತನಾಡುತ್ತಾಳೆ.

ಈ ಮಹಿಳೆಯ ಸುಳಿವು ಸಿಕ್ಕಲ್ಲಿ ನೇತಾಜಿನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532–240222 ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ: 08532–235635, 08532–235100, 9480803800 ಅಥವಾ ಪಿ.ಎಸ್.ಐ (ಕಾ.ಸು) 9480803846 ನೇತಾಜಿ ನಗರ ಠಾಣೆ ಹಾಗೂ ಸಿ.ಪಿ.ಐ ಪಶ್ಚಿಮ ವೃತ್ತ ರಾಯಚೂರು 9480803831ಗೆ ಸಂಪರ್ಕಿಸಬಹುದಾಗಿದೆ. ಮಾಹಿತಿ ನೀಡಿದವರಿಗೆ ಪೊಲೀಸ್ ಇಲಾಖೆಯಿಂದ ಸೂಕ್ತ ಬಹುಮಾನ ನೀಡಲಾಗುವುದು ಎಂದು ನೇತಾಜಿ ನಗರ ಪೊಲೀಸ್ ಠಾಣೆಯ ಪಿ.ಎಸ್.ಐ ಲಕ್ಷ್ಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ಅಸಹಜ ಸಾವು ಸಂಭವಿಸದಂತೆ ಅಧಿಕಾರಿಗಳು ಗಮನಹರಿಸಿ: ಶೇಖರಗೌರ ಜಿ. ರಾಮತ್ನಾಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮಕ್ಕಳ ಅಸಹಜ ಸಾವಿನ ಪ್ರಕರಣಗಳು ಸಂಭವಿಸದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಸೂಕ್ತ ಗಮನಹರಿಸುವಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌರ ಜಿ. ರಾಮತ್ನಾಳ ಹೇಳಿದರು.



ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ. ಕೆ.ಟಿ. ತಿಪ್ಪೇಸ್ವಾಮಿ ಅವರ ಉಪಸ್ಥಿತಿಯಲ್ಲಿ ಕೊಪ್ಪಳ ಜಿಲ್ಲೆಯ "ಮಕ್ಕಳ ಅಸಹಜ ಸಾವಿನ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ" ವಿವಿಧ ಭಾಗೀದಾರರ ಇಲಾಖೆಗಳ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇತ್ತೀಚೆಗೆ ವಿದ್ಯುತ್ ಸ್ಪರ್ಶ, ನಿಷ್ಕ್ರಿಯ ಕಲ್ಲುಕ್ವಾರಿ ಮತ್ತು ಕೃಷಿಹೊಂಡಗಳಲ್ಲಿ ಈಜಲು ಹೋಗಿ ಮಕ್ಕಳು ಸಾವನ್ನಪ್ಪಿರುವುದು, ಆತ್ಮಹತ್ಯೆ ಹಾಗೂ ಹಾವುಕಡಿತ ಮುಂತಾದ ಕಾರಣಗಳಿಂದ ಮಕ್ಕಳು ಮರಣಹೊಂದುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ಜಿಲ್ಲೆಯಲ್ಲಿ 2023ನೇ ಸಾಲಿನಲ್ಲಿ 31 ಮಕ್ಕಳು 2024ನೇ ಸಾಲಿನಲ್ಲಿ 42 ಮಕ್ಕಳು ಹಾಗೂ ಪ್ರಸ್ತುತ ಸಾಲಿನಲ್ಲಿ ಇದುವರೆಗೆ 18 ಮಕ್ಕಳು ಸಾವನ್ನಪ್ಪಿರುವುದು ಅಘಾತಕಾರಿ ಸಂಗತಿಯಾಗಿದೆ. ಆದ್ದರಿಂದ ಮಕ್ಕಳ ಸುರಕ್ಷತೆ ಮತ್ತು ಮಕ್ಕಳ ಅಸಹಜ ಸಾವಿನ ಪ್ರಕರಣಗಳು ಸಂಭವಿಸದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಸೂಕ್ತ ಗಮನಹರಿಸಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಿದರು.

ಇದೆ ಜೂನ್ 19 ರಂದು ಜಿಲ್ಲೆಯ ವಿವಿಧ ಶಾಲೆ, ವಸತಿ ಶಾಲೆ, ಅಂಗನವಾಡಿ ಕೇಂದ್ರ, ಪಂಚಾಯತಿ, ಮಕ್ಕಳ ಪಾಲನಾ ಸಂಸ್ಥೆಗಳು, ಮಕ್ಕಳ ವಿಶೇಷ ಪೊಲೀಸ್ ಘಟಕ ಮತ್ತು ಪೋಲೀಸ್ ಠಾಣೆಗಳಿಗೆ ಪ್ರವಾಸ ಕೈಗೊಂಡು ಪರಿಶೀಲಿಸಿ ಮಕ್ಕಳ ಹಕ್ಕುಗಳ ಅನುಷ್ಠಾನ ಮತ್ತು ತೆಗೆದುಕೊಂಡ ರಕ್ಷಣಾ ಕ್ರಮಗಳ ಕುರಿತು ಮಾಹಿತಿ ಪಡೆಯಲಾಗಿದೆ ಎಂದರು.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಡಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ, ಸರ್ಕಾರಿ ಮತ್ತು ಖಾಸಗಿ ಶಾಲೆ, ಕಾಲೇಜು, ವಸತಿಯುತ ಶಾಲೆಯ ಮಕ್ಕಳ ಪಾಲನಾ ಸಂಸ್ಥೆಗಳಗಳ ಕಂಪೌಡ ಒಳಗೆ ಯಾವುದೇ ವಿದ್ಯುತ್ ಟಿ.ಸಿಯನ್ನು ಅಳವಡಿಸಿರಬಾರದು. ಶಾಲೆಯ ಮೇಲ್ಛಾವಣಿ, ಆವರಣ ಹಾಗೂ ಮೈದಾನಗಳ ಮೇಲೆ ಯಾವುದೇ ತರಹದ ವಿದ್ಯುತ್ ತಂತಿಗಳು ಹಾದುಹೋಗಿರಬಾರದು. ಒಂದುವೇಳೆ ಅಂಗನವಾಡಿ ಶಾಲೆ, ಕಾಲೇಜು ಮತ್ತು ವಸತಿಯುತ ಶಾಲೆಗಳ ಕಂಪೌಡ ಒಳಗೆ ವಿದ್ಯುತ್ ತಂತಿಗಳು ಹಾದುಹೋಗಿದ್ದಲ್ಲಿ ಅದರ ಮಾಹಿತಿಯನ್ನು ಇಲಾಖಾ ಮುಖ್ಯಸ್ಥರು ಜುಲೈ 10ರೊಳಗಾಗಿ ಸಂಗ್ರಹಿಸಿ ಸಂಬಂಧಿಸಿದ ಜೆಸ್ಕಾಂ ಇಲಾಖೆರವರಿಗೆ ಮಾಹಿತಿಯನ್ನು ಸಲ್ಲಿಸಿ, ವಿದ್ಯುತ್ ಲೈನ್ ತೆರವುಗೊಳಿಸಲು ಕ್ರಮವಹಿಸಿ ಆಯೋಗಕ್ಕೆ ತುರ್ತಾಗಿ ವರದಿ ಸಲ್ಲಿಸುವಂತೆ ಸೂಚಿಸಿದರು.

ಮಕ್ಕಳ ಸಂರಕ್ಷಣೆ ಹಿತದೃಷ್ಟಿಯಿಂದ ಎಲ್ಲಾ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಮಕ್ಕಳ ರಕ್ಷಣಾ ನೀತಿ–2016ರನ್ನು ಅನುಷ್ಠಾನಗೊಳಿಸಿ ಮಕ್ಕಳಿಗೆ ಸೂಕ್ತ ಭದ್ರತೆ ನೀಡಿರುವ ಬಗ್ಗೆ ಖಾತ್ರಿಪಡಿಕೊಂಡು ಆಯೋಗಕ್ಕೆ 20ದಿನಗಳ ಒಳಗಾಗಿ ವರದಿ ಸಲ್ಲಿಸಲು ಶಿಕ್ಷಣ ಇಲಾಖೆ, ಹಿಂದುಗಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳಿಗೆ ಕ್ರಮ ವಹಿಸುವಂತೆ ತಿಳಿಸಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ. ಕೆ.ಟಿ. ತಿಪ್ಪೇಸ್ವಾಮಿ ಅವರು ಮಾತನಾಡಿ, ಶಾಲೆ ಮತ್ತು ಕಾಲೇಜುಗಳಿಂದ ಮಕ್ಕಳು ಹೊರಗುಳಿಯದಂತೆ ಸೂಕ್ತ ಕ್ರಮವಹಿಸಿ ಪುನಃ ಮಕ್ಕಳನ್ನು ಶಾಲೆ, ಕಾಲೇಜುಗಳಿಗೆ ಹಾಜರಾಗಲು ಕ್ರಮವಹಿಸಬೇಕು. ಬಾಲ್ಯವಿವಾಹ, ಪೋಕ್ಸೊ ಹಾಗೂ ಮುಂತಾದ ದೌರ್ಜನ್ಯಗಳಿಂದ ಮಕ್ಕಳನ್ನು ರಕ್ಷಿಸಲು ಅಧೀನ ಅಧಿಕಾರಿಗಳಿಗೆ ಜವಾಬ್ದಾರಿ ನಿಗದಿಪಡಿಸಬೇಜು. ಯಾವುದೇ ಮಗು ಶಾಲೆಯಿಂದ ಹೊರಗುಳಿಯದೇ ಶಿಕ್ಷಣ ಪಡೆಯಲು ಮತ್ತು ಸೂಕ್ತ ರಕ್ಷಣೆ ಹೊಂದಲು ಕ್ರಮವಹಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಪೊಲೀಸ್ ಇಲಾಖೆಯಿಂದ ನಿಯಮಿತವಾಗಿ ತೆರೆದಮನೆ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವ ಮೂಲಕ ಮಕ್ಕಳ ಸುರಕ್ಷತಾ ಕ್ರಮಗಳ ಕುರಿತು ಹೆಚ್ಚು ಮಕ್ಕಳು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮತ್ತು ಶಾಲಾ ಅವಧಿ ಮತ್ತು ರಜಾ ದಿನಗಳಲ್ಲಿ ಶಾಲಾ ಆವರಣದಲ್ಲಿ ಅಹಿತಕರ ಘಟನೆಗಳು ನಡೆಯದಂತೆ ನಿಯಮಿತವಾಗಿ ಪೊಲೀಸ್ ಬೀಟ್ ವ್ಯವಸ್ಥೆಯನ್ನು ಎಲ್ಲಾ ಶಾಲೆ ಮತ್ತು ಕಾಲೇಜುಗಳಿಗೆ ಒದಗಿಸಲು ಹಾಗೂ ಶಾಲೆ, ಕಾಲೇಜುಗಳ ಸುತ್ತಮುತ್ತ ಯಾವುದೇ ತಂಬಾಕು ಮತ್ತು ಮದ್ಯ ಮಾರಾಟ ಅಂಗಡಿಗಳಿದ್ದಲ್ಲಿ ಪರಿಶೀಲಿಸಿ, ಒಂದು ತಿಂಗಳ ಒಳಗಾಗಿ ಅವುಗಳನ್ನು ತೆರವುಗೊಳಿಸಲು ಕ್ರಮವಹಿಸುವಂತೆ ತಿಳಿಸಿದರು.

ಎಲ್ಲಾ ಇಲಾಖೆಗಳು ಪತ್ರ ವ್ಯವಹಾರ ಮಾಡುವ ಸಂದರ್ಭದಲ್ಲಿ ಪತ್ರದ ಕೆಳಭಾಗದಲ್ಲಿ ಕಡ್ಡಾಯವಾಗಿ "ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ" ಎಂಬ ಬರಹವನ್ನು ಮುದ್ರಿಸುವುದು ಹಾಗೂ ಎಲ್ಲಾ ಇಲಾಖೆಯ ಕಚೇರಿಗಳ ಮುಂಭಾಗದಲ್ಲಿ "ಮಕ್ಕಳ ಸಹಾಯವಾಣಿ 1098ರ ಶಾಶ್ವತ ಗೋಡೆಬರಹವನ್ನು ಕಡ್ಡಾಯವಾಗಿ ಒಂದು ತಿಂಗಳ ಒಳಗಾಗಿ ಬರೆಯಿಸಿ ಜಿ.ಪಿ.ಎಸ್ ಪೋಟೋ ಸಹಿತ ಆಯೋಗ–ಕ್ಕೆ ವರದಿ ನೀಡುವ ಮೂಲಕ ಸಾರ್ವಜನಿಕರಿಗೆ ಬಾಲ್ಯವಿವಾಹ ನಿಷೇದ ಹಾಗೂ ಮಕ್ಕಳ ರಕ್ಷಣೆಯ ಅವಶ್ಯಕತೆ ಕುರಿತು ಹೆಚ್ಚು ಪ್ರಚಾರ ಮಾಡಲು ಕ್ರಮವಹಿಸುವಂತೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ಶೆಟ್ಟೆಪ್ಪನವರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಸೇರಿದಂತೆ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಹಾಗೂ ಎಲ್ಲಾ ಇಲಾಖೆಗಳ ಜಿಲಾಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಶ್ವ ಮಾದಕ ವಸ್ತು ರಹಿತ ದಿನಾಚರಣೆ ದುಶ್ಚಟ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಹೊಣೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ದುಶ್ಚಟ ಮುಕ್ತ ಸಮಾಜ ನಿರ್ಮಾಣ ನಮ್ಮೆಲ್ಲರ ಹೊಣೆ ಯುವ ಸಮುದಾಯ ಗುಟಕಾ, ಸಿಗರೆಟ್, ಧೂಮಪಾನ ಸೇವನೆಯಿಂದ ದುಶ್ಚಟದಿಂದ ದೂರವಿದ್ದು ಉತ್ತಮ ಜೀವನ ರೂಪಿಸಿಕೊಳ್ಳುವಂತೆ ಡಾ. ವಿವೇಕ ವಾಗಲೆ ಅವರು ಯಲಬುರ್ಗಾ ತಾಲೂಕಿನ ಮೂಧೋಳದ ತ್ರೀಲಿಂಗೇಶ್ವರ ಪ್ರೌಢ ಶಾಲೆಯಲ್ಲಿ ಜರುಗಿದ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ಸಮಿತಿ, ಜ್ಞಾನ ವಿಕಾಸ ಸಮಿತಿ ಇವುಗಳ ಸಹಕಾರದಲ್ಲಿ ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು. ತ್ರೀಲಿಂಗೇಶ್ವರ .ವಿ.ಸಮಿತಿ ಅದ್ಯಕ್ಷ ಚಂದ್ರಶೇಖರ ದೇಸಾಯಿ ಅವರು ಸಸಿಗೆ ನೀರು ಹಾಕಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ವಿವಿಧ ಚಟಗಳಿಗೆ ದಾಸರಾಗಿ ಹಲವು ರೋಗಗಳಿಗೆ ಅಂಟಿಕೊಳ್ಳದೆ ಉತ್ತಮರ ಸಂಘ ಮಾಡಿಕೊಂಡು ಸುಂದರ ಬದುಕು ನಿಮ್ಮದಾಗಿಸಿಕೊಳ್ಳಿ ಎಂದು ಯೋಜನಾಧಿಕಾರಿ ಗಣೇಶ ನಾಯ್ಕ್ ಅವರು ಮಾತನಾಡಿದರು. ಮೋಜು ಮಸ್ತಿಗಾಗಿ ವಿದ್ಯಾರ್ಥಿಗಳು ಸಿಗರೇಟ್, ಗುಟಕಾ ಅತಿಯಾಗಿ ಸೇವನೆ ಮಾಡುತ್ತಾರೆ ಇದರಲ್ಲಿ ಸಾಕಷ್ಟು ವಿಷವಿರುತ್ತದೆ ಇದರ ಅರಿವು ಇದ್ದರು ಸಹ ಸೇವನೆ ಮಾಡಿ ಇದರಿಂದ ಕ್ಯಾನ್ಸರ್ ರೋಗಕ್ಕೆ ತುತ್ತಾಗಿ ಜೀವನ ಪರ್ಯಂತಾರ ತೊಂದರೆ ಅನುಭವಿಸಿ ಸಾವನ್ನಪ್ಪುತ್ತಾರೆ ಆದ್ದರಿಂದ ವಿದ್ಯಾರ್ಥಿಗಳು ರೋಗ ರುಜಿನಗಳಿಂದ ತೆ–ೂಂದರೆ ಅನುಭವಿಸಿ ಮರಣ ಹೊಂದುತ್ತಾರೆ , ಯುವ ಸಮುದಾಯ ದುಶ್ಚಟಗಳಿಂದ ದೂರ ಇರಬೇಕು ಎಂದು ಅಖಿಲ ಕರ್ನಾಟಕ ಕೊಪ್ಪಳ ಜಿಲ್ಲಾ ಜನಜಾಗೃತಿ ಸಮಿತಿ ಸದಸ್ಯ ಶರಣಬಸಪ್ಪ ದಾನಕೈ ಅವರು ಅದ್ಯಕ್ಷತೆ ವಹಿಸಿ ಮಾತನಾಡಿದರು. ಜ್ಞಾನ ವಿಕಾಸ ಸಮಿತಿಯ ಸಮನ್ವಯಾಧಿಕಾರಿ ರತ್ನ ಪಾಟೀಲ, ತ್ರೀಲಿಂಗೇಶ್ವರ ವಿ.ಸಂಸ್ಥೆಯ ಕಾರ್ಯದರ್ಶಿ ಯಲ್ಲಪ್ಪ ಹುನಗುಂದ, ಶಿಕ್ಷಕಿ ಬಸಮ್ಮ ತಳವಾರ ಇವರು ಮಾತನಾಡಿ ಮಕ್ಕಳು ದುಶ್ಚಚಟಗಳಿಂದ ದೂರವಿದ್ದು ತಂದೆ ತಾಯಿಯವರಿಗೆ ಗೌರವ ತರುವ ಕಾರ್ಯಮಾಡಬೇಕು ಎಂದರು. ಒಕ್ಕೂಟದ ಅದ್ಯ–ಕ್ಷೆ ಗೀತಾ ಹಿರೇಹಾಳ, ಸೇವಾ ಪ್ರತಿನಿದಿಗಳಾದ ಕಾಳಮ್ಮ ಬೀಳಗಿಮಠ, ರೇಣುಕಾ ಹುಂಡಿ,, ಶಿಕ್ಷಕರಾದ ಶರಣಪ್ಪ ತಳವಾರ, ಶರಣಪ್ಪ ಚಲವಾದಿ ಸೇರಿದಂತೆ ಸಂಸ್ಥೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದದವರು ಭಾಗವಹಿಸಿದ್ದರು.

# ಬಳ್ಳಾರಿ ಜಿಲ್ಲೆಯಲ್ಲಿ ವಿವಿಧೆಡೆ ಮೊಹರಂ ಹಬ್ಬ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಜಿಲ್ಲೆಯಾದ್ಯಾಂತ ಜೂನ್ 27 ರಿಂದ ಜುಲೈ 07 ರವರೆಗೆ ಜರುಗುವ ಮೊಹರಂ ಹಬ್ಬದ ಆಚರಣೆಯನ್ನು ಜಿಲ್ಲೆಯ ವಿವಿಧ ತಾಲ್ಲೂಕಿನ ಕೆಲ ಗ್ರಾಮಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ನಿಷೇಧಿಸಿ ಬಳ್ಳಾರಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶ ಹೊರಡಿಸಿದ್ದಾರೆ.



ಮೊಹರಂ ಹಬ್ಬದ ಆಚರಣೆಯ ಸಂದರ್ಭದಲ್ಲಿ ವಿವಿಧ ತಾಲ್ಲೂಕುಗಳ ಕೆಲ ಗ್ರಾಮಗಳಲ್ಲಿ ವೈಶಮ್ಯ ಇರುವುದರಿಂದ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಹಾಗೂ ಮೊಹರಂ ಆಚರಿಸುವ ಸಂದರ್ಭದಲ್ಲಿ ಶಾಂತಿ ಮತ್ತು ಸುವ್ಯಸ್ಥೆಗೆ ಧಕ್ಕೆ ಉಂಟಾಗುವ ಬಗ್ಗೆ ವರದಿಗಳು ಇರುವುದರಿಂದ ಮುಂಜಾಗ್ರತ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿದ್ದು, ಪೊಲೀಸ್ ಬಂದೋಬಸ್ತ್ ಪರಿಣಾಮಕಾರಿಯಾಗಿ ಜಾರಿಗೆ ತರಲು ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35 (ಎ) (ಬಿ) (ಡಿ) (ಇ) ರನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿ ಜಿಲ್ಲಾಧಿಕಾರಿಗಳು, ಜೂನ್ 27 ರಿಂದ ಜುಲೈ 07 ರವರೆಗೆ ಆಚರಿಸಲ್ಪಡುವ ಮೊಹರಂ ಹಬ್ಬವನ್ನು ಜಿಲ್ಲೆಯ ವಿವಿಧ ತಾಲ್ಲೂಕುಗಳ ಕೆಲ ಗ್ರಾಮಗಳಲ್ಲಿ ನಿಷೇಧಿಸಲಾಗಿದೆ. ಈ ಸಂದರ್ಭದಲ್ಲಿ ಸಾರ್ವಜನಿಕವಾಗಿ ಜನರು ಗುಂಪು ಸೇರದಂತೆ ಮೆರವಣಿಗೆ ನಡೆಸದಂತೆ ಮತ್ತು ಪಂಜಾಗಳನ್ನು ಕೂಡಿಸದಂತೆ ಮೊಹರಂ ಹಬ್ಬವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಅವರು ಆದೇಶದಲ್ಲಿ ಸ್ಪಷ್ಟಪಡಿಸಿದ್ದಾರೆ.

**ಮೊಹರಂ ಹಬ್ಬ ನಿಷೇಧಿಸಲ್ಪಟ್ಟ ಗ್ರಾಮಗಳು:**

ಬಳ್ಳಾರಿಯ ಗಾಂಧಿನಗರ ಪೊಲೀಸ್ ಠಾಣೆ ವ್ಯಾಪ್ತಿಯ ತಾಳೂರು ರಸ್ತೆಯ ಕನ್ನಡ ನಗರ ಮುಖ್ಯರಸ್ತೆಯ (ನ್ಯಾಯಾಧೀಶರ ವಸತಿಗೃಹ ಕಾಂಪೌಂಡ್ ಪಕ್ಕದಲ್ಲಿ) ಮಹಾನಂದಿಕೊಟ್ಟಂ ಒಳಗಡೆ.

ಸಿರುಗುಪ್ಪ ಪೊಲೀಸ್ ಠಾಣೆ ವ್ಯಾಪ್ತಿಯ ಕೆ.ಸೂಗೂರು, ಮುದೇನೂರು, ಹೀರೆಹಾಳ್, ನಾಡಂಗ,ಬಂಡ್ರಾಳ್,ದೇಶನೂರು, ಕೆ.ಬೆಳಗಲ್, ಅಲಬನೂರು ಗ್ರಾಮಗಳು. ತೆಕ್ಕಲಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯ ತೆಕ್ಕಲಕೋಟೆ, ಹಳೇಕೋಟೆ, ಉಪ್ಪಾರಹೊಸಳ್ಳಿ, ಉಡೇಗೋಳ, ಅರಳಿಗನೂರು ಗ್ರಾಮಗಳು.

ಸಿರಿಗೇರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿನ ಸಿರಿಗೇರಿ, ಕೂರಿಗನೂರು, ತಾಳೂರು, ಕರೂರು ಗ್ರಾಮಗಳು. ಪಿಡಿ ಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಅಸುಂಡಿ ಗ್ರಾಮ.

ಕಂಪ್ಲಿ ಪೊಲೀಸ್ ಠಾಣೆ ವ್ಯಾಪ್ತಿಯ ನಂ.15–ಗೋನಾಳು ಗ್ರಾಮದಲ್ಲಿ ನಿಷೇಧಿಸಲಾಗಿದೆ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

**ನಿಷೇಧಿಸಲಾದ ಚಟುವಟಿಕೆಗಳು:**

ಕರ್ನಾಟಕ ಪೊಲೀಸ್ ಕಾಯ್ದೆ 1963ರ ಕಲಂ 35(ಎ)ರಡಿ ಶಸ್ತ್ರ, ಬಡಿಗೆ, ಬರ್ಚಿ, ಗದೆ, ಬಂದೂಕು, ಚೂರಿ, ಕೋಲು, ಲಾಠಿ ಅಥವಾ ಶರೀರಕ್ಕೆ ಗಾಯ ಮಾಡಲು ಉಪಯೋಗಿಸಬಹುದಾದ ಯಾವುದೇ ವಸ್ತುವನ್ನು ಒಯ್ಯುವುದು. ಯಾವುದೇ ದಾಹಕ (ನಾಶಕಾರಿ) ಪದಾರ್ಥ ಇಲ್ಲವೇ ಸ್ಫೋಟಕ ವಸ್ತು ಒಯ್ಯುವುದು.

ಯಾವುದೇ ವ್ಯಕ್ತಿಗಳ ಭಾವ ಚಿತ್ರಗಳನ್ನು ಅವಮಾನಕಾರರೀತಿಯಲ್ಲಿ ಪ್ರದರ್ಶಿಸಬಾರದು. ಬಹಿರಂಗವಾಗಿ ಘೋಷಣೆ ಮಾಡುವುದನ್ನು, ಪದ ಹಾಡುವುದನ್ನು, ವಾದ್ಯ ಬಾರಿಸುವುದನ್ನು, ವ್ಯಾಖ್ಯಾನ ಕೊಡುವುದನ್ನು, ಸನ್ನೆ ಪ್ರದರ್ಶನವನ್ನು, ಆ ಆಫೀಸರರ ಅಭಿಪ್ರಾಯದಲ್ಲಿ ಸಭ್ಯತೆ ಅಥವಾ ನೀತಿಯನ್ನು ಅತಿಕ್ರಮಿಸಬಹುದಾದ ಯಾವುದೇ ವಸ್ತು ಅಥವಾ ತಯಾರಿ ಪ್ರದರ್ಶನ ಅಥವಾ ಪ್ರಸಾರವನ್ನು ಪ್ರತಿಬಂಧಿಸುವುದು ಹಾಗೂ ಗುಂಪುಗೂಡಿ ಮೆರವಣಿಗೆ ಮಾಡುವುದು.

ಈ ಪ್ರತಿಬಂಧಕ ಆಜ್ಞೆಗೆ ವಿರುದ್ಧವಾಗಿ ಯಾರೊಬ್ಬರು ವರ್ತಿಸಿದರೆ, ಅವರು ಯಾವುದೇ ಪೊಲೀಸ್ ಅಧಿಕಾರಿಗಳಿಂದ ಇಂತಹ ವಸುಗಳನ್ನು ವಶಪಡಿಸಿಕೊಳ್ಳಲು ಪಾತ್ರರಾಗುವರು ಹಾಗೂ ಈ ರೀತಿ ಪಡೆಯಲ್ಪಟ್ಟ ಪದಾರ್ಥ ಸರ್ಕಾರಕ್ಕೆ ಜಮಾ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ಮೀನು ಸಾಕಾಣಿಕೆಯಿಂದ ಆರ್ಥಿಕ ಅಭಿವೃದ್ಧಿ: ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಮಹಿಳೆಯರು ಬಿಡುವಿನ ಸಮಯದಲ್ಲಿ ತಮ್ಮ ಕೃಷಿ ಚಟುವಟಿಕೆ ಜೊತೆಗೆ ಕೃಷಿ ಹೊಂಡದಲ್ಲಿ ಮೀನು ಸಾಕಾಣಿಕೆ ಮಾಡುವುದರಿಂದ ತಮ್ಮ ಕುಟುಂಬ ಆರ್ಥಿಕ ಅಭಿವೃದ್ಧಿಯಾಗುವುದು ಎಂದು ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ ಗಿರಿಜಾ ಶಂಕರ ಅವರು ಹೇಳಿದರು.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ಆವರಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಸ್ವ ಸಹಾಯ ಸಂಘದ ಮಹಿಳೆಯರಿಗೆ 10 ದಿನಗಳ ಉಚಿತ ಮೀನು ಸಾಕಾಣಿಕೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಿನುಗಾರಿಕೆ ಇಲಾಖೆಯ ಉಪ ನಿರ್ದೇಶಕ ಶಿವಣ್ಣ ಅವರು ಮಾತನಾಡಿ, ಮೀನು ಆರೋಗ್ಯಕ್ಕೆ ಉತ್ತಮ ಆಹಾರವಾಗಿದ್ದು, ಪ್ರತಿಯೊಂದು ದೇಹದಲ್ಲಿರುವ ಕೊಲೆಸ್ಟ್ರಾಲ್‌ನ್ನು ಸಮತೋಲನದಲ್ಲಿ ಇಡುತ್ತದೆ. ಇದನ್ನು ಔಷಧಿ ತಯಾರಿಕೆಯಲ್ಲಿ ಉಪಯೋಗಿಸುತ್ತಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್‌ನ ಯೋಜನಾ ನಿರ್ದೇಶಕ ಭೀಮಪ್ಪ.ಕೆ ಲಾಳಿ, ವಿನೋದ ಕುಮಾರ.ಸಿ., ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕ ರಾಜೆಸಾಬ್.ಎಚ್ ಎರಿಮನಿ, ಜಿಲ್ಲಾ ಪಂಚಾಯತ್‌ನ ಎನ್‌ಆರ್‌ಎಲ್‌ಎಂ ಸಿಬ್ಬಂದಿಗಳಾದ ರಾಜೇಂದ್ರ, ವಿಜಯ ಕುಮಾರ, ರಘುವರ್ಮ, ಉಪನ್ಯಾಸಕರಾದ ದಿನೇಶ್, ಸಿದ್ದಲಿಂಗಮ್ಮ, ಸಂತೋಷ ಕುಮಾರ್ ಸೇರಿದಂತೆ ಮಹಿಳಾ ಶಿಭಿರಾರ್ಥಿಗಳು ಇನ್ನಿತರರು ಉಪಸ್ಥಿತರಿದ್ದರು.

# ಕುರೇಕುಪ್ಪ: ವಸತಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಕುರೇಕುಪ್ಪ ಪುರಸಭೆ ವ್ಯಾಪ್ತಿಯಲ್ಲಿ 2025–26ನೇ ಸಾಲಿಗೆ ಪ್ರಧಾನಮಂತ್ರಿ ಆವಾಸ್ (ನಗರ) 2.0 ಯೋಜನೆಯಡಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಒಂಟಿ ಮಹಿಳೆಯರು, ಅಂಗವಿಕಲರು, ಹಿರಿಯ ನಾಗರಿಕರು, ತೃತೀಯಲಿಂಗಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ವರ್ಗ, ಸ್ವಚ್ಚತಾ ಕಾರ್ಮಿಕರು, ಪಿಎಂ ಸ್ವಾನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪ್ಯಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು, ವಲಸೆ ಬಂದ ಕುಟುಂಬದವರು ಅರ್ಜಿ ಸಲ್ಲಿಸಬಹುದು.

ಆನ್‌ಲೈನ್ ವೆಬ್‌ಸೈಟ್ಃಣಣಠಿ:// ಠಿಟಚಿಥಿ–ಣಡಿಛಚಿಟಿ.ರಠತ.ಟಿ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಜುಲೈ 15 ಅರ್ಜಿ ಸಲ್ಲಿಸಲು ಕೊನೆಯ ದಿನ.

**ಬೇಕಾದ ದಾಖಲೆ:**

ಆಧಾರ್ ಕಾರ್ಡ್ (ಮನೆಯ ಯಜಮಾನ/ನಿ ಹಾಗೂ ತಂದೆ/ ತಾಯಿಯ ಮತ್ತು ಪಡಿತರ ಚೀಟಿಯಲ್ಲಿರುವಂತೆ) ಮತ್ತು ಕುಟುಂಬ ಸದಸ್ಯರ ಆಧಾರ್ ಕಾರ್ಡ್ಗಳು. ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಭಂದಿಸಿದ ದಾಖಲೆಗಳು (ಹಕ್ಕು ಪತ್ರ, ಕ್ರಯ ಪತ, ದಾನ ಪತ್ರ, ಉಡುಗೋರೆ ಪತ್ರ, ಖಾತಾ ನಕಲು ಫಾರಂ–3).

ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ನಿಗದಿತ ನಮೂನೆ (ಂಟಿಟಿಜಥಣಡಿಜ–2ಂ/2ಃ/2ಅ) ಯಲಿè "Self Undertaking" ಸಲ್ಲಿಸುವುದು. ಮೊಬೈಲ್ ಸಂಖ್ಯೆ, ಪ್ಯಾನ್ ಕಾರ್ಡ್ (ಲಭ್ಯವಿದ್ದಲ್ಲಿ ಮಾತ್ರ).

ಅವಧಿ ಮೀರಿ ಬಂದತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಾರ್ಯಾಲಯ ಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ಎಂದು ತಿಳಿಸಿದ್ದಾರೆ.

# ಜೂ.29 ರಂದು ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 110/11ಕೆ.ವಿ ಮೀನಹಳ್ಳಿ ಉಪ–ಕೇಂದ್ರದ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯ ಕೈಗೊಳ್ಳುತ್ತಿರುವುದರಿಂದ ಜೂ.29 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ಎಫ್–2 ಚಾಗನೂರು ಐಪಿ ಫೀಡರ್ ಮಾರ್ಗದ ಮೀನಹಳ್ಳಿ, ಶಿಡಿಗಿನಮೋಳ, ಕೆ.ವೀರಾಪುರ ಕಾರೆಕಲ್ಲು, ಚಾಗನೂರು ಕೃಷಿ ಪ್ರದೇಶಗಳು. ಎಫ್–1 ಮೀನಹಳ್ಳಿ/ ಕೆ.ವೀರಾಪುರ ಎನ್.ಜೆ.ವೈ ಫೀಡರ್ ಮಾರ್ಗದ ಮೀನಹಳ್ಳಿ, ಶಿಡಿಗಿನಮೋಳ, ಕೆ.ವೀರಾಪುರ, ಕಾರೆಕಲ್ಲು ಗ್ರಾಮಗಳು. ಎಫ್–4 ಎ.ಟಿ.ಪಿ.ಎಸ್ ಎನ್.ಜೆ.ವೈ ಫೀಡರ್ ಮಾರ್ಗದ ಹಗರಿ, ಪಿ.ಡಿ.ಹಳ್ಳಿ, ಕಗ್ಗಲ್, ಲಿಂಗದೇವನಹಳ್ಳಿ, ಯಾಳ್ಪಿ, ಜೋಳದರಾಶಿ, ಚೆಳ್ಳಗುರ್ಕಿ ಗ್ರಾಮಗಳು. ಎಫ್–5 ಹಗರಿ ಐಪಿ ಫೀಡರ್ ಮಾರ್ಗದ ಹಗರಿ, ಪಿ.ಡಿ.ಹಳ್ಳಿ, ಕಗ್ಗಲ್, ಲಿಂಗದೇವನಹಳ್ಳಿ, ಯಾಳ್ಪಿ, ಜೋಳದರಾಶಿ, ಚೆಳ್ಳಗುರ್ಕಿ ಕೃಷಿ ಪ್ರದೇಶಗಳು.

ಎಫ್–6 ಫೀಡರ್ ಮಾರ್ಗದ ಎ–ಒನ್ ಗೋಲ್ಡ್ ಪೈಪ್ಸ್ ಮತ್ತು ಟೂಬ್ಸ್. ಮೆ.ಜಾನಕಿ ಕಾರ್ಪೋ.,ಪ್ರೈ.ಲಿ., ಮೆ.ಬಸಾಯಿ ಸ್ಟೀಲ್ ಪ್ರೈ.ಲಿ., ಮೆ.ಕ್ಲೀನ್ ಮ್ಯಾಕ್ಸ್ ಸೋಲಾರ್, ಕ್ಲೀನ್ ಸೋಲಾರ್, ಮೆ.ಮೌರ್ಯ ಸೀಲಾಮ್ ಸೋಲಾರ್ ಐ.ಪಿ.ಪಿ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿಯಲ್ಲಿ ಸಂಭ್ರಮದ 516ನೇ ಕೆಂಪೇಗೌಡ ಜಯಂತಿ ಆಚರಣೆ

# ಆಧುನಿಕ ಮಹಾನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಆದರ್ಶ ಪಾಲಿಸೋಣ: ಲಿಡ್‌ಕರ್ ಅಧ್ಯಕ್ಷ ಮುಂಡರಗಿ ನಾಗರಾಜ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಕೆಂಪೇಗೌಡರು ಬೆಂಗಳೂರು ಮಹಾನಗರ ಕಟ್ಟಿದ ಮಹಾನ್ ವೀರ, ವಿಜಯನಗರ ಸಾಮ್ರಾಜ್ಯದ ಸಾಮಂತ ರಾಜ್ಯವಾಗಿದ್ದ ಯಲಹಂಕ ನಾಡಿನ ಪಾಳೇಗಾರರಾಗಿದ್ದರು ಎಂದು ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣದಲ್ಲಿ ಮಂಗಳವಾರ ಆಯೋಜಿಸಿದ್ದ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸನಾತನ ಹಿಂದೂ ಸಂಸ್ಕೃತಿಯ ಉಳಿವಿಗಾಗಿ ದೇವಾಲಯಗಳ ನಿರ್ಮಾಣ, ಹಳೆಯ ದೇವಾಲಯಗಳ ಜೀರ್ಣೋದ್ದಾರ ಕಾರ್ಯಗಳು, ಅರ್ಚಕರ ಜೀವನೋಪಾಯಕ್ಕಾಗಿ ಜಮೀನು ನೀಡಿರುವುದು, ರಾಜಧಾನಿಯ ಕೋಟೆ ನಿರ್ಮಾಣದ ಜೊತೆಗೆ ಕೆಂಪೇಗೌಡರು ಸುಮಾರು 64 ಪೇಟೆಗಳನ್ನು ನಿರ್ಮಿಸಿದರೆಂದು ತಿಳಿದುಬರುತ್ತದೆ. ಇವುಗಳಲ್ಲಿ 54 ಪೇಟೆಗಳ ಹೆಸರುಗಳು ಮಾತ್ರ ಇತಿಹಾಸಕಾರರಿಗೆ ಲಭ್ಯವಾಗಿವೆ ಎಂದು ಅವರ ಜೀವನದ ಬಗ್ಗೆ ವಿವರಿಸಿದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಮಾತನಾಡಿ, ಕೆಂಪೇಗೌಡರು ಎಲ್ಲರಿಗೂ ಆದರ್ಶ ವ್ಯಕ್ತಿಯಾಗಿದ್ದು, ಅವರ ಕಾರ್ಯವು ಇಂದಿಗೂ ಜೀವಂತವಾಗಿದೆ. ಅಂತಹ ಮಹಾನ್ ವ್ಯಕ್ತಿಯ ಆಚಾರ ವಿಚಾರಗಳನ್ನು ನಾವೆಲ್ಲರೂ ಪಾಲಿಸೋಣ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಮಾತನಾಡಿ, ಕೆಂಪೇಗೌಡರು ಸುಭದ್ರವಾದ ರಾಜಧಾನಿಯ ನಿರ್ಮಾಣದ ಜೊತೆಗೆ ಬೆಂಗಳೂರು ಸೇರಿದಂತೆ ನಾಡಿನ ತುಂಬಾ ಹಲವು ಕೆರೆ ಕಟ್ಟೆಗಳನ್ನು ನಿರ್ಮಿಸಿದ್ದರು. ಹಾಗೆಯೇ ಸುಮಾರು ಕೆರೆಗಳನ್ನು ಗ್ರಾಮೀಣ ಪ್ರದೇಶದ ಜನರಿಗಾಗಿ ಕುಡಿಯುವ ನೀರಿಗಾಗಿ ನಿರ್ಮಿಸಲಾಗಿದೆ. ಬೆಂಗಳೂರು ನಗರವು ಇತಿಹಾಸದ ಪುಟದಲ್ಲಿ ಸುವರ್ಣಾಕ್ಷರಗಳಲ್ಲಿ ದಾಖಲಾಗಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತು ನಿಕಟಪೂರ್ವ ಅಧ್ಯಕ್ಷ ಸಿದ್ಧರಾಮ ಕಲ್ಮಠ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಕೆಂಪೇಗೌಡರು ಕೆಂಪನಂಜೇಗೌಡ ಹಾಗೂ ಲಿಂಗಾಂಬೆ ದಂಪತಿಗಳಿಗೆ 1510ರಲ್ಲಿ ಯಲಹಂಕದಲ್ಲಿ ಜನಿಸಿದರು. ಕುಲದೇವತೆಯಾದ ಕೆಂಪಮ್ಮ ಹಾಗೂ ಭೈರವರ ಅನುಗ್ರಹದಿಂದ ಜನಿಸಿದ ಕಾರಣ ಕೆಂಪನಂಜೇಗೌಡ ದಂಪತಿಗಳು ಮಗುವಿಗೆ ಕೆಂಪ, ಕೆಂಪಯ್ಯ, ಕೆಂಪಣ್ಣ ಎಂಬ ಹೆಸರಿನಿಂದ ಕರೆಯುತ್ತಿದ್ದರು ಎಂದು ತಿಳಿಸಿದರು.

ಕ್ರಿ.ಶ.1509 ರಲ್ಲಿ ವಿಜಯನಗರದ ಸಿಂಹಾಸನವೇರಿದ್ದ ಶ್ರೀಕೃಷ್ಣದೇವರಾಯರ ಆಡಳಿತದಲ್ಲಿ ವಿಜಯನಗರ ಸಾಮ್ರಾಜ್ಯದ ವೈಭೋಗವನ್ನು ಅನಾವರಣಗೊಳಿಸಲು ಕ್ರಿ.ಶ.1515 ರಲ್ಲಿ ರಾಜಧಾನಿ ಹಂಪಿಯಲ್ಲಿ ಪ್ರಥಮ ಬಾರಿಗೆ ವಿಜಯದಶಮಿ ಉತ್ಸವವನ್ನು ಆರಂಭಿಸಿದರು ಎಂದು ವಿವರಿಸಿದರು.

ಐದು ವರ್ಷದ ಬಾಲಕನಿದ್ದ ಕೆಂಪೇಗೌಡರು ತಂದೆಯವರ ಜೊತೆ ಈ ಸಮಾರಂಭಕ್ಕೆ ಹೋಗಿದ್ದಾಗ ಬಾಲ್ಯದಿಂದ ಶ್ರೀಕೃಷ್ಣದೇವರಾಯರ ಆಡಳಿತಾವಧಿಯ ಧಾರ್ಮಿಕ ಹಾಗೂ ಸಾಂಸ್ಕೃತಿಕ ಸಿರಿಯನ್ನು ಕಣ್ಣಾರೆ ಕಂಡು ತಮ್ಮ ನಾಡಿನಲ್ಲೂ ಈ ಎಲ್ಲಾ ವೈಭವಗಳನ್ನು ಮರು ಪ್ರತಿಷ್ಠಾಪಿಸುವ ಬಯಕೆಯ ಕನಸು ಕಂಡು ಇದರಿಂದಾಗಿ ಹಲವು ಬಾರಿ ಹಂಪಿಗೆ ಭೇಟಿ ಕೊಟ್ಟು ಅಲ್ಲಿನ ವ್ಯವಸ್ಥೆಗಳೆಲ್ಲವನ್ನೂ ಮನದಟ್ಟು ಮಾಡಿಕೊಂಡು ದೂರದೃಷ್ಠಿಯಿಂದ ಬೆಂಗಳೂರು ಮಹಾನಗರವನ್ನು ನಿರ್ಮಿಸಿದರು ಎಂದು ಸವಿಸ್ತರವಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಕಂಪ್ಲಿಯ ಜೆ.ಚಿನ್ಮಯ್ ತಂಡದಿಂದ ಸುಗಮ ಸಂಗೀತ ಗಾಯನ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತ ಪಿ.ಪ್ರಮೋದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಇನ್ನಿತರರು ಉಪಸ್ಥಿತರಿದ್ದರು.

# ಬೆಳೆ ವಿಮೆ ಯೋಜನೆ: ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ತೋಟಗಾರಿಕೆ ಇಲಾಖೆ ವತಿಯಿಂದ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಬೆಳೆ ವಿಮೆ ಯೋಜನೆ (ಕೆಆರ್‌ಎಸ್–ಪಿಎಂಎಫ್‌ಬಿವೈ) ಗೆ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅರ್ಹ ರೈತರು ತಮ್ಮ ಬೆಳೆಗಳ ವಿಮೆಗೆ ನೋಂದಾಯಿಸಿಕೊಳ್ಳಬಹುದು ಎಂದು ಜಿಪಂ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ತಿಳಿಸಿದ್ದಾರೆ.

ಪ್ರಕೃತಿ ವಿಕೋಪಗಳು, ಹವಾಮಾನ ವೈಪರೀತ್ಯಗಳಾದ ಅತಿವೃಷ್ಟಿ, ಅನಾವೃಷ್ಟಿ, ಬಿರುಗಾಳಿ, ಆಲಿಕಲ್ಲು ಮಳೆ, ಪ್ರವಾಹ ಮತ್ತು ಸಿಡಿಲಿನಿಂದ ಉಂಟಾಗುವ ಬೆಂಕಿ ಅವಘಡ ಇತ್ಯಾದಿ ಕಾರಣಗಳಿಂದ ಸಂಭವಿಸಬಹುದಾದ ಬೆಳೆಹಾನಿಯ ನಷ್ಟದ ಪರಿಹಾರವನ್ನು ಬೆಳೆ ವಿಮೆ ಘಟಕ (ಹಳ್ಳಿ, ಗ್ರಾಮಪಂಚಾಯಿತಿ, ಹೋಬಳಿ) ವಾರು ನಿರ್ಧರಿಸಿ ಬೆಳೆ ನಷ್ಟದ ಪರಿಹಾರ ನೀಡಲಾಗುವುದು.

ವಿಮಾ ಯೋಜನೆಯಡಿ ಒಳಪಡುವ ನೀರಾವರಿ ಬೆಳೆಗಳಾದ ಕೆಂಪು ಮೆಣಸಿನಕಾಯಿ ಮತ್ತು ಈರುಳ್ಳಿ ಬೆಳೆಗಳಾಗಿವೆ.

**ಕೆಂಪು ಮೆಣಸಿನಕಾಯಿ:**

ಬಳ್ಳಾರಿ, ಕಂಪ್ಲಿ, ಕುರುಗೋಡು, ಕೋಳೂರು, ಮೋಕಾ, ರೂಪನಗುಡಿ, ಸಿರುಗುಪ್ಪ, ಕರೂರು, ತೆಕ್ಕಲಕೋಟೆ, ಹಚ್ಚೋಳ್ಳಿ, ತೋರಣಗಲ್ಲು ವಿಮೆಗೆ ಒಳಪಡುವ ಪ್ರದೇಶಗಳಾಗಿದ್ದು, ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ ರೂ.1,07,500 ಹಾಗೂ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ರೂ.5,375 ಆಗಿರುತ್ತದೆ.

**ಈರುಳ್ಳಿ:**

ಸಂಡೂರು ತಾಲ್ಲೂಕಿನ ಚೋರನೂರು ಹಾಗೂ ತೋರಣಗಲ್ಲು ವಿಮೆಗೆ ಒಳಪಡುವ ಪ್ರದೇಶಗಳಾಗಿದ್ದು, ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ ರೂ.80,500 ಹಾಗೂ ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ರೂ.4,025 ಆಗಿರುತ್ತದೆ.

ರೈತರು ಅಗತ್ಯ ದಾಖಲೆಗಳೊಂದಿಗೆ ಎರಡು ಬೆಳೆಗಳ ವಿಮೆಗೆ ನೋಂದಾಯಿಸಿಕೊಳ್ಳಲು ಜುಲೈ 31 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಮತ್ತು ಕುರುಗೋಡು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08392–278177 ಹಾಗೂ ಮೊ.9480257282, ಸಂಡೂರು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08395–260389 ಹಾಗೂ ಮೊ.9740934208, ಕಂಪ್ಲಿ ಮತ್ತು ಸಿರುಗುಪ್ಪದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08396–222066 ಹಾಗೂ ಮೊ.9448910277 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರುಗುಪ್ಪ: ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿ 2025–26ನೇ ಸಾಲಿಗೆ ಪ್ರಧಾನಮಂತ್ರಿ ಆವಾಸ್ (ನಗರ) 2.0 ಯೋಜನೆಯಡಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.


ಈ ಯೋಜನೆಯಡಿ ನಿವೇಶನ ರಹಿತ ಮತ್ತು ವಸತಿ ರಹಿತರು ವಸತಿ ಸೌಲಭ್ಯಕ್ಕಾಗಿ ಆನ್‌ಲೈನ್ ವೆಬ್‌ಸೈಟ್ URL:https:// pmay-urban.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಸಲ್ಲಿಸಬಹುದು. ಜುಲೈ 15 ಅರ್ಜಿ ಸಲ್ಲಿಸಲು ಕೊನೆಯ ದಿನ.

ಅವಧಿ ಮೀರಿ ಬಂದತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಸಿರುಗುಪ್ಪ ನಗರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಸಿರುಗುಪ್ಪ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷ್ಣ ನದಿಯಿಂದ 70.000 ಸಾವಿರ ಕ್ಯುಸೆಕ್ ನೀರು ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ನಾರಾಯಣಪುರ: ಬಸವಸಾಗರ ಜಲಾಶಯದ 22 ಕ್ರಸ್ಟಗೇಟ್‌ಗಳನ್ನು ತೆರದು 59,180 ಕ್ಯೂಸೆಕ್ಸ್ ಹಾಗೂ 6,000 ಸಾವಿರ ಕ್ಯುಸೆಕ್ ನಷ್ಟು ನೀರನ್ನು ಎಂ.ಪಿ.ಸಿ.ಎಲ್ ನಿಂದ ಹರಿಬಿಡಲಾಗುತ್ತಿದೆ. ಶುಕ್ರುವಾರ ಆಲಮಟ್ಟಿ ಶಾಸ್ತ್ರೀ ಸಾಗರದಿಂದ 70.000 ಸಾವಿರ ಕ್ಯುಸೆಕ್ ಪ್ರಮಾಣದಷ್ಟು ನೀರಿನ ಒಳಹರಿವು ಬರಿತ್ತಿದ್ದು, ಜಲಾಶಯಕ್ಕೆ ಬರುವ ಒಳಹರಿವು ಗಮನಿಸಿ ಕೃಷ್ಣಾ ನದಿಗೆ ನೀರು ಹರಿಬಿಡಲಾಗುತ್ತಿದೆ.



ಕೃಷ್ಣಾ ಪ್ರದೇಶದಲ್ಲಿ ಜಲಾನಯನ ನಿರಂತರಮಳೆಯಾಗುತ್ತಿರುವದರಿಂದ ನಾರಾಯಣಪುರ ಜಲಾಶಯಕ್ಕೆ ಒಳಹರಿವು ಹೆಚ್ಚಾಗುತ್ತಿದೆ ಪ್ರತಿ ಉಭಯ ಗಂಟೆ ಗೊಮ್ಮೆ ಜಲಾಶಯಗಳ ಅಧಿಕಾರಿಗಳು ನದಿಗೆ ನೀರು ಹರಿಸುವ ಮಾಹಿತಿಯನ್ನು ವಿನಿಮಯ ಮಾಡಿಕೊಳ್ಳುತ್ತಾರೆ ಒಂದೊಮ್ಮೆ ಒಳಹರಿವು ಹೆಚ್ಚಾದರೆ ಹೊರ ಹರಿವು ಹೆಚ್ಚಿಸಲಾಗುತ್ತದೆ ಒಳಹರಿವು ತಗ್ಗಿದರೆ ಹೊರ ಹರಿವು ಕಡಿಮೆ ಆಗುತ್ತದೆ. ಹಿಗಾಗಿ ನದಿತೀರದ ಗ್ರಾಮಗಳ ಜನರು ಎಚ್ಚರದಿಂದ ಇರಬೇಕು ಎಂದು ಕೆಬಿಜೆಎನ್‌ಎಲ್ ಅಧಿಕಾರಿಗಳು ವಿಜಯ ಅರಳಿಯವರು ಮಾಹಿತಿ ನೀಡಿದ್ದಾರೆ. ಅಧಿಕಾರಿಗಳ ಮಾಹಿತಿಯಂತೆ ಗರಿಷ್ಠ 492.25 –ರ ಎತ್ತರದಲ್ಲಿ 33.313 ಟಿಎಂಸಿ ಅಡಿ ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಇಂದು 492.25 ಮೀಟರಗೆ ನೀರು ಬಂದು ತಲುಪಿದ್ದು, ಮಾಹಿತಿ 26,39 ಟಿಎಂಸಿ ಅಡಿಗಳಷ್ಟು ನೀರು ಸಂಗ್ರಹಗೊಂಡಿದೆ.

# ಕಂಪ್ಲಿ: ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಕಂಪ್ಲಿ ಪುರಸಭೆ ವ್ಯಾಪ್ತಿಯಲ್ಲಿ 2025–26ನೇ ಸಾಲಿಗೆ ಪ್ರಧಾನಮಂತ್ರಿ ಆವಾಸ್ (ನಗರ) 2.0 ಯೋಜನೆಯಡಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಒಂಟಿ ಮಹಿಳೆಯರು, ಅಂಗವಿಕಲರು, ಹಿರಿಯ ನಾಗರಿಕರು, ತೃತೀಯಲಿಂಗಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ವರ್ಗ, ಸ್ವಚ್ಚತಾ ಕಾರ್ಮಿಕರು, ಪಿಎಂ ಸ್ವಾನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪ್ಯಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು, ವಲಸೆ ಬಂದ ಕುಟುಂಬದವರು ಅರ್ಜಿ ಸಲ್ಲಿಸಬಹುದು.

ಆನ್‌ಲೈನ್ ವೆಬ್‌ಸೈಟ್ URL:https://pmay-urban.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಜುಲೈ 15 ರೊಳಗಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನ.

**:ಬೇಕಾದ ದಾಖಲೆ:**

ಆಧಾರ್ ಕಾರ್ಡ್ (ಮನೆಯ ಯಜಮಾನ/ನಿ ಹಾಗೂ ತಂದೆ/ ತಾಯಿಯ ಮತ್ತು ಪಡಿತರ ಚೀಟಿಯಲ್ಲಿರುವಂತೆ) ಮತ್ತು ಕುಟುಂಬ ಸದಸ್ಯರ ಆಧಾರ್ ಕಾರ್ಡ್ಗಳು. ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಭಂದಿಸಿದ ದಾಖಲೆಗಳು (ಹಕ್ಕು ಪತ್ರ, ಕ್ರಯ ಪತ, ದಾನ ಪತ್ರ, ಉಡುಗೋರೆ ಪತ್ರ, ಖಾತಾ ನಕಲು ಫಾರಂ–3).

ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ನಿಗದಿತ ನಮೂನೆ (ಂಟಿಟಿಜಥಣಡಿಜ–2ಂ/2ಃ/2ಅ) ಯಲ್ಲಿ "ಖಜಟಜಿ ಗಟಿಜಜಡಿಣಚಿಞಟಿರ" ಸಲ್ಲಿಸುವುದು. ಮೊಬೈಲ್ ಸಂಖ್ಯೆ, ಪ್ಯಾನ್ ಕಾರ್ಡ್ (ಲಭ್ಯವಿದ್ದಲ್ಲಿ ಮಾತ್ರ).

ಅವಧಿ ಮೀರಿ ಬಂದತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಂಪ್ಲಿ ಪುರಸಭೆ ಕಚೇರಿಯ ಶಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಮಲ್ಲಿಕಾರ್ಜುನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಂಗಾರು ಬೆಳೆ ಸಮೀಕ್ಷೆ: ಮೊಬೈಲ್ ಆಪ್ ಮೂಲಕ ಬೆಳೆಯ ವಿವರ ದಾಖಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.27–ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತರು ಬೆಳೆದ ಬೆಳೆಗಳ ಮಾಹಿತಿಯನ್ನು ಮೊಬೈಲ್ ಆಪ್ ಮೂಲಕ ಬೆಳೆ ಸಮೀಕ್ಷೆ ಮಾಹಿತಿ ನಮೂದಿಸಲು ಅವಕಾಶವಿದ್ದು, ರೈತರು ಮೊಬೈಲ್ ಆಪ್ ಮೂಲಕ ಬೆಳೆ ಸಮೀಕ್ಷೆಯಲ್ಲಿ ಬೆಳೆಯ ವಿವರ ದಾಖಲಿಸಿ, ಬೆಳೆಯ ನಿಖರ ಮಾಹಿತಿ ನಮೂದು ಮಾಡಬಹುದು ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ತಿಳಿಸಿದ್ದಾರೆ.

ರೈತರು ಬೆಳೆದ ಬೆಳೆಗಳ ಬಗ್ಗೆ ನಿಖರವಾಗಿ ಮಾಹಿತಿ ಪಡೆದುಕೊಳ್ಳಲು ಇ–ಆಡಳಿತ ವತಿಯಿಂದ ಅಭಿವೃದ್ಧಿಪಡಿಸಿರುವ ಮೊಬೈಲ್ ಆಪ್ ಮೂಲಕ ಬೆಳೆ ಸಮೀಕ್ಷೆ ನಡೆಸಲಾಗುತ್ತಿದೆ.

ಬೆಳೆ ಸಮೀಕ್ಷೆ ದತ್ತಾಂಶ ಮಾಹಿತಿಯನ್ನು ಬೆಳೆ ವಿಸ್ತರಣೆ ಎಣಿಕೆ ಕಾರ್ಯದಲ್ಲಿ, ಬೆಳೆ ಕಟಾವು ಪ್ರಯೋಗದಲ್ಲಿ, ಪ್ರಕೃತಿ ವಿಕೋಪ ಸಂದರ್ಭದಲ್ಲಿ, ಬೆಳೆಹಾನಿ ವರದಿ ಸಿದ್ಧಪಡಿಸಲು, ಬೆಳೆ ವಿಮಾ ಯೋಜನೆ, ಬೆಂಬಲಬೆಲೆ ಯೋಜನೆ, ಆರ್.ಟಿ.ಸಿ.ಯಲ್ಲಿ ಬೆಳೆ ವಿವರ ದಾಖಲಿಸಲು, ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಮಂಜೂರು ಮಾಡಲು ಬೆಳೆ ಸಮೀಕ್ಷೆ ಮಾಹಿತಿಯನ್ನು ಉಪಯೋಗಿಸಲಾಗುತ್ತದೆ.

**ಮೊಬೈಲ್ ಅಪ್ಲಿಕೇಷನ್ ಪಡೆಯಲು ಅನುಸರಿಸಬೇಕಾದ ಅಂಶ:**

ರೈತರು ತಮ್ಮ ಮೊಬೈಲ್‌ನಲ್ಲಿ ಗೂಗಲ್ ಪ್ಲೇ–ಸ್ಟೋರ್‌ನಿಂದ ಬೆಳೆ ಸಮೀಕ್ಷೆ ಹಿಂಗಾರು ಹಂಗಾಮಿನ "ಫಾರ್ಮರ್ ಆಫ್ ಕ್ರಾಪ್ ಸರ್ವೇ ಖಾರೀಫ್ 2025" (ಈಚಿಡಿಟಜಡಿ ಂಔಔ ಅಡಿಂಔ ಖಣಡಿತಜಥಿ ಋಚಿಡಿಜಿ 2025) ಆಪ್‌ನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು.

ಜಿಲ್ಲೆಯಲ್ಲಿ 357904 ಬೆಳೆ ತಾಕುಗಳಿದ್ದು, ಆ ತಾಕುಗಳಿಗೆ ರೈತರು ತಮ್ಮ ಬೆಳೆಗಳ ಮಾಹಿತಿಯನ್ನು ಸ್ವಯಂ ದಾಖಲಿಸಬೇಕು. ಮೊಬೈಲ್ ಆಪ್‌ನಲ್ಲಿ ಜಿಯೋ ರೆಫೆರೆನ್ಸ್ಡ್ ಅಂಡ್ ಡಿಜಿಟೈಜ್ಡ್ (ಉಜಠ ಖಜಜಿಜಡಿಜಟಿಛಿಜಜ ಚಿಟಿಜ ಆರುಣುದಜಜ) ಬೆಳೆ ಗ್ರಾಮ ನಕಾಶೆ ಅಳವಡಿಸಲಾಗಿರುವುದರಿಂದ ಆಯಾ ತಾಕಿನ ಗಡಿರೇಖೆಯೊಳಗೆ ಹೋಗಿ ಜಿಪಿಎಸ್ ನಿಖರತೆ ಪಡೆದು ಛಾಯಾಚಿತ್ರದೊಂದಿಗೆ ರೈತರು ಬೆಳೆಯ ವಿವರಗಳನ್ನು ಕಡ್ಡಾಯವಾಗಿ ದಾಖಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕೃಷಿ, ತೋಟಗಾರಿಕೆ, ಪಿ.ಆರ್ ಅಥವಾ ಕಂದಾಯ ಇಲಾಖೆಯ ಸಿಬ್ಬಂದಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾದಕ ವಸ್ತುಗಳಿಂದ ದೂರವಿರಿ–ಡಾ.ಅರುಣಕುಮಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.27–ಆರೋಗ್ಯಕರ ಸಮಾಜ ನಿರ್ಮಾಣವಾಗಬೇಕಾದರೆ ಯುವ ಸಮುದಾಯವು ಮಾದಕ ದ್ರವ್ಯವ್ಯಸನದಿಂದ ಮುಕ್ತರಾಗಬೇಕು ಅಂದಾಗ ಆರೋಗ್ಯಕರ ದೇಶವನ್ನು ಕಟ್ಟಲು ಸಾಧ್ಯವಾಗುತ್ತದೆ ಎಂದು ಪ್ರಾಚಾರ್ಯರ ಅರುಣಕುಮಾರ ಗಾಳಿ ಹೇಳಿದರು. ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಗುರುವಾರ ನಡೆದ ಅಂತರಾಷ್ಟ್ರೀಯ ಮಾದಕವಸ್ತು ಮುಕ್ತ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ಬೋಧನೆ ಮಾಡಿ ಅವರು ಮಾತನಾಡಿದರು. ಆರೋಗ್ಯಕ್ಕೆ ಮಾರಕವಾಗಿರುವಂತಹ ಗಾಂಜಾ, ಅಫೀಮ್ ದಂತಹ ಮಾದಕ ದ್ರವ್ಯಗಳಿಂದ ದೂರವಿರಬೇಕು, ತಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಮಾದಕ ದ್ರವ್ಯ ಸೇವಿಸದಂತೆ ಶ್ರಮ ವಹಿಸಬೇಕು. ಅಂ–ದಾಗ ಮಾದಕ ದ್ರವ್ಯ ವ್ಯಸನದ ಮುಕ್ತವಾದ ರಾಷ್ಟ್ರ ನಿರ್ಮಾಣ ಮಾಡಲು ಸಾಧ್ಯವಿದೆ. ಎಂದು ಹೇಳಿದರು. ಕಾರ್ಯಕ್ರಮದಲ್ಲಿ ನವನಗರ ಪೊಲೀಸ್ ಠಾಣೆಯ ಸಿಬ್ಬಂದಿಯವರು ಮತ್ತು ಕಾಲೇಜಿನ ಬೋಧಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ನಾಳೆ ನಿರಾಮಯ ಆಯುರ್ವೇದ ಆಸ್ಪತ್ರೆ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.27–ನೂತನ ನಿರಾಮಯ ಆಯುರ್ವೇದ ಆಸ್ಪತ್ರೆಯ ಉದ್ಘಾಟನಾ ಸಮಾರಂಭ ಜೂನ್ 29 ರವಿವಾರ ಬೆಳಿಗ್ಗೆ 10 ಗಂಟೆಗೆ (ನವನಗರದ ಸೆಕ್ಟರ್ ನಂ. 35, ಪೊಲೀಸ್ ಪ್ಯಾಲೇಸ್ ಹತ್ತಿರ)ನಡೆಯಲಿದೆ ಎಂದು ಆಸ್ಪತ್ರೆಯ ವೈದ್ಯ ಡಾ.ವೆಂಕಟೇಶ್ ಗೌಡರ ಹಾಗೂ ಡಾ.ಸುಪ್ರಿಯಾ ಗೌಡರ ಹೇಳಿದರು.

ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಆಸ್ಪತ್ರೆಯನ್ನು ಮಾಜಿ ಸಚಿವ ಬಿ.ರಾಮುಲು ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಶಾಸಕ ಎಚ್.ವಾಯ್ ಮೇಟಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯ ಹನಮಂತ ನಿರಾಣಿ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಮಾಜಿ ಶಾಸಕ ವೀರಣ್ಣ ಚರಂತಿಮಠ, ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ, ಮಾಜಿ ಶಾಸಕ ರಾಜಶೇಖರ ಶೀಲವಂತ, ಹೊಳಬಸು ಶೆಟ್ಟರ, ಜೆಡಿಎಸ್ ಜಿಲ್ಲಾಧ್ಯಕ್ಷ ಹನಮಂತ ಮಾವಿನಮರ, ಡಾ.ವಿಶ್ವನಾಥ ವಾಸೇದಾರ, ಡಾ.ಶಿವಕುಮಾರ ಗಂಗಲ್ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಕಳೆದ 8 ವರ್ಷಗಳಿಂದ ತಾವು ಗುಳೇದಗುಡ್ಡ ಪಟ್ಟಣದಲ್ಲಿ ಸೇವೆ ಸಲ್ಲಿಸುತ್ತಿದ್ದು, ಈಗ ಬಾಗಲಕೋಟೆಯಲ್ಲಿ ಆಸ್ಪತ್ರೆಯನ್ನು ಪ್ರಾರಂಭಿಸುತ್ತಿದ್ದೇವೆ ಎಂದು ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ವಿನೋದ ಗೌಡರ ಇದ್ದರು.

# ಬೆಂಗಳೂರಿನ ಅಭಿವೃದ್ಧಿ ಸರ್ಕಾರದ ಕರ್ತವ್ಯ ಮತ್ತು ಜವಾಬ್ದಾರಿ

ಬೆಂಗಳೂರನ್ನು ಇನ್ನಷ್ಟು ಅಭಿವೃದ್ಧಿ ಮಾಡುವುದು ನಮ್ಮ ಕರ್ತವ್ಯ ಮತ್ತು ಜವಾಬ್ದಾರಿ. ಅದನ್ನು ಮಾಡುವ ಪ್ರಾಮಾಣಿಕ ಪ್ರಯತ್ನವನ್ನು ನಮ್ಮ ಸರ್ಕಾರ ಮಾಡುತ್ತಿದೆ ಎಂದು ತಿಳಿಸಿದ ಅವರು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಎಂದು ಹೆಸರಿಟ್ಟಿದ್ದು ನಮ್ಮ ಸರ್ಕಾರ. ಸರ್ಕಾರದ ವತಿಯಿಂದ 33 ಜಯಂತಿಗಳನ್ನು ಆಚರಿಸಲಾಗುತ್ತಿದ್ದು, ಅದರಲ್ಲಿ ಅರ್ಧಕ್ಕಿಂತ ಹೆಚ್ಚು ಜಯಂತಿಗಳನ್ನು ನಮ್ಮ ಸರ್ಕಾರ ಜಾರಿಗೆ ತಂದಿರುವ ಬಗ್ಗೆ ಅಭಿಮಾನ, ಗೌರವವಿದೆ. ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ, ಕೃಷ್ಣ ಜಯಂತಿ, ಮಹಾವೀರ ಜಯಂತಿ, ವಾಮನ ಜಯಂತಿ ಸೇರಿದಂತೆ ಮುಖ್ಯವಾದ ಜಯಂತಿಗಳ ಆಚರಣೆಯನ್ನು ಜಾರಿಗೆ ತಂದಿದ್ದು ನಮ್ಮ ಸರ್ಕಾರ.

ಕೆಂಪೇಗೌಡರ ಆಡಳಿತ ಜನಪರವಾಗಿದ್ದು, ಅವರನ್ನು ನೆನೆದು ಸ್ಫೂರ್ತಿಯನ್ನು ಪಡೆದುಕೊಳ್ಳಬೇಕಾಗುತ್ತದೆ. ಕೆಂಪೇಗೌಡರ ಬಗ್ಗೆ ಅಗಾಧ ಗೌರವವನ್ನು ಇಟ್ಟುಕೊಂಡಿದ್ದು, ಅವರ ಆಡಳಿತದ ವೈಖರಿ ನಮ್ಮೆಲ್ಲರಿಗೂ ಸ್ಫೂರ್ತಿ. ಎಲಾ ಜಾತಿಗಳಿಗೂ ಸಾಮಾಜಿಕ ನ್ಯಾಯ ಒದಗಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಿದ್ದೇವೆ ಎಂದರು.

# ಪ್ರತಿ ವ್ಯಕ್ತಿಗೂ ಕಾನೂನಿನ ತಿಳುವಳಿಕೆ ಅಗತ್ಯ–ದಿಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.27–ಪ್ರತಿಯೊಬ್ಬ ವ್ಯಕ್ತಿಗೂ ಕಾನೂನಿನ ಅರಿವಿರಬೇಕು. ಆ ಜ್ಞಾನವಿದ್ದರೆ ವ್ಯಾಜ್ಯ, ಅನ್ಯಾಯಗಳ ಸಂಖ್ಯೆ ಕಡಿಮೆಯಾಗುತ್ತವೆ ಎಂದು ಜಿಲ್ಲಾ ಹಿರಿಯ ನ್ಯಾಯವಾದಿ ಚಂದ್ರಶೇಖರ ದಿಡ್ಡಿ ಹೇಳಿದರು.

ಜಿಲ್ಲೆಯ ಬೀಳಗಿ ತಾಲೂಕಿನ ಬಾಡಗಂಡಿ ಬಾಪೂಜಿ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಮಕ್ಕಳಿಗೆ ಕಾನೂನು ಅರಿವು–ನೆರವು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಬಾಲ್ಯ ವಿವಾಹ, ಬಾಲಕಾರ್ಮಿಕತೆ ತಡೆಯಬೇಕು. ಈ ಬಗ್ಗೆ ಯುವ ಸಮೂಹದಲ್ಲಿ ಜಾಗೃತಿ ಮೂಡಿಸಿ ಕಾನೂನಿನ ತಿಳುವಳಿಕೆ ನೀಡಬೇಕು ಎಂದರು. ಮನುಷ್ಯನಿಗೆ ಬದುಕಲು ಆಹಾರ, ಬಟ್ಟೆ ಎಷ್ಟು ಅವಶ್ಯವೋ ಕಾನೂನಿನ ಅರಿವು ಅಷ್ಟೇ ಅವಶ್ಯವಾಗಿದೆ ಎಂದು ಹೇಳಿದ ಅವರು, ಭಾರತದ ಸರ್ವೋಚ್ಚ ನ್ಯಾಯಾಲಯ ರೂಪಿಸಿದ ಸಾಥಿ, ಆಶು, ಜಾಗೃತಿ, ಸಂವಾದ, ಡಾನ್ ಈ ಯೋಜನೆಯ ಅಡಿಯಲ್ಲಿ ಬರುವ ಸೌಲಭ್ಯಗಳು ಮತ್ತು ಕಾನೂನಿನ ಮಾಹಿತಿಗಳ ಬಗ್ಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ದಿಡ್ಡಿ ಅವರನ್ನು ಎಸ್.ಆರ್.ಪಾಟೀಲ ಸಮೂಹ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಮಾಜಿ ಸಚಿವ ಎಸ್.ಆರ್.ಪಾಟೀಲ ಸನ್ಮಾನಿಸಿದರು, ಕಾರ್ಯದರ್ಶಿ ಎಮ್.ಎನ್.ಪಾಟೀಲ ಇದ್ದರು. ಸಲಹಾ ಮಾರ್ಗದರ್ಶಕ ಎಚ್.ಬಿ. ಧರ್ಮಣ್ಣವರ ಅಧ್ಯಕ್ಷತೆ ವಹಿಸಿದ್ದರು. ಬಾಡಗಂಡಿ ಬಾಪೂಜಿ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಶಿವಭೋದ ಶೆಟ್ಟಿ, ವೈದ್ಯಕೀಯ ಮಹಾವಿದ್ಯಾಲಯದ ಅಧೀಕ್ಷಕ ಧರ್ಮರಾಯ ಇಂಗಳೆ ಉಪಸ್ಥಿತರಿದ್ದರು.

## ರವಿವಾರ ನೂತನ ಪದಾಧಿಕಾರಿಗಳ ಪದಗ್ರಹಣ

# ಮಲ್ಲಿಕಾರ್ಜುನ ಹದ್ಲಿ ರೋಟರಿ ಕ್ಲಬ್ ನೂತನ ಅಧ್ಯಕ್ಷ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.27–ಬಾಗಲಕೋಟೆ ರೋಟರಿ ಕ್ಲಬ್‌ಗೆ 2025–26 ನೇ ಸಾಲಿಗೆ ನೂತನ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಹದ್ಲಿ, ಕಾರ್ಯದರ್ಶಿಯಾಗಿ ಸಂತೋಷ ಪಾಟೀಲ ಹಾಗೂ ಖಜಾಂಚಿಯಾಗಿ ಪ್ರಕಾಶ ಭೂತಲ್ ಆಯ್ಕೆಯಾಗಿದ್ದಾರೆ ಎಂದು ಹಾಲಿ ಅಧ್ಯಕ್ಷ ಸಂತೋಷ ನಾವಲಗಿ ಹೇಳಿದರು.

ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ಪ್ರಕಟಿಸಿದ ನಾವಲಗಿ, ನೂತನ ಅಧ್ಯಕ್ಷರು, ಪದಾಧಿಕಾರಿಗಳ ಪದಗ್ರಹಣ ಸಮಾರಂಭ ರವಿವಾರ ಜೂ.29 ರಂದು ವಿದ್ಯಾಗಿರಿಯ ಸಾಯಿ ಮಂದಿರದ ಅಡಿಟೋರಿಯಂ ಹಾಲನಲ್ಲಿ ಜರುಗಲಿದೆ ಎಂದು ತಿಳಿಸಿದರು. ರೋಟರಿ ಕ್ಲಬ್ ಡಿಜಿಎನ್ ಡಾ.ಲೆನ್ನಿ ಡಿಕೋಸ್ಟಾ ಪದಾಧಿಕಾರಿಗಳಿಗೆ ಪದಗ್ರಹಣ ನೀಡಲಿದ್ದು, ಸಹಾಯಕ ಗವರ್ನರ್ ನಾರಾಯಣ ಹೆರಕಲ್ ಅತಿಥಿಗಳಾಗಿ ಆಗಮಿಸುವರು. ಜಿಲ್ಲಾ ಹಿಂದಿನ ಗವರ್ನರ್ ಡಾ.ಜಿ.ಆರ್.ಮಾಸೂರಕರ ಉಪಸ್ಥಿತರಿರುವರು.

ಒಂದು ವರ್ಷದ ನನ್ನ ಅಧಿಕಾರ ಅವಧಿಯಲ್ಲಿ ಸಾಮಾಜಿಕ ಕಳಕಳಿಯುಳ್ಳ ಅನೇಕ ಕೆಲಸಗಳನ್ನು ಮಾಡಿದ್ದೇನೆ. ಪಲ್ಸ್ ಪೋಲಿಯೊ, ರೋಟರಿ ಗಾರ್ಡನ್, ವಿವಿಧ ಶಾಲೆಗಳಿಗೆ ಚೇರ್, ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂತೋಷ ನಾವಲಗಿ ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಶಿವಕುಮಾರ ನಂದಿಕೋಲಮಠ, ನಾರಾಯಣ ಹೆರಕಲ್, ಡಾ.ಜಿ.ಆರ್. ಮಾಸೂರಕರ, ಸಂತೋಷ ಪಾಟೀಲ, ಪ್ರಕಾಶ ಭೂತಲ್ ಇದ್ದರು.


## ಸಮಾಜಮುಖಿ ಕಾರ್ಯಕ್ಕೆ ಆದ್ಯತೆ–ಹದ್ಲಿ



ನಗರದ ರೋಟರಿ ಸಂಸ್ಥೆಯ 65 ನೇ ಅಧ್ಯಕ್ಷನಾಗಿ ನಾನು ಆಯ್ಕೆಯಾಗಿರುವುದು ಸಂತಸ ತಂದಿದೆ. ನನ್ನ ಸಾಮಾಜಿಕ ಸೇವೆಗೆ ಅಧ್ಯಕ್ಷ ಸ್ಥಾನ ಮತ್ತಷ್ಟು ಪ್ರೇರಣೆ ನೀಡಿದೆ. ಸಿಕ್ಕಿರುವ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಸಮಾಜಮುಖಿ ಕಾರ್ಯಗಳನ್ನು ಕೈಗೊಂಡು ಸಂಸ್ಥೆಯ ಗೌರವ ಹೆಚ್ಚಿಸುತ್ತೇನೆ ಎಂದು ನೂತನ ಅಧ್ಯಕ್ಷ ಮಲ್ಲಿಕಾರ್ಜುನ ಹದ್ಲಿ ಹೇಳಿದ್ದಾರೆ.

'ಮಲ್ಲಮ್ಮ ನುಡಿ'ಯೊಂದಿಗೆ ಮಾತನಾಡಿದ ಅವರು, ನನ್ನ ಅವಧಿಯಲ್ಲಿ ಸರಕಾರಿ ಶಾಲೆಗಳ ಮಕ್ಕಳಿಗೆ ನೋಟಬುಕ್ ವಿತರಣೆ, ಜಿಲ್ಲೆಯಲ್ಲಿ ಸ್ವಯಂ ಉದ್ಯೋಗ ತರಬೇತಿ ನೀಡುವುದು, ಶಾಲೆಗಳಿಗೆ 150 ಡೆಸ್ಕ್ ನೀಡುವುದು. ನಗರದ ರೋಟರಿ ಸರ್ಕಲ್ ಬಳಿಯ ಉದ್ಯಾನವನದಲ್ಲಿ ಸಾರ್ವಜನಿಕರ ವಿಶ್ರಾಂತಿಗೆ ಗೋಪುರ ಮಾದರಿ ಕುಟಿರ ನಿರ್ಮಿಸುವುದು, 10 ಸರಕಾರಿ ಶಾಲೆಗಳಿಗೆ ಇ–ಲರ್ನಿಂಗ್ ಕಿಟ್ ವಿತರಿಸುವುದು, ರೋಟರಿ ಉದ್ಯಾನವನ ಬಳಿಯ ಬಸ್ ತಂಗುದಾನ ದುರಸ್ಥಿಗೊಳಿಸುವುದು ಸೇರಿ ವಿವಿಧ ಸಮಾಜ ಉಪಯೋಗಿ ಕಾರ್ಯಗಳನ್ನು ಮಾಡುತ್ತೇನೆ ಎಂದು ಹೇಳಿದರು.

# ಆರೋಗ್ಯ ಇಲಾಖೆ ಕ್ರಿಕೆಟ್ ಪಂದ್ಯಾವಳಿಗೆ ಡಿಸಿ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.27–ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಮೂರು ದಿನಗಳ ಕಾಲ ನಡೆಯಲಿರುವ ಜಿಲ್ಲಾ ಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಜಿಲ್ಲಾಧಿಕಾರಿ ಸಂಗಪ್ಪ ಎಂ, ಹಾಗೂ ಜಿ.ಪಂ ಸಿಇಓ ಶಶಿಧರ ಕುರೇರ ಜಂಟಿಯಾಗಿ ಶುಕ್ರವಾರ ಚಾಲನೆ ನೀಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳ ಕಾರ್ಯಾಲಯದ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿರುವ ಕ್ರಿಕೆಟ್ ಪಂದ್ಯಾವಳಿ ಸಮಾರಂಭದಲ್ಲಿ ಮಾತನಾಡಿದ ಡಿಸಿ ಸಂಗಪ್ಪ, ಒತ್ತಡದ ಬದುಕಿನಿಂದ ಹೊರಬರಲು ಕ್ರೀಡಾ ಚಟುವಟಿಕೆಗಳು ಅವಶ್ಯವಾಗಿವೆ. ಇಂತಹ ಚಟುವಟಿಕೆಗಳಲ್ಲಿ ಎಲ್ಲರೂ ಭಾಗವಹಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲೆಯಾದ್ಯಂತ ಕ್ಷಯ ರೋಗಿಗಳಿಗೆ ಸಾಂಕೇತಿಕವಾಗಿ 10 ಜನರಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯ–ರೋಗ ನಿರ್ಮೂಲನಾಧಿಕಾರಿ ಡಾ.ಸುವರ್ಣ ಕುಲಕರ್ಣಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಆರೋಗ್ಯ ಇಲಾಖೆಯ ಜಗನ್ನಾಥ ದೇಶಪಾಂಡೆ, ರಾಘು ಕುಲಕರ್ಣಿ, ರಾಜಶೇಖರ ಅಂಬಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೆಂಪೇಗೌಡ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.27–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಅಂಗವಾಗಿ ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಶುಕ್ರವಾರ ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಿಸಲಾಯಿತು.

ಜಿಲ್ಲಾಧಿಕಾರಿ ಸಂಗಪ್ಪ ಎಂ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪ ಅರ್ಪಿಸಿದರು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ, ಜಿ.ಪಂ ಸಹಾಯಕ ನಿರ್ದೇಶಕ ಕಾಂಬಳೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಜಿ.ಪಂ. ಕಚೇರಿಯಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27–ನಾಡಪ್ರಭು ಕೆಂಪೇಗೌಡ ಜಯಂತಿ ಅಂಗವಾಗಿ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಶುಕ್ರವಾರ ಜಿಲ್ಲಾ ಪಂಚಾಯತ ಕಚೇರಿಯಲ್ಲಿ ನಾಡಪ್ರಭು ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪೂಜೆ ಮಾಡುವ ಮೂಲಕ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಡಿಎಸ್‌ರಾದ ಲಕ್ಷ್ಮಣ ಶೃಂಗೇರಿ, ಪಿಡಿ ಡಿಆರ್‌ಡಿಎ.ರಾದ ಜಗದೇವಪ್ಪ ಬಿ, ಸಿಎಓ ರಾದ ವಿಕಾಸ ಸಜ್ಜನ, ಪಿ.ಆರ್.ಇ.ಡಿ. ಇ.ಇ.ರಾದ ಮಲ್ಲಿಕಾರ್ಜುನ ಅಲ್ಲಿಪುರ, ಆರ್.ಡಬ್ಲ್ಯೂ.ಎಸ್. ಇ.ಇ.ರಾದ ಧನರಾಜ ಲಡ್ಡೆ , ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಸಾದಿಕ್ ಹುಸೇನ, ಉಪ ನಿರ್ದೇಶಕ (ಯೋಜನೆ) ಮಧುಮತಿ, ಸಹಾಯಕ ಕಾರ್ಯದರ್ಶಿ ವೀರೇಂದ್ರ, ಜೇವರ್ಗಿ ಆರ್.ಡಬ್ಲ್ಯೂ.ಎಸ್. ಇಇ. ರಾದ ಗುರು ಗದ್ದಗಿಮಠ ಸೇರಿದಂತೆ ಜಿಲ್ಲಾ ಪಂಚಾಯತ್ ಅಧಿಕಾರಿ ಉಪಸ್ಥಿತರಿದ್ದರು.

## ಸಾರ್ವಜನಿಕ ಆಸ್ಪತ್ರೆಯನ್ನು ಜಿಲ್ಲಾ ಮಟ್ಟದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವಂತೆ ಮುಖ್ಯಮಂತ್ರಿಗಳಿಗೆ ಎಂ ಎಲ್ ಸಿ ಶರಣುಗೌಡ ಬಯ್ಯಪುರ್ ಮನವಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು : ರಾಯಚೂರು ಜಿಲ್ಲೆ ಲಿಂಗಸಗೂರ ವಿಧಾನಸಭಾ ಕ್ಷೇತ್ರವು ಪರಿಶಿಷ್ಟಜಾತಿ ವಿಧಾನಸಭಾ ಕ್ಷೇತ್ರವಾಗಿದ್ದು, ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಹಿಂದುಳಿದಿದ್ದು, ಅಭಿವೃದ್ಧಿಯಿಂದ ಕುಂಠಿತಗೊಂಡಿದೆ. ತಾಲೂಕಿನಲ್ಲಿ ಪರಿಶಿಷ್ಟ ಜಾತಿ ಸಮೂದಾಯದವರೆ ಅಧಿಕ ಸಂಖ್ಯೆಯಲ್ಲಿ ವಾಸಮಾಡುತ್ತಿದ್ದು, ಲಿಂಗಸಗೂರು ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರತಿ ನಿತ್ಯ 400 ರಿಂದ 500 ಜನ ಹೊರರೋಗಿಗಳಾಗಿ ಚಿಕಿತ್ಸೆ ಪಡೆಯುತ್ತಿದ್ದು, ಲಿಂಗಸಗೂರು ತಾಲೂಕಿನ ಸಾರ್ವಜನಿಕ ಆಸ್ಪತ್ರೆಯನ್ನು ಜಿಲ್ಲಾ ಮಟ್ಟದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವಂತೆ ಮುಖ್ಯಮಂತ್ರಿಗಳಿಗೆ ಎಂ ಎಲ್ ಸಿ ಶರಣುಗೌಡ ಬಯ್ಯಪುರ್ ಮನವಿಯನ್ನು ಸಲ್ಲಿಸಿದರು .

ತಾಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಒಳರೋಗಿಗಳ ನೋಂದಣಿಯಲ್ಲಿ ಪ್ರತಿ ದಿನ ಗಣನೀಯ ಪ್ರಮಾಣದಲ್ಲಿ ಏರಿ–ಕೆಯಾಗುತ್ತಿದೆ. ಇದು ಮೂರು ಜಿಲ್ಲೆಗಳಿಗೆ ಕೇಂದ್ರಬಿಂದುವಾಗಿದ್ದು, ಯಾದಗಿರಿ, ಸುರಪುರ, ಹುಣಸಗಿ, ಮುದ್ದೇಬಿಹಾಳ, ನಾಲತವಾಡ, ಹುನಗುಂದ, ತಾಲೂಕುಗಳ ರೋಗಿಗಳು ಲಿಂಗಸಗೂರು ಆಸ್ಪತ್ರೆಗೆ ಬಂದು ಚಿಕಿತ್ಸೆಯನ್ನು ಪಡೆಯುತ್ತಾರೆ. ಈ ಹಿಂದೆ ಕಳೆದ ಬಜೆಟ್‌ನಲ್ಲಿ ಲಿಂಗಸಗೂರು ಪಟ್ಟಣದಲ್ಲಿನ ಸಾರ್ವಜನಿಕ ಆಸ್ಪತ್ರೆಯನ್ನು 100 ಬೆಡ್ ಇದ್ದುದನ್ನು 200 ಬೆಡ್ ಗಳನ್ನಾಗಿ ಜಿಲ್ಲಾ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಕಲಬುರಗಿ ಕ್ಯಾಬಿನೆಟ್ ನಲ್ಲಿ ಘೋಷಣೆ ಮಾಡಿದ್ದೀರಿ. ಅದಕ್ಕಾಗಿ 6–00 ಎಕರೆ ಸರಕಾರಿ ಜಾಗೆಯು ಕೂಡ ಮಂಜೂರಾಗಿರುತ್ತದೆ. ಆದರೆ ಈಗ ಏಕಾಏಕೀ ಸಿಂಧನೂರ ಪಟ್ಟಣಕ್ಕೆ ಸ್ಥಳಾಂತರಗೊಂಡಿದೆ. ಸದರಿ ಸರಕಾರಿ ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಸಂಘ ಸಂಸ್ಥೆಗಳು, ಸಂಘಟನೆಗಳು, ಸಾರ್ವಜನಿಕರು, ಬುದ್ದಿಜೀವಿಗಳಿಂದ ನನಗೆ ಮನವಿಯನ್ನು ಸಲ್ಲಿಸಿದ್ದು, ಪುನಃ ಕಲ್ಯಾಣ ಕರ್ನಾಟಕ ಭಾಗದಲ್ಲಿ ಲಿಂಗಸಗೂರು ಸಾರ್ವಜನಿಕ ಆಸ್ಪತೆಯನ್ನು ಜಿಲ್ಲಾ ಮಟ್ಟದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವಂತೆ ಹೇಳಿದರು . ಈ ಸಂದರ್ಭದಲ್ಲಿ

ಅಮರೇಗೌಡ ಬಯ್ಯಾಪುರ, ಬಸವರಾಜ ಗೌಡ ಗಣೇಕಲ್, ಭೂಪನಗೌಡ ಕಡಕಲ್, ಶಶಿಧರ ಗೌಡ, ಗುಂಡಪ್ಪನಾಯಕ ಸರ್ಜಾಪುರ, ಚನ್ನಾರೆಡ್ಡಿ ಬಿರಾದಾರ್ ಸೇರಿದಂತೆ ಇನ್ನು ಅನೇಕ ಮುಖಂಡರು ಇದ್ದರು .

# ಅಂತರ್ ರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನದ ಅಂಗವಾಗಿ ಪಟ್ಟಣದ ಸಾರ್ವಜನಿಕರಲ್ಲಿ ಜಾಗೃತಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ/ಗುರುಮಠಕಲ್: ಪಟ್ಟಣದ ಅಂಬಿಗರ ಚೌದಯ್ಯ ವೃತ್ತದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಗಿರಿ ನಗರ ಸಾಂಸ್ಕೃತಿಕ ಕಲಾವಿದರ ಬಳಗದ ಸಂಯುಕ್ತ ಆಶ್ರಯದಲ್ಲಿ ಬಯಲು ನಾಟಕ ಪ್ರದರ್ಶನ ಮೂಲಕ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಉಪಯೋಗ ನಿಷೇಧಿಸುವಂತೆ ಜಾಗೃತಿ.

ಗುರುಮಠಕಲ್ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರಾದ ವೀರಣ್ಣ ದೊಡಮನಿಯವರ ನೇತೃತ್ವದಲ್ಲಿ ನಾಟಕ ಪ್ರದರ್ಶನವಾಯಿತು,

ಈ ಕುರಿತು ಮಾತನಾಡಿದ ಪಿ.ಐ ವೀರಣ್ಣ ದೊಡಮನಿಯವರು ಮಾದಕ ವಸ್ತುಗಳ ಪಿಡುಗನ್ನು ನಿರ್ಮೂಲನೆ ಮಾಡಲು ಕಠಿಣ ಕ್ರಮ ಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕರು ಸಹ ಒಟ್ಟಾಗಿ ಸೇರಿ ಈ ಪಿಡುಗಿನ ವಿರುದ್ಧ ಕೈ ಜೋಡಿಸಬೇಕೆಂದು ಹೇಳಿದರು.

# ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗರಾಗಿ, ಬದುಕು ನಡೆಸಿದ್ದು ವಿಶ್ವಮಾನವರಾಗಿ: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಹುಟ್ಟಿದಾಗ ಭೂಮಿ ಮೇಲಿರುತ್ತೇವೆ. ಸತ್ತಾಗ ಭೂಮಿ ಕೆಳಗಿರುತ್ತೇವೆ. ಆದರೆ ನಮ್ಮ ಸಾಧನೆಗಳು ಮೇಲಿರುತ್ತವೆ. ಅದೇ ರೀತಿ ಕೆಂಪೇಗೌಡರ ಸಾಧನೆಗಳು ಶಾಶ್ವತ. ಕೆಂಪೇಗೌಡರು ಹುಟ್ಟಿದ್ದು ಒಕ್ಕಲಿಗರಾಗಿ ಆದರೆ ಬದುಕು ನಡೆಸಿದ್ದು, ಸಮಾಜಕ್ಕೆ ಸಂದೇಶ ನೀಡಿದ್ದು ವಿಶ್ವಮಾನವರಾಗಿ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ವಿಶ್ವದೆಲ್ಲೆಡೆ ಬೆಂಗಳೂರಿನ ಕೀರ್ತಿ ಹರಡಿದೆ. ಈ ನಗರದ ಅಭಿವೃದ್ಧಿಗೆ ಕೆಂಪೇಗೌಡರೇ ಸ್ಫೂರ್ತಿ ಎಂಬುದನ್ನು ನಾವು ಮರೆಯಬಾರದು. 500 ವರ್ಷಗಳ ಹಿಂದೆಯೇ ಮಾದರಿ ಆಡಳಿತಕ್ಕೆ ಅಡಿಪಾಯ ಹಾಕಿದವರು. ಎಲ್ಲಾ ಜಾತಿ, ಧರ್ಮಗಳಿಗೆ ಅವಕಾಶ ನೀಡಿ ಸಮಾಜಕ್ಕೆ ಸಂದೇಶ ನೀಡಿದವರು ಎಂದು ತಿಳಿಸಿದರು.

ನಮ್ಮ ಸಮುದಾಯದವರಿಗೆ ಒಂದು ಸಂದೇಶ ನೀಡಲು ಬಯಸುತ್ತೇನೆ. ನಾವುಗಳು ಯಾರೂ ಸಹ ಇಂತಹದ್ದೇ ಜಾತಿಯಲ್ಲಿ ಹುಟ್ಟಬೇಕು ಎಂದು ಅರ್ಜಿ ಹಾಕಿಕೊಂಡು ಹುಟ್ಟುವುದಿಲ್ಲ. ರಾಜಕೀಯದಲ್ಲಿ ಧರ್ಮ ಇರಬೇಕೆ ಹೊರತು, ಧರ್ಮದಲ್ಲಿ ರಾಜಕೀಯ ಇರಬಾರದು ಎನ್ನುವ ಮಾತನ್ನು ಮರೆಯಬಾರದು. ಕೆಂಪೇಗೌಡರು ಎಲ್ಲಾ ಸಮುದಾಯಕ್ಕೆ ಸೇರಿದವರು. ಇವರು ನಾಡಿನ ಆಸ್ತಿ, ಎಲ್ಲಾ ಸಮಾಜದ ಆಸ್ತಿ ಎಂದು ಹೇಳಿದರು.

ಬೆಂಗಳೂರು ನಗರದ ಅಭಿವೃದ್ಧಿ ತುಂಬಾ ಸರಳವಾದ ಕೆಲಸವಲ್ಲ. ಇಲ್ಲಿನ ಜನಸಂಖ್ಯೆ, ವಾಹನಗಳ ಸಂಖ್ಯೆ ಎಲ್ಲವನ್ನು ಗಮನದಲ್ಲಿಟ್ಟುಕೊಂಡು ಹೊಸ ರೂಪ ನೀಡಬೇಕು ಎಂದು ನಾನು ಸಚಿವನಾದ ದಿನದಿಂದ ಪ್ರಯತ್ನ ಮಾಡುತ್ತಿದ್ದೇನೆ. ಸುಮಾರು 40 ಕಿಲೋ ಮೀಟರ್ ನಷ್ಟು ಟನಲ್ ರಸ್ತೆ ನಿರ್ಮಾಣಕ್ಕೆ ಮುಂದಾಗಿದ್ದು, ರೂ. 17 ಸಾವಿರ ಕೋಟಿ ವೆಚ್ಚದಲ್ಲಿ ಟೆಂಡರ್‌ಗೆ ಸಿದ್ಧತೆ ಮಾಡುತ್ತಿದ್ದೇವೆ. 118 ಕಿ.ಮೀ. ಮೇಲ್ಸೇತುವೆ ನಿರ್ಮಾಣಕ್ಕೆ ತೀರ್ಮಾನ ಮಾಡಿದ್ದೇವೆ. ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ಸುಮಾರು 1 ಲಕ್ಷ ಕೋಟಿ ಮೊತ್ತದ ಯೋಜನೆಗಳಿಗೆ ನಾವು ಸಿದ್ಧತೆ ಮಾಡಿಕೊಂಡಿದ್ದೇವೆ. ಮನೆಬಾಗಿಲಿಗೆ 'ನಂಬಿಕೆ ನಕ್ಷೆ ಎನ್ನುವ ಯೋಜನೆ ತಲುಪಿಸುತ್ತಿದ್ದೇವೆ. ಸುಮಾರು 25 ಲಕ್ಷ ಆಸ್ತಿ ದಾಖಲೆಗಳನ್ನು ಡಿಜೀಟಲೀಕರಣ ಮಾಡಿ ಮನೆ ಬಾಗಿಲಿಗೆ ಉಚಿತವಾಗಿ ತಲುಪಿಸಲಾಗುತ್ತಿದೆ. ಕೃಷ್ಣ ಭೈರೇಗೌಡರ ಕ್ಷೇತ್ರದಲ್ಲಿ ಪ್ರಾಯೋಗಿಕ ಕೆಲಸ ನಡೆ–ಯುತ್ತಿದೆ ಎಂದರು.

## ಅಪರ ಜಿಲ್ಲಾಧಿಕಾರಿಯಾಗಿ ಡಾ.ಈಶ್ವರ ಉಳ್ಳಾಗಡ್ಡಿ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.27:ಬೀದರ ಜಿಲ್ಲೆಯ ಅಪರ ಜಿಲ್ಲಾಧಿಕಾರಿಯಾಗಿ ಹಾಗೂ ಅಪರ ಜಿಲ್ಲಾದಂಡಾಧಿಕಾರಿಯಾಗಿ ಡಾ.ಈಶ್ವರ ಉಳ್ಳಾಗಡ್ಡಿ ಅವರಿಂದು ಅಧಿಕಾರ ಸ್ವೀಕಾರ ಮಾಡಿದರು. ಇತ್ತೀಚೆಗೆ ದಾವಣಗೆರೆ ಅಪರ ಜಿಲ್ಲಾಧಿಕಾರಿಯಾಗಿ ವರ್ಗಾವಣೆಯಾಗಿರುವ ಹಿಂದಿನ ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರ ಜಾಗದಲ್ಲಿ ಡಾ.ಈಶ್ವರ ಉಳ್ಳಾಗಡ್ಡಿ ಅವರು ಅಧಿಕಾರ ವಹಿಸಿಕೊಂಡಿದ್ದಾರೆ.

## ಪಿಡಿಓಗಳ ವರ್ಗಾವಣೆ ಕುರಿತ ಹಳೆಯ ನಿಯಮ ಮುಂದುವರೆಸಲು ಕಳಸ್ಕರ್ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27:ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್ ಇಲಾಖೆಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವರ್ಗಾವಣೆ ನಿಯಮ ಬದಲಾವಣೆ ಮಾಡದೇ ಹಳೆಯ ನಿಯಮದಂತೆ ಜಾರಿ ಮಾಡಬೇಕು ಎಂದು ಡಾ. ಬಿ.ಆರ್. ಅಂಬೇಡ್ಕರ್ ಸೇವಾ ಸಂಘ ಸುಲೇಪೇಟ್ ಘಟಕದ ಅಧ್ಯಕ್ಷ ಸಂಜುಕುಮಾರ್ ಕಳಸ್ಕರ್ ಅವರು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಪ್ರಿಯಾಂಕ್ ಖರ್ಗೆಯವರು ಕೈಗೊಂಡ ನಿರ್ಣಯದಂತೆ ಒಂದೇ ತಾಲ್ಲೂಕಿನಲ್ಲಿ ನಿರಂತರವಾಗಿ ಏಳು ವರ್ಷ ಸೇವೆ ಸಲ್ಲಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಬೇರೆ ತಾಲ್ಲೂಕಿಗೆ ಇಲ್ಲವೇ ಜಿಲ್ಲೆಗೆ ವರ್ಗಾವಣೆಯಾಗಿರುವ ನಿಯಮ ಜಾರಿಗೆ ತಂದಿದ್ದರು. ಪಿಡಿಓ ಹುದ್ದೆ ಸೃಷ್ಟಿಯಾದಾಗಿನಿಂದಲೂ 2010-2011ನೇ ಸಾಲಿನಿಂದಲೂ ಕೆಲವು ಪ್ರಭಾವಿ ಪಿಡಿಓಗಳು ಒಂದೇ ಜಿಲ್ಲಾ ಇಲ್ಲವೇ ತಾಲ್ಲೂಕು ಕೇಂದ್ರಸ್ಥಾನಗಳಲ್ಲಿಯೇ ಆಯ್ಕೆ ಮಾಡಿಕೊಂಡು ನಿರ್ದಿಷ್ಟ ಪಂಚಾಯಿತಿಗಳಲ್ಲಿಯೇ ತಮ್ಮನ್ನು ವರ್ಗಾವಣೆಗೊಳಿಸಿಕೊಳ್ಳುತ್ತಿದ್ದರು. ಹೀಗಾಗಿ ನಿಯಮ ಜಾರಿಗೆ ತರುವ ಮೂಲಕ ಅದನ್ನು ತಡೆಯಲು ಕ್ರಮ ಕೈಗೊಂಡಿದ್ದು ಸ್ವಾಗತಾರ್ಹವಾಗಿತ್ತು ಎಂದರು.



ಆದಾಗ್ಯೂ, ಕೆಲವು ಪಟ್ಟಭದ್ರ ಹಿತಾಸಕ್ತಿ ಪಿಡಿಓಗಳ ಒತ್ತಡಕ್ಕೆ ಮಣಿದು ಸದರಿ ನಿಯಮಗಳ ಬದಲಾಗಿ ಒಂದೇ ಗ್ರಾಮ ಪಂಚಾಯಿತಿಯಲ್ಲಿ ಐದು ವರ್ಷ ಸೇವೆ ಸಲ್ಲಿಸಿರುವ ಪಿಡಿಓಗಳನ್ನು ಅದೇ ತಾಲ್ಲೂಕಿನಲ್ಲಿ ಸ್ಥಳ ನಿಯುಕ್ತಿಗೊಳಿಸಲು ತಂದಂತಹ ತಿದ್ದುಪಡಿ ಆದೇಶ ಸರಿಯಲ್ಲ ಎಂದು ಅವರು ವಿರೋಧ ವ್ಯಕ್ತಪಡಿಸಿದರು.

ಸಚಿವರು ಯಾರ ಒತ್ತಡ-ಕ್ಕೆ ಮಣಿಯದೇ ಈ ಮೊದಲು ಕೈಗೊಂಡಂತಹ ನಿಯಮದಂತೆ ಏಳು ವರ್ಷ ಒಂದೇ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಪಿಡಿಓಗಳನ್ನು ಬೇರೆ ತಾಲ್ಲೂಕಿಗೆ ವರ್ಗಾವಣೆ ಮಾಡುವಂತಹ ನಿಯಮವನ್ನು ಮರು ಜಾರಿಗೆ ತರಬೇಕು. ಇಲ್ಲದೇ ಹೋದಲ್ಲಿ ರಾಜ್ಯಾದ್ಯಂತ, ಜಿಲ್ಲೆಯಾದ್ಯಂತ ಉಗ್ರ ಹೋರಾಟ ರೂಪಿಸಲಾಗುವುದು ಎಂದು ಅವರು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ರವಿ ಆರ್. ಕೋರಿ ಅವರು ಉಪಸ್ಥಿತರಿದ್ದರು.

## ಗೋಪಿಚಂದ್ ತಾಂದಳೆಗೆ ಕರ್ನಾಟಕ ಛಾಯಾರತ್ನ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 27 : ಜಿಲ್ಲೆಯ ಪತ್ರಿಕಾ ಛಾಯಾಗ್ರಾಹಕ ಗೋಪಿಚಂದ್ ತಾಂದಳೆ ಅವರಿಗೆ ಬೆಂಗಳೂರಿನಲ್ಲಿ ಶುಕ್ರವಾರ ಕರ್ನಾಟಕ ಛಾಯಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕರ್ನಾಟಕ ವಿಡಿಯೋ ಮತ್ತು ಫೋಟೋ ಅಸೋಸಿಯೇಷನ್ ಹಾಗೂ ಕರ್ನಾಟಕ ರಾಜ್ಯ ಪತ್ರಿಕಾ ಛಾಯಾಚಿತ್ರಕಾರರ ಸಂಘದ ವತಿಯಿಂದ ಅರಮನೆ ಮೈದಾನದಲ್ಲಿ ನಡೆದ 'ಫೋಟೋ ಟುಡೆ' ವಸ್ತುಪ್ರದರ್ಶನದ ಉದ್ಘಾಟನಾ ಸಮಾರಂಭದಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಪ್ರಶಸ್ತಿ ನೀಡಿ ಗೌರವಿಸಿದರು. ಬಿ.ಇ. ಮೆಕ್ಯಾನಿಕಲ್ ಪದವೀಧರರಾದ ಗೋಪಿಚಂದ್ ತಾಂದಳೆ 25 ವರ್ಷಗಳಿಂದ ಪತ್ರಿಕಾ ಛಾಯಾಗ್ರಾಹಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಸರಳತೆ, ಸೌಜನ್ಯಕ್ಕೆ ಹೆಸರಾಗಿದ್ದಾರೆ.

ಪತ್ರಿಕಾ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ಕರ್ನಾಟಕ ಛಾಯಾರತ್ನ ಪ್ರಶಸ್ತಿ ಲಭಿಸಿದೆ. ತಾಂದಳೆ ಅವರಿಗೆ ಬೀದರ್ ಜಿಲ್ಲಾಡಳಿತದ ರಾಜ್ಯೋತ್ಸವ ಪ್ರಶಸ್ತಿ, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಉತ್ತಮ ಛಾಯಾಗ್ರಾಹಕ ಪ್ರಶಸ್ತಿ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಅನೇಕ ಪ್ರಶಸ್ತಿ, ಸಮ್ಮಾನಗಳು ಸಂದಿವೆ.

ಪ್ರಶಸ್ತಿ ದೊರೆತಿದ್ದರಿಂದ ಸಂತಸವಾಗಿದೆ. ಪತ್ರಿಕಾ ರಂಗದಲ್ಲಿ ಇನ್ನಷ್ಟು ಉತ್ಸಾಹದಿಂದ ಸೇವೆ ಸಲ್ಲಿಸಲು ಪ್ರೇರಣೆ ದೊರೆತಿದೆ ಎಂದು ತಾಂದಳೆ ಪ್ರತಿಕ್ರಿಯಿಸಿದರು.

## ನಾಡಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರು ವಿಶ್ವಕ್ಕೆ ಪ್ರಸಿದ್ಧಿ: ಮಹಾಪೌರ ಯಲ್ಲಪ್ಪ ನಾಯ್ಕೋಡಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜೂ. 27: ನಾಡಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರು ಇಂದು ವಿಶ್ವಪ್ರಸಿದ್ಧಿಯಾಗಿದೆ. ಅವರ ದೂರದೃಷ್ಟಿಯಿಂದ ಬೆಂಗಳೂರು ಬೆಳೆದಿದೆ ಎಂದು ಮಹಾನಗರ ಪಾಲಿಕೆ ಪೂಜ್ಯ ಮಹಾಪೌರರಾದ ಯಲಪ್ಪ ನಾಯ್ಕೋಡಿ ಅವರು ಹೇಳಿದರು.

ಶುಕ್ರವಾರದಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸುವರ್ಣ ಸಭಾಭವನದಲ್ಲಿ ಜಿಲ್ಲಾಡಳಿತ, ಕನ್ನಡ ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ನಾಡಪ್ರಭು ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆಯನ್ನು ಮಾಡಿ ಮಾತನಾಡಿದರು.

ಅವರ ಆಡಳಿತದ ಅವಧಿಯಲ್ಲಿ ಜನಪರ ಹಿತವನ್ನು ಅರಿತು-ಕೊಂಡು ಸಾಮಾಜಿಕವಾಗಿ ಶ್ರೇಷ್ಠ ಕಾರ್ಯಗಳನ್ನು ಮಾಡಿದ್ದಾರೆ.. ಅವರ ಅಭಿವೃದ್ಧಿಯ ಕಾರ್ಯಗಳು ಇಂದಿಗೂ ಅಜರಾಮರವಾಗಿವೆ ಎಂದು ಹೇಳಿದರು. ದಕ್ಷಿಣ ಮತ ಕ್ಷೇತ್ರದ ಶಾಸಕರಾದ ಅಲ್ಲಮಪ್ರಭು ಪಾಟೀಲ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಜಯನಗರ ಸಾಮ್ರಾಜ್ಯದ ಕಾಲದಲ್ಲಿ ಆಳ್ವಿಕೆ ನಡೆಸಿದ್ದು, ತಮ್ಮ ಪ್ರತಿಭೆ ಮತ್ತು ಜಾಣ್ಮೆಯಿಂದ ಇತಿಹಾಸದಲ್ಲಿ ಅಮರರಾಗಿದ್ದಾರೆ. ಬೆಂಗಳೂರು ನಗರವನ್ನು ಅವರು ಯೋಜಿತವಾಗಿ ನಿರ್ಮಿಸಿದರು. ರಸ್ತೆ ಮಾರುಕಟ್ಟೆಕೆರೆ, ದೇವಾಲಯಗಳನ್ನು ಕಟ್ಟಿಸುವ ಮೂಲಕ ಜನಜೀವನ ಸುಲಭವಾಗುವಂತೆ ಮಾಡಿದರು ಎಂದು ಅವರು ಹೇಳಿದರು. ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ಸರ್ಕಾರ 2025-26ರ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಕಲೆ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಶನವನ್ನು 2000 ರೂಪಾಯಿಗಳಿಂದ 2500, ರೂಪಾಯಿಗಳಿಗೆ ಹೆಚ್ಚಿಸಿ 32, ಕೋಟಿ ರೂಪಾಯಿಗಳ ಅನುದಾನ ಒದಗಿಸಿ ಆದೇಶ ಹೊರಡಿಸಿರುತ್ತಾರೆ. ನುಡಿದಂತೆ ನಡೆದ ಮುಖ್ಯ ಮಂತ್ರಿಯವರಿಗೆ ನಾಡಿನ ಕಲಾವಿದರ ಪರವಾಗಿ ಅವರು ಧನ್ಯವಾದಗಳನ್ನು ಹೇಳಿದರು.



ವಿಶ್ವನಾಥ ಕಲ್ಲಾ ಅರಣಕಲ್ ಅವರು ಕೆಂಪೇಗೌಡರ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಕೆಂಪೇಗೌಡರು 1510 ರಲ್ಲಿ ಜನಿಸಿದರು. ಇವರ ಆದರ್ಶ ತತ್ವಗಳನ್ನು ಪ್ರತಿಯೊಬ್ಬರು ಪಾಲಿಸಬೇಕು ಹಾಗೂ ನಮ್ಮ ನಿಜ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಅವರ ಬಗ್ಗೆ ಸಂಕ್ಷಿಪ್ತ ಮಾಹಿತಿ ನೀಡಿದರು. ಕಲಬುರಗಿ ಜಿಲ್ಲಾ ಕುಡ ಒಕ್ಕಲಿಗ ಅಭಿವೃದ್ಧಿ ಜಿಲ್ಲಾಧ್ಯಕ್ಷ ಶಿವಯೋಗಪ್ಪ ಜಿ ಚಿತ್ತಾಪೂರ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಸಮಾಜಿಕ ಭದ್ರತಾ ಯೋಜನೆ ಮತ್ತು ಪಿಂಚಣಿ ಶಾಖೆಯ ಸಹಾಯಕ ನಿರ್ದೇಶಕ ಶಿವಶರಣಪ್ಪ

ಎ ದನ್ನಿ, ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರು,

ಕುಡ ಒಕ್ಕಲಿಗ ರಾಜ್ಯದ್ಯಕ್ಷರಾದ ಶಿವರಾಜ ಪಾಟೀಲ್ ಕುಲಗುರ್ತಿ, ಗೌರಾವಾದ್ಯಕ್ಷ ಬಸವರಾಜ ಸರಡಗಿ, ಸೇರಿದಂತೆ ಅಧಿಕಾರಿಗಳು ಸಮಾಜ ಮುಖಂಡರು ಹಾಜರಿದ್ದರು.

## ನಾಡಪ್ರಭು ಕೆಂಪೇಗೌಡರ ಕೊಡುಗೆ ಅಪಾರ:ಸುರೇಖಾ ಕೆ.ಎ.ಎಸ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 27 : ನಾಡಿನ ರಾಜಧಾನಿ ಬೆಂಗಳೂರಿನ ಶಿಲ್ಪಿ ನಾಡಪ್ರಭು ಕೆಂಪೇಗೌಡರ ಕೊಡುಗೆ ಅಪಾರವಾಗಿದೆ. ಕೆಂಪೇಗೌಡರವರಂತಹ ಧೀಮಂತ ವ್ಯಕ್ತಿಗಳ, ಸಮರ್ಥ ಆಡಳಿತಗಾರರ ಅವಶ್ಯಕತೆಯಿದೆ ಎಂದು ಬೀದರ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸುರೇಖಾ ಕೆ.ಎ.ಎಸ್. ನುಡಿದರು.

ಅವರು ಶುಕ್ರವಾರ ಬೀದರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ನಾಡಪ್ರಭು ಕೆಂಪೇಗೌಡರ ಜನ್ಮ ದಿನದ ಪ್ರಯುಕ್ತ ನಾಡಪ್ರಭು ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆಸಲ್ಲಿಸಿ ಮಾತನಾಡಿದರು.

ಬೆಂಗಳೂರಿನ ರಚನಾ ವಿನ್ಯಾಸವನ್ನು ಜಾಗತಿಕ ಮಟ್ಟದಲ್ಲಿ ದಾಖಲಿಸಿದ ಖ್ಯಾತಿ ಕೆಂಪೇಗೌಡರಿಗೆ ಸಲ್ಲುತ್ತದೆ. ನಾಡ ರಕ್ಷಣೆಗಾಗಿಯೇ ಕಂಕಣಬದ್ಧರಾಗಿದ್ದ ಕುಟುಂಬದ ಕುಡಿಯಾಗಿದ್ದ ಕೆಂಪೇಗೌಡರಿಗೆ ವೀರ-ಶೂರ, ನಾಯಕತ್ವದ ಸಂಸ್ಕೃತಿ ರಕ್ತಗತವಾಗಿಯೇ ಬಂದಂತಿದೆ. ಹೀಗಾಗಿಯೇ ಅವರ ಆಡಳಿತ, ಕಾರ್ಯಗಳು ಅಜರಾಮರವಾಗಿವೆ ಎಂದರು. ಬೀದರ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ.ಪರಮೇಶ್ವರ ನಾಯ್ಕ.ಟಿ ಮಾತನಾಡಿ, ಬೆಂಗಳೂರಿನ ಆಕರ್ಷಣೆ ಹಾಗೂ ಖ್ಯಾತಿಯಲ್ಲಿ ನಾಡಪ್ರಭು ಕೆಂಪೇಗೌಡರ ಪಾತ್ರ ಮಹತ್ವದ್ದಾಗಿದೆ. ಅತ್ಯಂತ ಸುಂದರ, ಯೋಜನಾಬದ್ಧ ನಗರದ ಕಲ್ಪನೆಯ ಕನಸುಗಾರರಾಗಿದ್ದ ಕೆಂಪೇಗೌಡರು ಜಗತ್ತುಬೆರಗುಗೊಳ್ಳುವಂತೆ ಅಭಿವೃದ್ಧಿಯ ಕಾರ್ಯ ಕೈಗೊಂಡವರು. ಇಂದು ಜಗತ್ತಿನ 'ಸಿಲಿಕಾನ್ ಸಿಟಿ' ಎಂದೇ ಪ್ರಸಿದ್ಧವಾಗಿರುವ ಬೆಂಗಳೂರು ಅತ್ಯಂತ ಸ್ವಚ್ಛ, ಸುಂದರ ಹಾಗೂ ಹಚ್ಚಹಸಿರಿನಿಂದ ನಗರವನ್ನು ತಂಪು ಹವಾಗುಣ ಉಳಿಸಿಕೊಳ್ಳುವಂತೆ ಮಾಡಿದೆ. ಇಂತಹ ಭವ್ಯ ಬೆಂಗಳೂರಿನ ಶಿಲ್ಪಿ ಕೆಂಪೇಗೌಡರಾಗಿದ್ದರು ಎಂದರು.

ಈ ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯದ ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣವಾಗಿ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.27:ಬಾಲ ಹಾಗೂ ಕಿಶೋರ ಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇಧಿಸಲು ಬಾಲ್ಯಾವಸ್ಥೆ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ತಿದ್ದುಪಡಿ 2016 ರನ್ನು ಜಾರಿಗೆ ತರಲಾಗಿದೆ ಎಂದು ಜೇವರ್ಗಿ ತಾಲೂಕಾ ಕಾನೂನು ಸೇವಾ ಸಮಿತಿಯ ಸದಸ್ಯಕಾರ್ಯದರ್ಶಿಗಳು ಹಾಗೂ ಸಿವಿಲ್ ನ್ಯಾಯಾಧೀಶರಾದ ಕಾಶಿನಾಥ ವಿ ಉಪ್ಪಾರ ಅವರು ಹೇಳಿದರು. ಜೇವರ್ಗಿ ತಾಲೂಕಾ ಕಾನೂನು ಸೇವಾ ಸಮಿತಿ, ತಾಲೂಕಾ ನ್ಯಾಯವಾದಿಗಳ ಸಂಘ, ತಾಲೂಕಾಡಳಿತ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ವಿವಿಧ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಮಕ್ಕಳ ಸಹಾಯವಾಣಿ-1098/112 ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಚನ್ನೂರ ಆದರ್ಶ ವಿದ್ಯಾಲಯದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ "ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ" ಅರಿವು ಮತ್ತು ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಈ ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. 14 ರಿಂದ 18ರ ವಯಸ್ಸಿನ ಕಿಶೋರ ಕಾರ್ಮಿಕ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪಾ ಆರ್ ಹಳಿಮನಿ ಅವರು ಮಾತನಾಡಿ, ಯಾವುದೇ ಕಾರಣಕ್ಕೂ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳಬಾರದು, ಒಂದು ವೇಳೆ ಕೆಲಸಕ್ಕೆ ನೇಮಿಸಿದ್ದಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ತಿದ್ದುಪಡಿ 2016ರ ಅನ್ವಯ ಕಾನೂನು ಕ್ರಮ ಜರುಗಿಸಲಾಗುವುದು. ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ 20,000 ರೂ. ರಿಂದ 50,000 ರೂ. ಗಳ ವರೆಗೆ ದಂಡ ಅಥವಾ ಎರಡನ್ನೂ ವಿಧಿಸಲು ಅವಕಾಶವಿರುತ್ತದೆ. ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯವು ರೀಟ್ ಅರ್ಜಿ (ಸಿವಿಲ್) ಸಂ-ಖ್ಯೆ 465/1986 ರಲ್ಲಿ ನೀಡಿರುವ ನಿರ್ದೇಶನದನ್ವಯ ತಪ್ಪಿತಸ್ಥ ಮಾಲೀಕರು ತಾವು ನಿಯೋಜನೆಗೊಂಡ ಪ್ರತಿ ಮಗುವಿಗೆ 20,000 ರೂ.ಗಳ ಪರಿಹಾರವನ್ನು ಮಕ್ಕಳ ಪುನರ್ವಸತಿಗೆ ರಚಿಸಲಾದ ಕಲ್ಯಾಣ ನಿಧಿಗೆ ಪಾವತಿಸಬೇಕಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಜೇವರ್ಗಿ ತಹಶೀಲ್ದಾರ ಮಲ್ಲಣ್ಣಾ ಯುಗೋಡ್ ಅವರು ಮಾತನಾಡಿ, ಬಾಲ್ಯಾವಸ್ಥೆ ಹಾಗೂ ಕಿಶೊರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ 1986 ರನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣ ನಿಷೇಧಿಸಿದ್ದು ಹಾಗೂ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ ಹಾಗೂ ಸಂಸ್ಥೆಯ (ವಾರೆಂಟ್ ರಹಿತ ಬಂದಿಸಬಹುದಾದ) ಅಪರಾಧವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಜೇವರ್ಗಿ ಸಹಾಯಕ ಸರಕಾರಿ ಅಭಿಯೋಜಕ ನಾಗವಣಿ ಧನ್ನಾ, ಜೇವರ್ಗಿ ತಾಲೂಕಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ್ ಸೂಗೂರು, ನ್ಯಾಯವಾದಿ ಅಪ್ಪಸಾಬ ಕೋಳಕೂರು, ಸಿಡಿಪಿಓ ಎಸ್ ಎಂ ಪಾಟೀಲ್, ಪೊಲೀಸ್ ವೃತ್ತ ನಿರೀಕ್ಷಕ ರಾಜಾಸಾಬ್ ನದಾಫ್, ಕಲಬುರಗಿ 3ನೇ ವೃತ್ತದ ಹಿರಿಯ ಕಾರ್ಮಿಕ ನಿರೀಕ್ಷಕ ಕೆ.ಎಸ್.ಪ್ರಸನ್ನ, ಡಿಇಓ ಅನಂತ ಜೋಶಿ, ಡಾನ್ ಭಾಸ್ಕೋ ಸಂಸ್ಥೆ ಮತ್ತು ಮಾರ್ಗದರ್ಶಿ ಸಂಸ್ಥೆ, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಹಾಗೂ ಶಾಲಾ ಮಕ್ಕಳು ಮತ್ತು ಮುಖ್ಯಗುರುಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು. ಕಲಬುರಗಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂತೋಷ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಶಾಂತಕುಮಾರ ಅವರು ವಂದಿಸಿದರು.



## ವಿದ್ಯಾರ್ಥಿಗಳು ಶಿಕ್ಷಣವಂತರಾಗಿ: ಡಾ.ಗವಿಸಿದ್ಧಪ್ಪ

ಕಲಬುರಗಿ: ಜೂ.27:ಸಮಾಜದಲ್ಲಿ ಸಮಾನತೆ, ಸಹೋದರತೆ,ಯಿಂದ ಬಾಳಬೇಕಾದರೆ ಮೊದಲು ನಾವು ಶಿಕ್ಷಣವಂತರಾ ಗಬೇಕು ಅಂ-ದಾಗ ವಿದ್ಯಾರ್ಥಿಗಳ ಜೀವನದ ಸಾಥ9ಕವಾ ಗುವುದು ಎಂದು ಸಾಹಿತಿ, ಸಿರಿಗನ್ನಡ ವೇದಿಕೆಯ ಜಿಲ್ಲಾಧ್ಯಕ್ಷಡಾ.ಗವಿಸಿದ್ಧಪ್ಪಪಾಟೀಲಕರೆ ನೀಡಿದರು ಸಾಯಿಪ್ರತಾಪ ಪದವಿಮಹಾವಿದ್ಯಾಲಯಕಡಗಂಚಿಯ ಬಿ.ಎ.ಮತ್ತು ಬಿ.ಕಾಂ.ವಿದ್ಯಾರ್ಥಿಗಳಿಗೆ ಬೀಳ್ಕೊಡು ಗೆ ಮತ್ತು ವಿಶೇಷ ಉಪನ್ಯಾಸ ಕಾರ್ಯವನ್ನು ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ಓದಬೇಕು,ಪಾಠ ಪ್ರವಚನಗಳನ್ನು ಕೇಳಬೇಕು. ಆ ಮೂಲಕ ಜ್ಞಾನ ವಿಸ್ತರಿಸಿ ಕೊಂಡು ವ್ಯಕ್ತಿತ್ವ ವಿಕಸನಗೊಳಿಸಿಕೊಳ್ಳಬೇಕೆಂದು ಸಲಹೆ ನೀಡಿದರು.ಬುದ್ಧ -ಬಸವ-ಅಂಬೇಡ್ಕರ್ ಅವರುಎಂದೆಂದಿಗೂ ಪ್ರಸ್ತುತ ಅವರ ವಿಚಾರಧಾ-ರೆ ಅರಿತುಕೊಳ್ಳಬೇಕೆಂ ದರು. ವಿಶೇಷ ಉಪನ್ಯಾಸ ನೀಡಿದ ಕೇಂದ್ರ ಸಾಹಿತ್ಯ ಅಕಾಡೆಮಿ ಕನ್ನಡ ಸಲಹಾ ಸಮಿತಿ ಸದಸ್ಯರಾದ ಡಾ.ಜಯ ದೇವಿ ಗಾಯಕವಾಡ ಮಾತನಾಡಿ ಅಂಬೇಡ್ಕರ್ ಅವರು ನಮ್ಮ ಜೀವನದಲ್ಲಿ ಬರದೇ ಹೋಗಿದ್ದರೆ ವರ್ಗ,ವರ್ಣ,ಲಿಂ ಗ ತಾರತಮ್ಯ ಜಾತಿಯತೆ,ಅಸ್ಪೃಶ್ಯತೆಗಿಂತ ಮಹಿಳಾ ಶೋಷಣೆ ಸದಾ ನಡದೇ ಇದೆ ಇಂತಹ ಹೊತ್ತಿಗೆ ಆಶಾಕಿರ ಣವಾದವರು ಅಂಬೇಡ್ಕರ್ ಅವರು.ಅವರ ಹಿಂದು ಕೊಡ್ ಬಿಲ್,ಆಸ್ತಿಹಕ್ಕು,ಮಹಿಳಾ ಮೀಸಲಾತಿ ಜನಕರೆಂದರು. ವಿಶೇಷ ಉಪನ್ಯಾಸ ಅಂಬೇಡ್ಕರ್ ಮತ್ತು ಮಹಿಳೆ ಕುರಿತು ಮಾತನಾಡಿದ ಡಾ. ಜಯದೇವಿ ಗಾಯಕವಾಡರು ಈ ದೇಶದ ಪ್ರತಿಯೊಂದು ಜೀವಿಗೂ ಬದುಕುವ ಹಕ್ಕು ಶಿಕ್ಷಣದ ಹಕ್ಕು ರಾಜಕೀಯ ಸಾಮಾಜಿಕ ಧಾರ್ಮಿಕ ಶೋಷಣೆ ವಿರುದ್ಧ ಹೋರಾಟದ ಹಕ್ಕು.ಸ್ತ್ರೀಯರು ನಾಲ್ಕು ಗೋಡೆಗಳ ಮಧ್ಯೆ ಸೀಮಿತವಾಗಿರುತ್ತಿದ್ದರು ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ನೀಡಿರುವು ದರಿಂದ ನಾವು ಇಂದು ನಾಲ್ಕು ಅಕ್ಷರ ಕಲಿತು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆಯನ್ನು ಮಾಡುತ್ತಿದ್ದೇವೆ ಇದಕ್ಕೆ ಮುಖ್ಯ ಕಾರಣ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ನಮಗೆ ನೀಡಿದ್ದಾರೆ ವ ಋಢನಂಬಿಕೆಗಳನ್ನು ಆಚರಿಸುವುದು ಬಿಡಬೇಕು ಎಂದರು. ಸಂಸ್ಥೆಯ ಡಾ. ಸುನೀಲಕುಮಾರ ಕಾಂಬಳೆ ಪ್ರಾಸ್ತಾವಿಕ ನುಡಿಗನ್ನಾಡಿದರು . ಅತಿಥಿಗಳಾಗಿ ಶ್ರೀಮತಿ ಇಂದುಮತಿ ಮಾದಗೊಂಡ ಅಧ್ಯಕ್ಷರು ಗ್ರಾಮ ಪಂಚಾಯತ್ ಕಡಗಂಚಿ,ಶ್ರೀ ಸಿದ್ದರಾಮ ನಿಂಬರ್ಗಾ,ಪಿ. ಎಸ್.ಐ.ನರೋಣಾ ಉಪಸ್ಥಿತಿ ಇದ್ದರು.ಶ್ರೀಮತಿ ಸವಿತಾ ಕಾಂಬಳೆ. ಸಂಸ್ಥಾಪಕ ಅಧ್ಯಕ್ಷರು ಸಾಯಿ ಪ್ರತಾಪ ಪದವಿ ಮಹಾವಿದ್ಯಾಲಯ ಕಡಗಂಚಿ ಮಾತನಾಡಿ ಗುರುವಿನ ಗುಲಾಮನಾಗುವ ತನಕ ದೊರೆ-ಯದಣ್ಣ ಮುಕ್ತಿ ಎಂಬ ಹಾಡನ್ನು ಆಡುವುದರ ಮೂಲಕ ಗಮನ ಸೆಳೆದರು.ಶಿಕ್ಷಣ ಮಹತ್ವ ಹೇಳಿದರು.



ಅಧ್ಯಕ್ಷತೆವಹಿಸಿದ ಡಾ.ಅವಿನಾಶ.ಎಸ್. ದೇವನೂರ.ಪ್ರಾಚಾರ್ಯರು ಸಾಯಿ ಪ್ರತಾಪ ಪದವಿ ಮಹಾವಿದ್ಯಾಲಯ ಕಡಗಂಚಿ ಮಾತನಾಡಿ ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ಕಲಿಯಬೇಕು ಒಳ್ಳೆಯ ಸಂಸ್ಕಾರವನ್ನು ಪಡೆಯಬೇಕು ಉನ್ನತ ಶಿಕ್ಷಣ ಪಡೆದು ಉನ್ನತ ಮಟ್ಟದ ಹುದ್ದೆ ಪಡೆದು, ಸಮಾಜ ಕಾಲೇಜು ತಂದೆ ತಾಯಿಯ ಕೀರ್ತಿ ತರಬೇಕು ಎಂದು ಹೇಳಿದರು.

## ಊರಗ ರಕ್ಷಕ ಅಂಜಪ್ಪ ಕಂದೂರ್ ರವರ ಕೆಲಸ ಶ್ಲಾಘನೀಯ: ಡಾ. ಬಾಲಪ್ಪ. ಕೆ.

ಗುರುಮಠಕಲ್: ಜೂ. 27. ಮಳೆಗಾಲ ಬಂತೆಂದರೆ ಅಲ್ಲಲ್ಲಿ ಜೀವಜಂತುಗಳು ಜನವಸತಿ ಪ್ರದೇಶದತ್ತ ನುಗ್ಗುವದು ಸಾಮಾನ್ಯವಾಗಿದೆ.

ನಗರೀಕರಣದ ಹೆಸರಿನಲ್ಲಿ ಅರಣ್ಯ ಪ್ರದೇಶ ನಾಶದಿಂದ ಹಾವುಗಳು ಅಲ್ಲಲ್ಲಿ ಕಂಡು ಬರುತ್ತವೆ, ಜನರಿಗೆ ಹಾವಿನ ಕುರಿತು ಕಡಿಮೆ ತಿಳಿವಳಿಕೆ ಮತ್ತು ಅನಗತ್ಯ ಭಯದ ಕಾರಣದಿಂದ ಜನವಸತಿ ಪ್ರದೇಶ ಕಡೆಗೆ ಬಂದರೆ ಮೊದಲು ಸಾಯಿಸಲು ಮುಂದಾಗುತ್ತಾರೆ. ಆದರೆ ಗುರುಮಠಕಲ್ ಪಟ್ಟಣದ 20 ವರ್ಷದ ಯುವಕ ಅಂಜಪ್ಪ ಹಾವುಗಳನ್ನು ಹಿಡಿದು ರಕ್ಷಣೆ ಮಾಡಿ ಕಾಡಿಗೆ ಬಿಡುವ ಮಾನವೀಯ ಕೆಲಸಕ್ಕೆ ತೊಡಗಿಸಿಕೊಂಡಿರುವುದು ಶ್ಲಾಘನೀಯ ಸಂಗತಿ ಎಂದು ಉಪನ್ಯಾಸಕ ಡಾ.ಬಾಲಪ್ಪ ಕೆ ತಿಳಿಸಿದ್ದಾರೆ.

ಹಾವುಗಳು ಕಂಡರೆ ಧೈರ್ಯಗೆಡುವವರೇ ಹೆಚ್ಚು. ಇದಕ್ಕೆ ಅಪವಾದವೆಂಬಂತೆ ಅಂಜಪ್ಪ ಕಂದೂರ್ ಯಾವ ಭಯವೂ ಇಲ್ಲದೇ ನಾಗರ ಹಾವು, ಕೇರೆಹಾವು, ಹಸಿರಾವು, ಕೊಳಕು ಮಂಡಲ, ನೀರಾವು ಸೇರಿದಂತೆ ನಾನಾ ಜಾತಿಯ 2000 ಸಾವಿರಕ್ಕೂ ಅಧಿಕ ಹಾವುಗಳನ್ನು ಹಿಡಿದು ಸುರಕ್ಷಿತ ಸ್ಥಳಕ್ಕೆ ಬಿಡುವ ಮೂಲಕ ಸೈ ಎನಿಸಿದ್ದಾರೆ. ಅವುಗಳಿಗೆ ಯಾವುದೇ ಗಾಯಮಾಡದೇ ಪ್ಲಾಸ್ಟಿಕ್ ಚೀಲ, ಡಬ್ಬಾದಲ್ಲಿ ಹಾಕಿ ಸುರಕ್ಷಿತವಾಗಿ ಕಾಡಿಗೆ ಬಿಟ್ಟುಬರುತ್ತಾರೆ.



ಹಾವುಗಳ ರಕ್ಷಣೆ ಸಮಯದಲ್ಲಿ ಮೂರು ಬಾರಿ ಅವುಗಳಿಂದ ಕಚ್ಚಿಸಿ ಕೊಂಡು ಚಿಕಿತ್ಸೆ ಪಡೆದು ಮತ್ತೆ ಅದೇ ಪ್ರವೃತ್ತಿಯಲ್ಲಿ ಮುಂದುವರೆದಿದ್ದಾರೆ, ಹಾವು ಬಂದಿದೆ ಎಂದು ಯಾರೇ ಕರೆ ಮಾಡಿದರೂ ಸ್ಥಳಕ್ಕೆ ಧಾವಿಸಿ, ಹಾವನ್ನು ಹಿಡಿದು ಹಾವುಗಳನ್ನು ಸಾಯಿಸದೇ ಅವುಗಳಿಗೂ ಬದುಕುವ ಅವಕಾಶ ನೀಡಿ ಎಂದು ಜನರಿಗೆ ತಿಳಿ ಹೇಳುತ್ತಾನೆ, ಹಾವು ಕೈಯಿಂದಲೇ ಅದರ ಬಾಲ ಹಿಡಿದು ಅದನ್ನು ಚೀಲಕ್ಕೆ ಹಾಕಿ ಊರಿನ ಹೊರ ವಲಯದಲ್ಲಿ ಬಿಟ್ಟು ಬರುವದು ನಾಲ್ಕು ವರ್ಷಗಳಿಂದ ಮಾಡುತ್ತಿರುವದು ನನಗೆ ಖುಷಿ ತಂದಿದೆ ಎಂದು ನಗುತ್ತಾ ಹೇಳುತ್ತಾರೆ ಅಂಜಪ್ಪ.

## ಬಾಲ್ಯ ವಿವಾಹ: ವರ, ವಧು, ಸಂಬಂಧಿಕರ ವಿರುದ್ಧ ಪ್ರಕರಣ ದಾಖಲು

ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಜೂ.27:ಬಾಲ್ಯವಿವಾಹದ ಹಿನ್ನೆಲೆಯಲ್ಲಿ ವರ ಹಾಗೂ ವರನ ಸಂಬಂಧಿಗಳ ವಿರುದ್ಧ ಫರತಾಬಾದ್ ಪೋಲಿಸ್ ಠಾಣೆಯಲ್ಲಿ ಗ್ರಾಮೀಣ ಶಿಶು ಅಭಿವೃದ್ಧಿ ವಲಯ ಮೇಲ್ವಿಚಾರಕಿ ಶ್ರೀಮತಿ ಗೀತಾ ರಾಠೋಡ್ ಅವರು ನೀಡಿದ ದೂರಿನಡಿ ಪ್ರಕರಣ ದಾಖಲಾಗಿದೆ.

ತಾಲ್ಲೂಕಿನ ಪಾಣೆಗಾಂವ್‌ದ ವರ ಬಾಲು ತಂದೆ ರಾಮು (22), ಆತನ ತಂದೆ ರಾಮು, ತಾಯಿ ಲಲಿತಾ ಮತ್ತು ಬಾಲಕಿ ತಂದೆ ಅಫಜಲಪುರ ತಾಲ್ಲೂಕಿನ ಅರ್ಜುಣಗಿ ತಾಂಡಾದ ಆನಂದ್ ರಾಠೋಡ್, ತಾಯಿ, ವಿಜಯಲಕ್ಷ್ಮೀ ಅವರ ವಿರುದ್ಧ ಪ್ರಕರಣ ದಾಖಲಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.